ಬೆಂಗಳೂರು ಸಂಪುಟ: 16 ಸಂಚಿಕೆ: 21 ಪುಟ: 06 ಬುಧವಾರ 11-12-2024 Mail: mussanje2010@gmail.com www.mussanjenews.com ₹ 3

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh

### ನಾವೂ ಈಗ ಡಿಜಿಟಲೀಕರಣಗೊಂಡಿದ್ದೇವೆ...

ಪ್ರಿಯ ಓದುಗರೇ.....

ತಮ್ಮೆಲ್ಲರ ಒತ್ತಾಸೆಯ ಮೇರೆಗೆ ನಿಮ್ಮ 'ಮುಸ್ಸಂಜೆ' ಸಂಜೆ ದಿನ ಪತ್ರಿಕೆ ಈಗ ಡಿಜಿಟಲೀಕರಣಗೊಂಡಿದೆ. ಹದಿನೈದು ವಸಂತಗಳನ್ನು ಯಶಸ್ವಿಯಾಗಿ ಪೂರೈಸಿ 16ನೇ ವಸಂತಕ್ಕೆ ಕಾಲಿಟ್ಟ ಈ ಸುಸಂದರ್ಭದಲ್ಲಿ ರಾಜ್ಯದಲ್ಲೇ ಅಲ್ಲದೇ ದೇಶದ ವಿವಿಧೆಡೆಗಳಿಂದ ಸಹಕಾರ ದೊರೆತ ಹಿನ್ನೆಲೆಯಲ್ಲಿ ಪತ್ರಿಕೆಯನ್ನು ಡಿಜಿಟಲೀಕರಣಗೊಳಿಸಿ ನೂತನ ವೆಬ್‌ಸೈಟ್ ಲಾಂಚ್ ಮಾಡುವ ಮೂಲಕ onlineನಲ್ಲಿ ಪತ್ರಿಕೆ ವೀಕ್ಷಿಸಲು ಅವಕಾಶ ಕಲ್ಪಿಸಿದ್ದೇವೆ. ಈಗ ಪತ್ರಿಕೆಯನ್ನು ನೈಜ ಸುದ್ದಿಯೊಂದಿಗೆ ಹೊಸ ರೂಪದಲ್ಲಿ ನಿಮ್ಮ ಮುಂದಿಡುವ ಪ್ರಯತ್ನ ಮಾಡಿದ್ದೇವೆ. ನಮ್ಮ ಈ ಪ್ರಯತ್ನಕ್ಕೆ ಓದುಗರು, ಚಂದಾದಾರರೂ, ಹಾಗೂ ಜಾಹೀರಾತುದಾರರಾದ ತಮ್ಮ ಪ್ರೋತ್ಸಾಹವನ್ನು ಎಂದಿನಂತೆ ನಿರೀಕ್ಷಿಸುತ್ತೇವೆ...

www.mussanjenews.com

- ಇಂತಿ ಸಂಪಾದಕ

## ಸಕಲ ಸರ್ಕಾರಿ ಗೌರವದೊಂದಿಗೆ ಅಂತ್ಯ ಸಂಸ್ಕಾರ

# ಮರೆಯಾದ ಮುತ್ಸದ್ದಿ

## ಸೋಮನಹಳ್ಳಿಯಲ್ಲಿ ಇಂದು ಅಂತ್ಯಸಂಸ್ಕಾರ, ಮದ್ದೂರು ಬಂದ್‌ಗೆ ಕರೆ

ಬೆಂಗಳೂರು: ಮಂಗಳವಾರ ನಿಧನರಾಗಿರುವ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಅಂತ್ಯ ಸಂಸ್ಕಾರ ಅವರ ಹುಟ್ಟೂರು ಮಂಡ್ಯ ಜಿಲ್ಲೆ ಮದ್ದೂರು ತಾಲೂಕಿನ ಸೋಮನಹಳ್ಳಿಯಲ್ಲಿ ಒಕ್ಕಲಿಗ ಸಂಪ್ರದಾಯದಂತೆ ಬುಧವಾರ ಸಂಜೆ ನಡೆಯಲಿದೆ.

ಬೆಂಗಳೂರು-ಮೈಸೂರು ಹೆದ್ದಾರಿ ಪಕ್ಕದಲ್ಲಿರುವ ಕಾಫಿ ಡೇ ಹತ್ತಿರದ ಖಾಲಿ ಜಾಗದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ. ಕಾಫಿ ಡೇ ಮಾಲೀಕ ಸಿದ್ಧಾರ್ಥ್ ಪುತ್ರ ಹಾಗೂ ಎಸ್.ಎಂ.ಕೃಷ್ಣ ಅವರ ಮೊಮ್ಮಗ ಅಮರ್ಥ್ಯ ಹೆಗ್ಡೆ ಚಿತೆಗೆ ಅಗ್ನಿಸ್ಪರ್ಶ ಮಾಡಲಿದ್ದಾರೆ.

ವೇದಬ್ರಹ್ಮ ಭಾನುಪ್ರಕಾಶ್ ಶರ್ಮಾ ನೇತೃತ್ವದಲ್ಲಿ 15 ವೈದಿಕರ ತಂಡದಿಂದ ವಿಧಿ-ವಿಧಾನ ಕಾರ್ಯಗಳು ನಡೆಯಲಿವೆ. ಹಲವು ಯತಿಗಳು, ವಿವಿಧ ಮಠಗಳ ಸ್ವಾಮೀಜಿಗಳ ಸಮ್ಮುಖದಲ್ಲಿ ಕೃಷ್ಣ ಅವರ ಅಂತ್ಯಕ್ರಿಯೆ ಜರುಗಲಿದೆ,

ನಾಡು ಕಂಡ ಅಪರೂಪದ ರಾಜಕಾರಣಿ, ಮಾಜಿ ಮುಖ್ಯಮಂತ್ರಿ ಎಸ್.ಎಂ ಕೃಷ್ಣ ಅವರ ಅಂತ್ಯಕ್ರಿಯೆ ಇಂದು ನಡೆದಿದ್ದು, ನಾಡಿನ ಸರ್ವ ಜನರು ಅಗಲಿದ ನಾಯಕನಿಗೆ ಅಶ್ರುತರ್ಪಣ ಸಲ್ಲಿಸಿ ಭಾವಪೂರ್ಣ ವಿದಾಯ ಹೇಳಿದರು.

ಬೆಂಗಳೂರಿನ ಸದಾಶಿವ ನಗರದ ನಿವಾಸದಲ್ಲಿ ನಿನ್ನೆ






ಕೊನೆಯುಸಿರೆಳೆದಿದ್ದ ಮಾಜಿ ಮುಖ್ಯಮಂತ್ರಿ ಎಸ್.ಎಂ ಕೃಷ್ಣ ರವರ ಅಂತ್ಯಕ್ರಿಯೆ ಅವರ ಹುಟ್ಟೂರು ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಸೋಮನಹಳ್ಳಿಯಲ್ಲಿ ಸಕಲ ಸರ್ಕಾರಿ ಗೌರವದೊಂದಿಗೆ ಇಂದು ನೆರವೇರಿತು.

ಮಾಜಿ ಮುಖ್ಯಮಂತ್ರಿ ಎಸ್.ಎಂ ಕೃಷ್ಣ ಅವರ ಅಂತ್ಯಕ್ರಿಯೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಪುಟ 2

### ಮದ್ದೂರು ಬಂದ್

ಮಾಜಿ ಮುಖ್ಯಮಂತ್ರಿ, ವಿದೇಶಾಂಗ ವ್ಯವಹಾರ ಖಾತೆಯ ಸಚಿವ ಎಸ್.ಎಂ.ಕೃಷ್ಣ ಅವರ ಅಂತ್ಯಕ್ರಿಯೆ ಅವರ ಹುಟ್ಟೂರಾದ ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ಇಂದು ನಡೆಯುತ್ತಿರುವ ಹಿನ್ನೆಲೆಯಲ್ಲಿ ವಿವಿಧ ಪ್ರಗತಿಪರ ಸಂಘಟನೆಗಳು ಬುಧವಾರ ಮದ್ದೂರು ಬಂದ್‌ಗೆ, ಸ್ವಯಂಪ್ರೇರಿತವಾಗಿ ಕರೆ ನೀಡಿವೆ.ಒಕ್ಕಲಿಗ ಸಂಘ, ದಲಿತ ಸಂಘಟನೆಗಳು, ಬಾರ್ ಎಂಡ್ ರೆಸ್ಟೋರೆಂಟ್ ಮಾಲೀಕರ ಸಂಘ ಸೇರಿದಂತೆ ಹಲವು ಸಂಘಟನೆಗಳು ಬಂದ್‌ಗೆ ಬೆಂಬಲವನ್ನು ಸೂಚಿಸಿವೆ. ಬಂದ್ ಮೂಲಕ ಎಸ್.ಎಂ.ಕೃಷ್ಣ ಅವರಿಗೆ ಗೌರವ ಸಲ್ಲಿಸಲು ಸಂಘಟನೆಗಳು ನಿರ್ಧರಿಸಿವೆ.



**ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ಎಂ ಕೃಷ್ಣ ಅವರ ಪಾರ್ಥಿವ ಶರೀರವನ್ನು ಅಂತಿಮ ಸಂಸ್ಕಾರಕ್ಕೆ ಮದ್ದೂರಿಗೆ ಕೊಂಡೊಯ್ಯುವ ಮುನ್ನ ಸದಾಶಿವನಗರ ನಿವಾಸದಲ್ಲಿ ಪತ್ನಿ ಪ್ರೇಮಾ ಕೃಷ್ಣ, ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ಕುಟುಂಬ ಸದಸ್ಯರು ಆದಿ ಚುಂಚನಗಿರಿ ಮಹಾಸಂಸ್ಥಾನದ ನಿರ್ಮಲಾನಂದ ಶ್ರೀಗಳ ಸಮ್ಮುಖದಲ್ಲಿ ಪೂಜೆ ನೆರವೇರಿಸಿದರು.**

## ಪ್ರಧಾನಿ ನರೇಂದ್ರ ಮೋದಿ ಶೋಕ

**ಬೆಂಗಳೂರು:** ಮಾಜಿ ಮುಖ್ಯಮಂತ್ರಿ, ಮಾಜಿ ವಿದೇಶಾಂಗ ಸಚಿವರ ನಿಧನಕ್ಕೆ ಸಂತಾಪ ಸೂಚಿಸಿ ಪ್ರಧಾನಿ ನರೇಂದ್ರ ಮೋದಿ ಅವರು ಮಂಗಳವಾರ ರಾತ್ರಿ ಶೋಕ ಸಂದೇಶ ಕಳಿಸಿದ್ದಾರೆ. ಕೇಂದ್ರ ಸರ್ಕಾರದ ಪರವಾಗಿ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರ ಮೂಲಕ ಪ್ರಧಾನಿ ಮೋದಿ ಅವರು ಶೋಕ ಸಂದೇಶವುಳ್ಳ ಪತ್ರ ಕಳಿಸಿದ್ದು, ಸಚಿವ ಜೋಶಿ ಮತ್ತು ಮಾಜಿ ಸಿಎಂ, ಸಂಸದ ಬಸವರಾಜ ಬೊಮ್ಮಾಯಿ ಜತೆಗೂಡಿ ಪ್ರಧಾನಿಯವರ ಸಂತಾಪ ಸೂಚಕ ಪತ್ರವನ್ನು ಎಸ್.ಎಂ.ಕೃಷ್ಣ ಅವರ ಪತ್ನಿ ಪ್ರೇಮಾ ಕೃಷ್ಣ ಅವರಿಗೆ ಅರ್ಪಿಸಿದರು. ಸಚಿವ ಪ್ರಲ್ಹಾದ ಜೋಶಿ ಪುಟ 2

## ಲಾರಿ ಡಿಕ್ಕಿ; ದಂಪತಿ ಸ್ಥಳದಲ್ಲೇ ಸಾವು

ಗಂಗಾವತಿ (ಕೊಪ್ಪಳ): ಕೂಲಿ ಕೆಲಸದ ನಿಮಿತ್ತ ಗಂಗಾವತಿಗೆ ಹೊರಟಿದ್ದ ದಂಪತಿಯ ಬೈಕಿಗೆ ಲಾರಿ ಡಿಕ್ಕಿ ಹೊಡೆದ ಪರಿಣಾಮ ಪತಿ-ಪತ್ನಿ ಸ್ಥಳದಲ್ಲೇ ಮೃತಪಟ್ಟ ಘಟನೆ ತಾಲೂಕಿನ ಕೇಸರಹಟ್ಟಿ ಗ್ರಾಮದಲ್ಲಿ ನಡೆದಿದೆ. ಘಟನೆಯಲ್ಲಿ ಒಬ್ಬ ಬಾಲಕ ತೀವ್ರ ಗಾಯಗೊಂಡಿದ್ದು, ಆತನನ್ನು ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಮೃತರನ್ನು ಮರಕುಂಬಿ ಗ್ರಾಮದ ಮಂಜುನಾಥ ಪರಸಪ್ಪ ನಾಯಕ್ (38) ಹಾಗೂ ಆತನ ಪತ್ನಿ ನೇತ್ರಾವತಿ ಮಂಜುನಾಥ ನಾಯಕ್ (33) ಎಂದು ಗುರುತಿಸಲಾಗಿದೆ. ಗಾಯಾಳು ಬಾಲಕ ಮರಕುಂಬಿ ಗ್ರಾಮದ ಮಂಜುನಾಥ ನಾಯಕ್ ಎಂದು ತಿಳಿದುಬಂದಿದೆ.

ಘಟನೆಯ ವಿವರ: ತುರ್ತು ಕೆಲಸದ ನಿಮಿತ್ತ ಮೂವರು ಗ್ರಾಮದಿಂದ ಒಂದೇ ಬೈಕಿನಲ್ಲಿ ಗಂಗಾವತಿಗೆ ಹೊರಟಿದ್ದರು. ಮಾರ್ಗ ಮಧ್ಯೆ ಬೈಕಿಗೆ ಪೆಟ್ರೋಲ್ ಹಾಕಿಸುವ ಉದ್ದೇಶಕ್ಕೆ ಹೇರೂರು-ಕೆಸರಹಟ್ಟಿ ಮಧ್ಯೆ ಇರುವ ಪೆಟ್ರೋಲ್ ಬಂಕ್‌ನಲ್ಲಿ ಇಂಧನ ಹಾಕಿಸಿದ್ದಾರೆ. ಬಳಿಕ ಬಂಕ್‌ನಿಂದ ರಸ್ತೆಗೆ ಬರುವ ಸಂದರ್ಭದಲ್ಲಿ ಎದುರಿನಿಂದ ವೇಗವಾಗಿ ಬಂದ ಲಾರಿ ಡಿಕ್ಕಿ ಹೊಡೆದ ಪರಿಣಾಮ ಇಬ್ಬರೂ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ.



ಡಿಕ್ಕಿ ರಭಸಕ್ಕೆ ಬೈಕಿನ ಹಿಂಬದಿಯಲ್ಲಿ ಕುಳಿತಿದ್ದ ಮಂಜುನಾಥನು ಮೂರ್ನಾಲ್ಕು ಅಡಿ ಹಾರಿ ಮುಳ್ಳಿನ ಪೊದೆಯಲ್ಲಿ ಬಿದ್ದಿದ್ದಾನೆ. ಘಟನೆ ಬಳಿಕ ಲಾರಿಯನ್ನು ಸ್ಥಳದಲ್ಲೇ ಬಿಟ್ಟು ಚಾಲಕ ಪರಾರಿಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಬಗ್ಗೆ ಗಂಗಾವತಿ ಗ್ರಾಮೀಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

### ಮೂವರು ನೀರುಪಾಲು



**ಕೋಲಾರ:** ಮುಳಬಾಗಿಲಿನ ಶ್ರಾವಂತಿ (15) ಎಂಬಾಕೆಯೇ ನೀರಿನಲ್ಲಿ ಮುಳುಗಿ ಸಾವಿಗೀಡಾದ ವಿದ್ಯಾರ್ಥಿನಿ. ಮುರುಡೇಶ್ವರ ಸಮುದ್ರಕ್ಕಿಳಿದಿದ್ದ ಮೂವರು ವಿದ್ಯಾರ್ಥಿನಿಯರು ಕಾಣೆಯಾಗಿದ್ದಾರೆ. ದೀಕ್ಷಾ (15), ಲಾವಣ್ಯ (15) ಹಾಗೂ ವಂದನಾ (15) ಕಾಣೆಯಾಗಿರುವ ವಿದ್ಯಾರ್ಥಿನಿಯರಾಗಿದ್ದಾರೆ. 46 ಶಾಲಾ ವಿದ್ಯಾರ್ಥಿಗಳು, 6 ಶಿಕ್ಷಕರು ಸೇರಿದಂತೆ ಒಟ್ಟು 57 ಜನರು ಬಸ್‌ನಲ್ಲಿ ಪ್ರವಾಸಕ್ಕೆ ಬಂದಿದ್ರು. ಸಂಜೆ ವೇಳೆ ಸಮುದ್ರ ನೀರಿನಲ್ಲಿ ಈಜುವಾಗ ವಿದ್ಯಾರ್ಥಿಗಳು ನೀರಿನಲ್ಲಿ ಕೊಚ್ಚಿ ಹೋಗಿದ್ದರು. ಕಾಣೆಯಾಗಿರುವ ಇನ್ನೂ ಮೂವರು ವಿದ್ಯಾರ್ಥಿನಿಯರಿಗಾಗಿ ಶೋಧಕಾರ್ಯ ಮುಂದುವರಿದಿದೆ. ನೀರಿನಲ್ಲಿ ಮುಳುಗಿದ್ದ ಮೂವರು ವಿದ್ಯಾರ್ಥಿನಿಯರನ್ನ ಖಾಸಗಿ ಆಸ್ಪತ್ರೆಯಲ್ಲಿ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಯಶೋಧಾ (15), ವೀಕ್ಷಣಾ (15), ಲಿಪಿಕಾ (15) ಚಿಕಿತ್ಸೆ ಪಡೆಯುತ್ತಿರುವ ವಿದ್ಯಾರ್ಥಿನಿಯರಾಗಿದ್ದಾರೆ. ಕೋಲಾರ ಜಿಲ್ಲೆಯ ಮುಳಬಾಗಿಲು ಮೂಲದ ಶಾಲಾ ವಿದ್ಯಾರ್ಥಿಗಳು ಪ್ರವಾಸಕ್ಕೆಂದು ಬಂದಿದ್ದರು. ಕೋಲಾರ ಜಿಲ್ಲೆಯ ಮುಳಬಾಗಿಲು ಕೊತ್ತೂರು ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಗಳು ಪ್ರವಾಸಕ್ಕೆ ಬಂದಿದ್ರು 46 ಶಾಲಾ ವಿದ್ಯಾರ್ಥಿಗಳು, 6 ಶಿಕ್ಷಕರು ಸೇರಿದಂತೆ ಪುಟ 2

## ದೇವನೂರ ಮಹದೇವಗೆ ವೈಕಂ ಪ್ರಶಸ್ತಿ: ಪ್ರದಾನ

**ಮೈಸೂರು:** ಕನ್ನಡದ ಹೆಸರಾಂತ ಸಾಹಿತಿ ದೇವನೂರ ಮಹದೇವ ಅವರಿಗೆ ವೈಕಂ ಪ್ರಶಸ್ತಿ. ತಮಿಳುನಾಡು ಸರ್ಕಾರದ 2024ರ ಸಾಲಿನ "ವೈಕಂ" ಪ್ರಶಸ್ತಿಗೆ ದೇಮ ಬಾಜನ.



ದಮನಿತರ ಪರ ಶ್ರಮಿಸಿದವರಿಗೆ ನೀಡುವ ವೈಕಂ ಪ್ರಶಸ್ತಿ. ತಮಿಳುನಾಡು ಸಿಎಂ ಎಂ.ಕೆ ಸ್ಟಾಲಿನ್ ಘೋಷಣೆ. ಈ ಪ್ರಶಸ್ತಿ 1 ಲಕ್ಷ ರೂ. ನಗದು ಹಾಗೂ ಸುವರ್ಣ ಲೇಪಿತ ಪದಕ ಪ್ರಮಾಣಪತ್ರ ಒಳಗೊಂಡಿದೆ.

ಆದರೆ ಈ ಬಾರಿ ವಿಶೇಷವಾಗಿ ಸಾಹಿತಿ ದೇವನೂರು ಮಹಾದೇವ ಅವರಿಗೆ 5 ಲಕ್ಷ ರೂ. ನಗದು ಬಹುಮಾನ ಘೋಷಣೆ. ನಾಳೆ ಕೇರಳಾದ ವೈಕಂ ನಲ್ಲಿ ಪ್ರಶಸ್ತಿ ಪ್ರದಾನ."ವೈಕಂ" ಪುಟ 2

## ಸ್ನೇಹಮಯಿ ಕೃಷ್ಣ ಸ್ವಯಂ ನಿಯಂತ್ರಣ ವಿಧಿಸಿಕೊಳ್ಳಬೇಕು : ಕೋರ್ಟ್ ತಾಕೀತು

ಬೆಂಗಳೂರು:ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನಗಳ ಅಕ್ರಮ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೋರ್ಟ್ ವಿಚಾರಣೆ ವೇಳೆ ದೂರುದಾರ ಸ್ನೇಹಮಯಿ ಕೃಷ್ಣ ಅವರ ನಡೆ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಅವರ ಪರ ವಕೀಲ ಕೆ.ಜಿ.ರಾಘವನ್ , ಕೋರ್ಟ್ ಕ್ಷಮೆ ಕೋರಿದರು. ಅಡ್ವಕೇಟ್ ಜನರಲ್ ವಿರುದ್ಧ ದೂರುದಾರ ಸ್ನೇಹಮಯಿ ಕೃಷ್ಣ ಮಾಧ್ಯಮಗಳಲ್ಲಿ ಆರೋಪ ಮಾಡುತ್ತಿರುವ ಬಗ್ಗೆ ಸರಕಾರದ ಪರ ವಕೀಲರಾದ ಕಪಿಲ್ ಸಿಬಲ್ ನ್ಯಾಯಾಲಯದ ಗಮನ ಸೆಳೆದ ವೇಳೆ ಈ ಬೆಳವಣಿಗೆ ನಡೆದಿದೆ.



**ಹಿನ್ನೆಲೆ:** ಶಾಸಕ-ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಯ ವಿಶೇಷ ನ್ಯಾಯಪೀಠದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರು ಮಂಗಳವಾರ ವಿಚಾರಣೆ ನಡೆಸಿದರು. ಈ ವೇಳೆ 'ಅಡ್ವಕೇಟ್ ಜನರಲ್ ಕೆ.ಶಶಿಕಿರಣ್ ಶೆಟ್ಟಿ ವಿರುದ್ಧ ಅರ್ಜಿದಾರ ಸ್ನೇಹಮಯಿ ಕೃಷ್ಣ ಗಂಭೀರ ಆರೋಪ ಮಾಡುತ್ತಿದ್ದು, ಆ ಕುರಿತ ವರದಿಗಳು ಪತ್ರಿಕೆಯಲ್ಲಿ ಪ್ರಕಟವಾಗಿವೆ. ಇದು ನ್ಯಾಯಾಲಯದಲ್ಲಿರುವ ವಿಚಾರಣೆಯ ಮೇಲೆ ಅಡ್ಡ ಪರಿಣಾಮ ಉಂಟು ಮಾಡುತ್ತದೆ. ಅರ್ಜಿದಾರರ ಈ ನಡವಳಿಕೆಯನ್ನು ಕೋರ್ಟ್ ಗಂಭೀರವಾಗಿ ಪರಿಗಣಿಸಬೇಕು' ಎಂದು ಕಪಿಲ್ ಸಿಬಲ್ ನ್ಯಾಯಪೀಠಕ್ಕೆ ಮನವಿ ಮಾಡಿದರು.

ಆಗ ಅರ್ಜಿದಾರರ ಪರ ವಕೀಲರಾದ ಕೆ.ಜಿ.ರಾಘವನ್ ಅವರನ್ನು ಉದ್ದೇಶಿಸಿದ ನ್ಯಾಯಪೀಠ, 'ಏನಿದೆಲ್ಲಾ? ನ್ಯಾಯಾಲಯದಲ್ಲಿ ಅರ್ಜಿ ವಿಚಾರಣೆ ಪುಟ 2

## ವಯನಾಡು ಕಳಕಳಿ ಗುಲಾಮಗಿರಿಯ ಸಂಕೇತ

**ಬೆಂಗಳೂರು:** ಕೇರಳ ನೆರೆ ಸಂತ್ರಸ್ತರಿಗೆ ಮನೆ ನಿರ್ಮಾಣ ಮಾಡುವ ವಿಚಾರಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿರುವ ವಿಧಾನ ಪರಿಷತ್ ಸದಸ್ಯ ಸಿಟಿ ರವಿ, ಸಿಎಂ ಸಿದ್ದರಾಮಯ್ಯನವರೇ ನಿಮ್ಮ ವಯನಾಡು ಕಳಕಳಿ ಗುಲಾಮಗಿರಿಯ ಸಂಕೇತ ಎಂದು ಕಿಡಿಕಾರಿದ್ದಾರೆ. ಈ ಕುರಿತು ಮಾತನಾಡಿದ ಸಿ.ಟಿ ರವಿ, ರಾಜ್ಯ ಸರ್ಕಾರ ಕೇರಳದಲ್ಲಿ ನೆರೆ ಸಂತ್ರಸ್ತರಿಗೆ ಮನೆ ಕಟ್ಟಿಕೊಡುವ ಭರವಸೆ ನೀಡಿದೆ. ಮಾನವೀಯ ನೆಲೆಯಲ್ಲಿ ಮನೆ ಕಟ್ಟಿಕೊಡುವುದು ಸರಿಯಿದೆ. ಆದರೆ, ಸಿದ್ದರಾಮಯ್ಯ ಅವರ ಈ ನಡೆ ಮಾನವೀಯ ನೆಲೆಯಿಂದ ಕಾಣುತ್ತಿಲ್ಲ. ಇದು ಗುಲಾಮಗಿರಿಯ ಸಂಕೇತ. ವಯನಾಡಿನಲ್ಲಿ ಪ್ರಿಯಾಂಕಾ ಗಾಂಧಿ ಸಂಸದರಾಗಿದ್ದಾರೆ. ನಮ್ಮ ರಾಜ್ಯದಲ್ಲಿನ ಪುಟ 2

## ಕಾಂಗ್ರೆಸ್ ಜೊತೆ ಮೈತ್ರಿ ಇಲ್ಲ, ಸ್ವಂತ ಬಲದ ಮೇಲೆ ಏಕಾಂಗಿ ಹೋರಾಟ

**ನವದೆಹಲಿ:** ಮುಂದಿನ ವರ್ಷದ ಆರಂಭದಲ್ಲೇ ಎದುರಾಗಲಿರುವ ರಾಷ್ಟ್ರ ರಾಜಧಾನಿ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಆಮ್ ಆದ್ಮಿ ಪಕ್ಷ ಏಕಾಂಗಿಯಾಗಿ ಸ್ಪರ್ಧಿಸಲಿದೆ ಎಂದು ಎಎಪಿ ಸಂಚಾಲಕ ಅರವಿಂದ್ ಕೇಜ್ರಿವಾಲ್ ಸ್ಪಷ್ಟಪಡಿಸಿದ್ದಾರೆ. ಕಾಂಗ್ರೆಸ್ ಜೊತೆ ಮೈತ್ರಿ ಮಾಡಿಕೊಳ್ಳುವ ಯಾವುದೇ ಪ್ರಸ್ತಾಪಗಳು ನಮ್ಮ ಮುಂದೆ ಇಲ್ಲ ಎಂದು ಅವರು ದೃಢಪಡಿಸಿದ್ದಾರೆ

ಕಾಂಗ್ರೆಸ್ ಮತ್ತು ಎಎಪಿ ನಡುವೆ ಮೈತ್ರಿ ಏರ್ಪಟ್ಟಿದೆ ಎಂಬ ಗಾಳಿ ಸುದ್ದಿಗೆ ಎಕ್ಸ್ ಮೂಲಕ ಅವರು ಸ್ಪಷ್ಟನೆ ನೀಡಿರುವ ಕೇಜ್ರಿವಾಲ್, ನಮ್ಮ ಪಕ್ಷ ಏಕಾಂಗಿಯಾಗಿ ಸ್ವಂತ ಬಲದ ಮೇಲೆ ಹೋರಾಟ ನಡೆಸಲಿದೆ. ಕಾಂಗ್ರೆಸ್ ಜೊತೆಗೆ ಯಾವುದೇ ಮೈತ್ರಿ ಮಾಡಿಕೊಳ್ಳುವುದಿಲ್ಲ ಎಂದು ಅವರು ಹೇಳಿದ್ದಾರೆ.

ಕಳೆದ ಕೆಲವು ದಿನಗಳ ಹಿಂದೆ ದೆಹಲಿಯಲ್ಲಿ ಬಿಜೆಪಿ ವಿರುದ್ಧ ಹೋರಾಡಲು ಕಾಂಗ್ರೆಸ್ ಮತ್ತು ಎಎಪಿ ಮೈತ್ರಿ ಮಾಡಿಕೊಳ್ಳಲಿವೆ.



ಕಾಂಗ್ರೆಸ್- ಎಎಪಿ ಮೈತ್ರಿ ಒಪ್ಪಂದವೂ ಅಂತಿಮ ಹಂತದಲ್ಲಿ ಇದೆ ಎಂಬ ಸುದ್ದಿಗಳು ಹರದಾಡಿದ್ದವು. ಈ ಎಲ್ಲ ಊಹಾಪೋಹಗಳಿಗೆ ಅರವಿಂದ ಕೇಜ್ರಿವಾಲ್ ತೆರೆ ಎಳೆದಿದ್ದಾರೆ.

**ಮೈತ್ರಿ ನಿರಾಕರಣೆ ಮೊದಲೇನೂ ಅಲ್ಲ:** ಇಂಡಿಯಾ ಒಕ್ಕೂಟದ ಭಾಗವಾಗಿದ್ದರೂ ಕಾಂಗ್ರೆಸ್ ಜೊತೆ ಮೈತ್ರಿಗೆ ಎಎಪಿ ನಿರಾಕರಿಸಿರುವುದು ಇದು ಮೊದಲ ಬಾರಿಯೇನೂ ಅಲ್ಲ. ಈ ಮೊದಲು ಕೂಡ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ನಾವು ಕಾಂಗ್ರೆಸ್ ಸಖ್ಯ ಬೆಳೆಸುವುದಿಲ್ಲ ಎಂದಿದ್ದರು. ಕಾಂಗ್ರೆಸ್ ಕೂಡ ತಾವು ದೆಹಲಿಯಲ್ಲಿ ಏಕಾಂಗಿಯಾಗಿ ಕಣಕ್ಕೆ ಇಳಿಯುವುದಾಗಿ ಘೋಷಿಸಿತ್ತು. ದೆಹಲಿ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ದೇವೇಂದ್ರ ಯಾದವ್ ಮಾತನಾಡಿ, ನಮ್ಮ ಪಕ್ಷ 70 ವಿಧಾನಸಭಾ ಕ್ಷೇತ್ರದಲ್ಲಿ ಏಕಾಂಗಿಯಾಗಿ ಹೋರಾಟ ಮಾಡಲಿದೆ ಎಂದಿದ್ದರು.

2024ರ ಲೋಕಸಭಾ ಚುನಾವಣೆಯಲ್ಲಿ ಪಂಜಾಬ್ ನಲ್ಲಿ ಕಾಂಗ್ರೆಸ್ ಮೈತ್ರಿಯನ್ನು ಕೇಜ್ರಿವಾಲ್ ನಿರಾಕರಿಸಿ, 13 ಕ್ಷೇತ್ರದಲ್ಲಿ ಸ್ವಯಂ ಬಲದ ಮೇಲೆ ಸ್ಪರ್ಧಿಸಿತು. ಹರಿಯಾಣದ ವಿಧಾನಸಭೆ ಚುನಾವಣೆಯಲ್ಲೂ ಈ ಎರಡು ಪಕ್ಷಗಳು ಸೀಟು ಹಂಚಿಕೆ ಒಪ್ಪಂದದಲ್ಲಿ ವಿಫಲಗೊಂಡು ಸ್ವತಂತ್ರವಾಗಿ ಸ್ಪರ್ಧಿಸಿದವು.

# ಮರೆಯಾದ ಮುತ್ಸದ್ದಿ



**ಮೊದಲ ಪುಟದಿಂದ**

ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸೇರಿದಂತೆ ರಾಜ್ಯದ ಹಲವು ಸಚಿವರು, ಶಾಸಕರುಗಳು, ರಾಜಕೀಯ ನಾಯಕರುಗಳು ಭಾಗಿಯಾಗಿದ್ದರು.

ಅಂತ್ಯಕ್ರಿಯೆ ಹಿನ್ನೆಲೆಯಲ್ಲಿ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಮಂಗಳವಾರ ಸೋಮನಹಳ್ಳಿಗೆ ಆಗಮಿಸಿ, ಸಿದ್ಧತೆಗಳ ಪರಿಶೀಲನೆ ನಡೆಸಿದರು.

ಈ ವೇಳೆ ಮಾತನಾಡಿದ ಅವರು, ಬೆಳಗ್ಗೆ 8 ಗಂಟೆಯವರೆಗೆ ಸದಾಶಿವನಗರದಲ್ಲಿರುವ ಕೃಷ್ಣ ಅವರ ನಿವಾಸದಲ್ಲಿ ಅಂತಿಮ ದರ್ಶನಕ್ಕೆ ಅವಕಾಶ ಕಲ್ಪಿಸಿಕೊಡಲಾಗಿದೆ. 8 ಗಂಟೆಗೆ ಮೃತದೇಹವನ್ನು ವಾಹನದ ಮೂಲಕ ಸೋಮನಹಳ್ಳಿಗೆ ತರಲಾಗುತ್ತದೆ. ಮಾರ್ಗಮಧ್ಯೆ ಕೆಂಗೇರಿ, ಬಿಡದಿ, ರಾಮನಗರ ಮತ್ತು ಚನ್ನಪಟ್ಟಣದ ಒಂದೊಂದು ಕಡೆ ಐದೈದು ನಿಮಿಷ ಅಂತಿಮ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗುತ್ತದೆ. ಸಾರ್ವಜನಿಕರು ಬೆಳಗ್ಗೆ 10ರಿಂದ ಮಧ್ಯಾಹ್ನ 3 ಗಂಟೆವರೆಗೆ ಅಂತಿಮ ದರ್ಶನ ಪಡೆಯಬಹುದು ಎಂದು ಹೇಳಿದರು.

ಸಕಲ ಸರ್ಕಾರಿ ಗೌರವದೊಂದಿಗೆ, ಒಕ್ಕಲಿಗ ಸಂಪ್ರದಾಯದಂತೆ 3 ಗಂಟೆಗೆ ಅಂತ್ಯಕ್ರಿಯೆ ನೆರವೇರಲಿದೆ. ಸಿಎಂ ಸಿದ್ದರಾಮಯ್ಯ, ಎಲ್ಲ ಸಚಿವರು ಮತ್ತು ಪಕ್ಷದ ಎಲ್ಲಾ ಶಾಸಕರು ಅಂತ್ಯಸಂಸ್ಕಾರದಲ್ಲಿ ಭಾಗವಹಿಸಲಿದ್ದಾರೆ. ಕೇಂದ್ರ ನಾಯಕರು ಬರುವ ಬಗ್ಗೆ ನನಗೆ ಮಾಹಿತಿ ಇಲ್ಲ. ಬುಧವಾರ ರಾಜ್ಯಾದ್ಯಂತ ರಜೆ ಘೋಷಿಸಲಾಗಿದೆ. ಸದನದಲ್ಲೂ ಸಂತಾಪ ಸೂಚಿಸಲಾಗಿದೆ. 3 ದಿನಗಳ ಕಾಲ ರಾಜ್ಯದಲ್ಲಿ ಶೋಕಾಚರಣೆ ಘೋಷಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿಗಳಾದ ಯಶವಂತ್ ವಿ. ಗುರುಕರ್ ಅವರು ಮಾತನಾಡಿ, ಬೆಂಗಳೂರಿನಿಂದ ಮದ್ದೂರಿಗೆ ತೆರಳುವ ಮಾರ್ಗಮಧ್ಯೆ ರಾಮನಗರ ಜಿಲ್ಲೆಯ ಬಿಡದಿ, ರಾಮನಗರ ಪಟ್ಟಣ, ಚನ್ನಪಟ್ಟಣದಲ್ಲಿ ಜಿಲ್ಲೆಯ ನಾಗರಿಕರು, ಎಸ್.ಎಂ.ಕೃಷ್ಣ ಅವರ ಅಂತಿಮ ದರ್ಶನ ಪಡೆಯಲು ಜಿಲ್ಲಾಡಳಿತದಿಂದ ಅಗತ್ಯ ವ್ಯವಸ್ಥೆ ಮಾಡಲಾಗಿದೆ ಎಂದರು,

ಎಸ್.ಎಂ. ಕೃಷ್ಣ ಅವರ ಪಾರ್ಥಿವ ಶರೀರವು ಬುಧವಾರ ಬೆಂಗಳೂರಿನ ಸದಾಶಿವ ನಗರದಿಂದ ಮಂಡ್ಯದ ಸೋಮನಹಳ್ಳಿಗೆ ಹಳೇ ಮೈಸೂರು ರಸ್ತೆಯಲ್ಲಿ ಹಾದುಹೋಗುತ್ತದೆ. ರಾಮನಗರ ಜಿಲ್ಲೆಯ ಬಿಡದಿಯ ಬಿ.ಜಿ.ಎಸ್ ಸರ್ಕಲ್‌ನಲ್ಲಿ ಅಂದು ಬೆಳಗ್ಗೆ 8.45 ರಿಂದ 9 ಗಂಟೆಗೆ, ರಾಮನಗರದ ಐಜೂರು ಸರ್ಕಲ್‌ನಲ್ಲಿ ಬೆಳಿಗ್ಗೆ 9.30ಕ್ಕೆ ಆಗಮಿಸುತ್ತದೆ. ನಂತರ ಚನ್ನಪಟ್ಟಣದ ಗಾಂಧಿ ಭವನ ಸರ್ಕಲ್‌ನಲ್ಲಿ ಬೆಳಗ್ಗೆ 10 ಗಂಟೆಯಿಂದ 10.15ಕ್ಕೆ ಆಗಮಿಸುತ್ತದೆ. ಈ ಸಂದರ್ಭದಲ್ಲಿ 15 ರಿಂದ 20 ನಿಮಿಷಗಳವರೆಗೆ ಸಾರ್ವಜನಿಕರ ಅಂತಿಮ ದರ್ಶನಕ್ಕೆ ಇರಿಸಲಾಗುವುದು. ಇದಕ್ಕೆ ಅಗತ್ಯ ವ್ಯವಸ್ಥೆಗಳನ್ನು ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಪುಷ್ಪಾಲಂಕೃತ ಗಾಜಿನ ವಾಹನದಲ್ಲಿ ಕೃಷ್ಣರವರ ಪಾರ್ಥಿವ ಶರೀರದ ಅಂತಿಮ ಯಾತ್ರೆ ನಡೆದಿದ್ದು, ದಾರಿಯುದ್ದಕ್ಕೂ ಸಾವಿರಾರು ಜನ ದರ್ಶನ ಪಡೆದು ಕಂಬನಿ ಮಿಡಿದು ಅಗಲಿದ ನಾಯಕನಿಗೆ ಗೌರವ ನಮನ ಸಲ್ಲಿಸಿದರು.

ಬೆಂಗಳೂರಿನ ಸದಾಶಿವ ನಗರದ ಎಸ್.ಎಂ ಕೃಷ್ಣ ಅವರ ನಿವಾಸದಲ್ಲಿ ಪಾರ್ಥೀವ ಶರೀರದ ಅಂತಿಮಯಾತ್ರೆ ಆರಂಭಕ್ಕೂ ಮುನ್ನ ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ, ಎಸ್.ಎಂ ಕೃಷ್ಣ ಅವರ ಪತ್ನಿ ಪ್ರೇಮಾ ಕೃಷ್ಣ, ಅವರ ಪುತ್ರಿಯರು, ಮೊಮ್ಮಕ್ಕಳು ಹಾಗೂ ಅವರ ಹತ್ತಿರದ ಸಂಬಂಧಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಇವರುಗಳು ಪಾರ್ಥೀವ ಶರೀರಕ್ಕೆ ಪೂಜೆ ಸಲ್ಲಿಸಿದರು. ನಂತರ ಪಾರ್ಥೀವ ಶರೀರದ ಮೆರವಣಿಗೆ ಆರಂಭವಾಗಿ ಬೆಂಗಳೂರಿನ ಟೌನ್‌ಹಾಲ್,ಮೈಸೂರು ಸರ್ಕಲ್, ರಾಜರಾಜೇಶ್ವರಿ ಗೇಟ್, ಕೆಂಗೇರಿ, ಬಿಡದಿ, ರಾಮನಗರ, ಚೆನ್ನಪಟ್ಟಣ ಮೂಲಕ ಮದ್ದೂರಿನ ಸೋಮನಹಳ್ಳಿಗೆ ತಲುಪಿತು.

ಮಾರ್ಗಮಧ್ಯೆ ಕೆಂಗೇರಿ, ಬಿಡದಿ, ರಾಮನಗರ, ಚೆನ್ನಪಟ್ಟಣಗಳಲ್ಲೂ ಕೆಲ ಕಾಲ ಪಾರ್ಥೀವ ಶರೀರದ ಅಂತಿಮ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗಿತ್ತು.

ಸೋಮನಹಳ್ಳಿಯ ಎಸ್.ಎಂ ಕೃಷ್ಣ ಅವರ ನಿವಾಸದಲ್ಲಿ ಅವರ ಪಾರ್ಥೀವ ಶರೀರವನ್ನು ಸಾರ್ವಜನಿಕರ ದರ್ಶನಕ್ಕಿಟ್ಟು, ನಂತರ ಅಂತ್ಯಕ್ರಿಯೆ ನೆರವೇರಿತು.

ಮಾಜಿ ಮುಖ್ಯಮಂತ್ರಿ ಎಸ್ಸೆಂ ಕ್ರಷ್ಣ ಅಂತಿಮ ಯಾತ್ರೆಯ ವೇಳೆ ಮೈಸೂರು ರಸ್ತೆಯಲ್ಲಿ ಜನರು ಅಂತಿಮ ದರ್ಶನ ಪಡೆದರು. ಪಾರ್ಥೀವ ಶರೀರ ಸಾಗಿದ ದಾರಿಯ ಇಕ್ಕೆಲ್ಲಗಳಲ್ಲೂ ಸಾವಿರಾರು ಜನ ನಿಂತು ಎಸ್.ಎಂ ಕೃಷ್ಣ ಅವರ ಪಾರ್ಥೀವ ಶರೀರದ ಅಂತಿಮ ದರ್ಶನ ಪಡೆದು ಅಗಲಿದ ನಾಯಕನ ನಿಧನಕ್ಕೆ ಕಂಬನಿ ಮಿಡಿದು ಅಗಲಿದ ನಾಯಕನಿಗೆ ಕೈಮುಗಿದು ಅಂತಿಮ ಗೌರವ ಸಲ್ಲಿಸಿದರು.

**ಬಿಗಿ ಭದ್ರತೆ, ವಿಶೇಷ ವ್ಯವಸ್ಥೆ:**

ಮಾಜಿ ಮುಖ್ಯಮಂತ್ರಿ ಎಸ್.ಎಂ ಕೃಷ್ಣ ಅವರ ಅಂತ್ಯಕ್ರಿಯೆ ನಡೆದ ಅವರ ಹುಟ್ಟೂರಿನ ಸ್ವಂತ ಜಾಗವಾದ ಕಾಫಿ ಡೇ ಯ ಆವರಣದಲ್ಲಿ ಎಲ್ಲ ಗಣ್ಯರಿಗೆ ಹಾಗೂ ಸಾರ್ವಜನಿಕರಿಗೆ ಅಂತ್ಯಕ್ರಿಯೆಯಲ್ಲಿ ಭಾಗಿಯಾಗಲು ವಿಶೇಷ ವ್ಯವಸ್ಥೆಗಳನ್ನು ಜಿಲ್ಲಾಡಳಿತ ಮಾಡಿತ್ತು. ಗಣ್ಯರಿಗೆ ವಿಶೇಷ ಗ್ಯಾಲರಿಗಳನ್ನು ನಿರ್ಮಾಣ ಮಾಡಲಾಗಿತ್ತು. ಹಾಗೆಯೇ, ಸ್ಥಳದಲ್ಲಿ ಬಿಗಿ ಭದ್ರತಾ ವ್ಯವಸ್ಥೆಯನ್ನೂ ಕಲ್ಪಿಸಲಾಗಿತ್ತು.

# ನಂಬರ್ ಒನ್ ಮುಖ್ಯಮಂತ್ರಿಯಾಗಿದ್ದ ಎಸ್‌ಎಂ ಕೃಷ್ಣ

ಸಂಜೆ ಎಕ್ಸ್‌ಪ್ರೆಸ್ ಸುದ್ದಿ, ಬೆಂಗಳೂರು, ಡಿ, 11; ಮಾಧ್ಯಮಗಳನ್ನು ಸಮರ್ಥವಾಗಿ ನಿಭಾಯಿಸಿ ದೇಶದ ನಂಬರ್ ಒನ್ ಮುಖ್ಯಮಂತ್ರಿ ಎಂದು ಬಿರುದಾಂಕಿತರಾದ ಮಾಜಿ ಮುಖ್ಯಮಂತ್ರಿ ಎಸ್. ಎಂ.ಕೃಷ್ಣ ನಾಡು ಕಂಡ ಅಪರೂಪದ ಚತುರ ರಾಜಕಾರಣಿ.

ಮಾಜಿ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆ ನಂತರ ಮಾಧ್ಯಮಗಳನ್ನು ನಿರ್ವಹಣೆ ಮಾಡುವುದರಲ್ಲಿ ಎಸ್. ಎಂ.ಕೃಷ್ಣ ಅತ್ಯಂತ ನಿಪುಣರು. 1999 ರಿಂದ 2004 ರ ಅವಧಿಯಲ್ಲಿ ಪತ್ರಕರ್ತರಿಗೆ ಜಿ. ಕ್ಯಾಟಗರಿ ನಿವೇಶನಗಳ ಹಂಚಿಕೆ ಮೂಲಕ ಎಸ್.ಎಂ.ಕೃಷ್ಣ ಅತ್ಯಂತ ಕೆಟ್ಟ ಸಂಪ್ರದಾಯಕ್ಕೆ ನಾಂದಿಹಾಡಿದರಾದರೂ ಉತ್ತುಂಗಕ್ಕೆ ಏರಲು ಮಾಧ್ಯಮಗಳನ್ನು ಏಣಿಯಾಗಿ ಬಳಸಿಕೊಂಡರು. ಮುಖ್ಯಮಂತ್ರಿ ಅವಧಿಯುದ್ದಕ್ಕೂ ತಮ್ಮ ವಿರುದ್ಧ ಸೊಲ್ಲೆತ್ತದಂತೆ ಅತ್ಯಂತ ವ್ಯವಸ್ಥಿತವಾಗಿ ಸಂವಿಧಾನದ 4 ನೇ ಅಂಗವನ್ನು ಕಟ್ಟಿ ಹಾಕಿದ್ದರು.

ಮಾಧ್ಯಮವಷ್ಟೇ ಅಲ್ಲದೇ ಆಂತರಿಕ ಬಂಡಾಯವನ್ನು ಚಾಣಾಕ್ಷತನದಿಂದ ನಿರ್ವಹಣೆ ಮಾಡಿದರು. ತಮ್ಮ ನಾಯಕತ್ವಕ್ಕೆ ಸೆಡ್ಡು ಹೊಡೆಯಬಹುದಾದ ಲಿಂಗಾಯತರಾದ ಎಚ್.ಕೆ. ಪಾಟೀಲ್, ಶ್ಯಾಮನೂರು ಶಿವಶಂಕರಪ್ಪ, ದಲಿತ ನಾಯಕರಾದ ಮಲ್ಲಿಕಾರ್ಜುನ ಖರ್ಗೆ, ಮುಸ್ಲಿಂ ಸಮುದಾಯದ ಜಾಫರ್ ಶರೀಫ್, ಹಿಂದುಳಿದ ನಾಯಕರಾದ ಜನಾರ್ದನ ಪೂಜಾರಿ, ಅಲ್ಪ ಸಂಖ್ಯಾತ ಸಮುದಾಯದ ಆಸ್ಕರ್ ಫರ್ನಾಂಡಿಸ್, ಮಾರ್ಗರೆಟ್ ಆಳ್ವ, ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ ಅವರನ್ನು ಅಧಿಕಾರದ ಗದ್ದುಗೆಯಿಂದ ದೂರವೇ ಇಟ್ಟಿದ್ದರು. ಹಾಗೆಯೇ ಜನತಾ ದಳದ ಮುಖಂಡ, ಮಾಜಿ ಪ್ರಧಾನಿ ದೇವೇಗೌಡರ ವಿರುದ್ಧ ಬಹಿರಂಗವಾಗಿ ಸಮರ ಸಾರದ ಕೃಷ್ಣ, ಜೆಡಿಎಸ್ ಪಕ್ಷವನ್ನು ತಮ್ಮ ತಂತ್ರಗಾರಿಕೆ ಮೂಲಕ ಹಲವು ಚೂರು ಚೂರು ಮಾಡಿದರು. ಜೆಡಿಎಸ್ ನೆಲಕಚ್ಚಬೇಕು ಎಂಬುದು ಅವರ ಪರಮ ಗುರಿಯಾಗಿತ್ತು. ಜೆಡಿಎಸ್ ಗೆ ಅವರು ಅಕ್ಷರಶಃ ಸಿಂಹ ಸ್ವಪ್ನವಾಗಿದ್ದರು.

2004ರ ವಿಧಾನಸಭಾ ಚುನಾವಣೆಗೂ ಮುನ್ನ ಜೆಡಿಎಸ್ ಎರಡಂಕಿ ದಾಟುವುದಿಲ್ಲ ಎಂದು ಮಾಧ್ಯಮಗಳು ಪುಂಖಾನುಪುಂಖವಾಗಿ ವರದಿ ಮಾಡಿದವು. ಇದರ ಹಿಂದೆ ಎಸ್‌ಎಂಕೆ ಕೈವಾಡವಿತ್ತು. ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ನೇರ ಹಣಾಹಣಿ, ಜೆಡಿಎಸ್ ಇತರೆ ಸಾಲಿನಲ್ಲಿ ನಿಲ್ಲುತ್ತದೆ. ಜಾತ್ಯತೀತ ಜನತಾದಳ ಹತ್ತರ ಗಡಿ ದಾಟುವುದಿಲ್ಲ ಎಂಬ ವರದಿಗಳು ಬಿತ್ತರಗೊಂಡವು.


ಆದರೆ ಫಲಿತಾಂಶ ಬಂದಾಗ ಜೆಡಿಎಸ್ 58 ಕ್ಷೇತ್ರಗಳಲ್ಲಿ ಗದ್ದು ಬೀಗಿತ್ತು. ಬಿಜೆಪಿ 79 ಮತ್ತು ಕಾಂಗ್ರೆಸ್ ಕೇವಲ 65 ಕ್ಷೇತ್ತಗಳಲ್ಲಿ ಗೆಲುವು ಸಾಧಿಸಿತ್ತು. ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಈ ಫಲಿತಾಂಶದಿಂದ ಉಬ್ಬಿ ಹೋಗಿದ್ದರು. ಮಾಧ್ಯಮ ಪ್ರತಿನಿಧಿಗಳನ್ನು ಅವರು ಏ "ಇತರರನ್ನು ಕರೆಯಿರಿ" ಎಂದು ಮೂದಲಿಸುತ್ತಿದ್ದರು. ಆ ಪರಿ ಸಿಟ್ಟು ದೇವೇಗೌಡರಿಚಿಗತ್ತು. ಜೆಡಿಎಸ್ ಬೆಂಬಲದೊಂದಿಗೆ ಮತ್ತೊಮ್ಮೆ ಮುಖ್ಯಮಂತ್ರಿಯಾಗುವ ಎಸ್.ಎಂ. ಕೃಷ್ಣ ಕನಸು ನನಸಾಗಲಿಲ್ಲ. ದೇವೇಗೌಡರು ಇದಕ್ಕೆ ಆಸ್ಪದವನ್ನೇ ನೀಡಲಿಲ್ಲ.

2004ರಲ್ಲಿ, ಸರ್ಕಾರಕ್ಕೆ ಇನ್ನೂ ಆರು ತಿಂಗಳು ಇರುವಾಗಲೇ, ಅವಧಿಗೆ ಮುನ್ನ ಚುನಾವಣೆಗೆ ಹೋದರು. ಕೇಂದ್ರದಲ್ಲಿ ವಾಜಪೇಯಿ 'ಇಂಡಿಯಾ ಶೈನಿಂಗ್' ಎಂದರೆ, ಕೃಷ್ಣ ಅವರು 'ಕರ್ನಾಟಕ ಕಂಗೊಳಿಸುತ್ತಿದೆ' ಎಂದು ಘೋಷಣೆ ಮೊಳಗಿಸಿದರು. ಮತ್ತೊಮ್ಮೆ ಪಾಂಚಜನ್ಯ ಊದಿದರಾದರೂ ಪಕ್ಷದೊಳಗಿನ ಹಿರಿಯರನ್ನು ಹಿಂದಕ್ಕೆ ತಳ್ಳಿದ್ದು, ತೊಡಕಾಗಿ ಪರಿಣಮಿಸಿ ಹೀನಾಯವಾಗಿ ಸೋತರು. ತಮ್ಮ ತವರು ಕ್ಷೇತ್ರ ಮದ್ದೂರಿನಿಂದ ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರಕ್ಕೆ ವಲಸೆ ಬರುವ ಪರಿಸ್ಥಿತಿ ಅವರಿಗೆ ನಿರ್ಮಾಣವಾಯಿತು. ಅಷ್ಟೇ ಅಲ್ಲ, ಕಾಂಗ್ರೆಸ್ ಪಕ್ಷ 2004ರಲ್ಲಿ ಮಹಾರಾಷ್ಟ್ರದ ರಾಜ್ಯಪಾಲರನ್ನಾಗಿ ನೇಮಕ ಮಾಡಿತು. ಕೃಷ್ಣ ಅವರು ಅದನ್ನು ಪಕ್ಷನಿಷ್ಠೆಗೆ ಸಂದ ಸನ್ಮಾನ ಎಂದರು. ಸೋನಿಯಾ ಗಾಂಧಿಯವರ ಆಪ್ತಕೂಟದಲ್ಲಿ ಒಬ್ಬರಾದರು. ಆ ನಂತರ ಪ್ರಧಾನಿ ಮನಮೋಹನ್ ಸಿಂಗ್ ಸಂಪುಟದಲ್ಲಿ 2009ರಿಂದ 2012ರವರೆಗೆ ವಿದೇಶಾಂಗ ಖಾತೆ ಸಚಿವರಾಗಿಯೂ ಸೇವೆ ಸಲ್ಲಿಸಿದರು.

ತಾವೇ ಮಾಡಿಕೊಂಡ ಎಡವಟ್ಟಿನಿಂದ 2012ರಲ್ಲಿ ಕೇಂದ್ರ ವಿದೇಶಾಂಗ ಸಚಿವ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ಕರ್ನಾಟಕಕ್ಕೆ ಮರಳಿದಾಗಲೇ ರಾಜಕೀಯ ನಿವೃತ್ತಿ ಘೋಷಿಸಿದ್ದರೆ, ದೇಶದ ಧೀಮಂತ ರಾಜಕೀಯ ನಾಯಕರ ಸಾಲಿಗೆ ಕೃಷ್ಣ ಕೂಡ ಸೇರುತ್ತಿದ್ದರು. ಅಂತಹ ಒಂದು ಅಪೂರ್ವ ಅವಕಾಶವನ್ನು ಅವರಾಗಿಯೇ ಕಳೆದುಕೊಂಡದ್ದು– ಸಾರ್ವಜನಿಕ ಬದುಕು ಕಲ್ಪಿಸುವ ಅವಕಾಶಕ್ಕೆ, ಅಧಿಕಾರಕ್ಕೆ, ಅವಘಡಕ್ಕೆ ಬಹುದೊಡ್ಡ ಉದಾಹರಣೆಯಾಗಿ ನಿಲ್ಲುತ್ತದೆ.

ಬದಲಾದ ರಾಜಕೀಯ ಸನ್ನಿವೇಶದಲ್ಲಿ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ ಕೃಷ್ಣ ಅವರು, ಅಲ್ಪದಿನಗಳಲ್ಲೇ ಸಕ್ರಿಯ ರಾಜಕೀಯದಿಂದ ನಿವೃತ್ತಿ ಘೋಷಿಸಿ ವಿಶ್ರಾಂತ ಬದುಕು ನಡೆಸುತ್ತಿದ್ದರು. ಸಾಲು ಸಾಲು ಸಂಕಷ್ಟಗಳ ನಡುವೆಯೂ ಎಸ್. ಎಂ.ಕೃಷ್ಣ ಮುಖ್ಯಮಂತ್ರಿಯಾಗಿ ನಾಲ್ಕೂವರೆ ವರ್ಷ ಅಧಿಕಾರ ಸ್ವೀಕರಿಸಿದರು.

ಮುಖ್ಯಮಂತ್ರಿಯಾಗಿ ರಾಜ್ಯವನ್ನು ಅದರಲ್ಲೂ ಬೆಂಗಳೂರನ್ನು ಐಟಿ–ಬಿಟಿ ಕ್ಷೇತ್ರದಲ್ಲಿ ವಿಶ್ವದ ಸಿಲಿಕಾನ್ ಸಿಟಿಯಾಗಿ ಮೇರುಮಟ್ಟಕ್ಕೆ ಕೊಂಡೊಯ್ಯುವಲ್ಲಿ ಕಾರಣೀಭೂತರಾಗಿದ್ದಲ್ಲದೆ, ರಾಜಧಾನಿಯನ್ನು ಸಿಂಗಪೂರ್ ಮಾದರಿ ನಗರವನ್ನಾಗಿಸುವ ಕಾರ್ಯಕ್ಕೆ ಮುಂದಾಗಿದ್ದರು. ಇವರ ಆಡಳಿತಾವಧಿಯಲ್ಲೇ ಬೆಂಗಳೂರು–ಮೈಸೂರು ರಾಜ್ಯ ಹೆದ್ದಾರಿ ರಾಷ್ಟ್ರೀಯ ಹೆದ್ದಾರಿಯಾಗಿ ನಾಲ್ಕು ಪಥಗಳ ಮಾರ್ಗವಾಗಿ ಮಾರ್ಪಟ್ಟಿತು. ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ, ಮೆಟ್ರೊ ಯೋಜನೆ, ನಗರ ಮತ್ತು ಪಟ್ಟಣ ಪ್ರದೇಶಗಳ ಮೂಲಸೌಕರ್ಯ ಕಲ್ಪಿಸುವುದೂ ಸೇರಿದಂತೆ ಅನೇಕ ಜನಪರ ಅಭಿವೃದ್ಧಿ ಯೋಜನೆಗಳನ್ನು ಜಾರಿಗೊಳಿಸಿದರು.




ಅಭಾವ ಪರಿಸ್ಥಿತಿಯನ್ನು ನಿರ್ವಹಣೆ ಮಾಡಿದರು. ಯಶಸ್ವಿನಿ ವಿಮಾ ಯೋಜನೆ, ಸರ್ಕಾರಿ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟ ಯೋಜನೆ ಆರಂಭಿಸಿದರು. ಸ್ತ್ರೀಶಕ್ತಿ ಸ್ವಸಹಾಯ ಗುಂಪುಗಳನ್ನು ಅಸ್ತಿತ್ವಕ್ಕೆ ತಂದರು. ಪಾನೀಯ ನಿಗಮ ಸ್ಥಾಪಿಸಿ, ಸೆಕೆಂಡ್ಸ್ ಹಾವಳಿ ತಡೆಗಟ್ಟಿ ಪಾನಪ್ರಿಯರಿಗೆ ಕಡಿಮೆ ದರದಲ್ಲಿ ಮದ್ಯ ದೊರೆಯುವಂತೆ ಮಾಡುವ ಮೂಲಕ ರಾಜ್ಯ ಬೊಕ್ಕಸಕ್ಕೂ ಹಣ ಹರಿದುಬರುವಂತೆ ಮಾಡಿದರು.

ವಿಧಾನಸೌಧದ ಪಕ್ಕದಲ್ಲೇ ವಿಕಾಸಸೌಧ, ಅದರ ಸನಿಹದಲ್ಲೇ ಉದ್ಯೋಗಸೌಧ ನಿರ್ಮಿಸಿದರು.

ಕೆ.ಎಚ್.ರಂಗನಾಥ್, ಎಚ್.ಸಿ.ಶ್ರೀಕಂಠಯ್ಯ, ಎಂ.ವೈ.ಘೋರ್ಪಡೆ, ಮಲ್ಲಿಕಾರ್ಜುನ ಖರ್ಗೆ, ಧರ್ಮಸಿಂಗ್, ಡಿ.ಬಿ.ಚಂದ್ರೇಗೌಡ ಸೇರಿದಂತೆ ಘಟಾನುಘಟಿಗಳು ಕೃಷ್ಣ ಮಂತ್ರಿಮಂಡಲದಲ್ಲಿದ್ದರು. ಆದಾಗ್ಯೂ ಇವರ ಆಡಳಿತಾವಧಿಯಲ್ಲಿ ಕಾವೇರಿ ಜಲ ವಿವಾದ, ಜಿಲ್ಲಾ, ತಾಲ್ಲೂಕು ಪಂಚಾಯತ್ ಚುನಾವಣೆ, ಶಿಕ್ಷಣ ಮತ್ತು ಉದ್ಯೋಗದಲ್ಲಿ ಗ್ರಾಮೀಣ ಕೃಪಾಂಕ ಸೇರಿದಂತೆ ಹಲವು ವಿಷಯಗಳಲ್ಲಿ ಹಿನ್ನಡೆ ಅನುಭವಿಸಬೇಕಾಯಿತು.

ಕಾಡುಗಳ್ಳ ವೀರಪ್ಪನ್‌ನಿಂದ ಕನ್ನಡದ ವರನಟ ಡಾ.ರಾಜ್‌ಕುಮಾರ್ ಅಪಹರಣ ಕೃಷ್ಣ ಸರ್ಕಾರವನ್ನು ಸಂಕಷ್ಟಕ್ಕೆ ಸಿಲುಕಿಸಿತು. ಅಂದು ತಮಿಳುನಾಡು ಸರ್ಕಾರ ಮತ್ತು ಅಲ್ಲಿನ ಸಿನಿಮಾ ದಿಗ್ಗಜರು ಹಾಗೂ ಪತ್ರಕರ್ತರನ್ನು ಬಳಸಿಕೊಂಡು ವೀರಪ್ಪನ್ ಬಂಧನದಿಂದ ರಾಜ್‌ಕುಮಾರ್ ಅವರನ್ನು ಬಿಡಿಸಿಕೊಂಡು ಬರುವಲ್ಲಿ ಕೃಷ್ಣ ಯಶಸ್ವಿಯಾದರು. ವೀರಪ್ಪನ್ ಇವರ ಆಡಳಿತದಲ್ಲಿ ಒಂದಲ್ಲಾ ಒಂದು ಸಮಸ್ಯೆ ಒಡ್ಡುತ್ತಲೇ ಇದ್ದ, ಮಾಜಿ ಸಚಿವ ನಾಗಪ್ಪ ಹತ್ಯೆಯೂ ಅದೇ ಸಮಯದಲ್ಲಿ ನಡೆಯಿತು.

ಕಲೆ–ಕ್ರೀಡೆ–ಸಂಗೀತ–ಸಾಹಿತ್ಯಾಭಿರುಚಿಗಳ ಜೊತೆಗೆ ವಿದ್ವತ್ತು, ಹಿರಿತನ, ಅನುಭವ, ಪ್ರಭಾವವನ್ನು ಹೊಂದಿದ್ದ ಎಸ್.ಎಂ.ಕೃಷ್ಣ ಅಪರೂಪದ ಚತುರ ರಾಜಕಾರಣಿ.

# ದೊಡ್ಡ ದೊಡ್ಡ ಕಂಪನಿಗಳಿಂದ ಮೊದಲ ಸ್ಥಾನದಲ್ಲಿದೆ

**ಮಾಲೂರು :** ಜನಪ್ರತಿನಿಧಿಗಳು ಹಾಗೂ ಸರ್ಕಾರ ಮಾಡದ ಅಭಿವೃದ್ಧಿ ಕೆಲಸಗಳು ಹಾಗೂ ಮೂಲಭೂತ ಸೌಲತ್ತುಗಳನ್ನು ಒದಗಿಸುವ ಕೆಲಸ 25 ವರ್ಷಗಳಿಂದ ಸಿ ಎಸ್ ಆರ್ ಅನುದಾನದಡಿ ಹೋಂಡಾ ಸೈಕಲ್ ಮತ್ತು ಸ್ಕೂಟರ್ ಕಂಪನಿ ತಾಲೂಕಿನಲ್ಲಿ ಮಾಡುತ್ತಿದೆ ಎಂದು ಶಾಸಕ ಕೆ ವೈ ನಂಜೇಗೌಡ ಹೇಳಿದರು.

ತಾಲೂಕಿನ ಶಿವಾರಪಟ್ಟಣ ಗ್ರಾಪಂ ವ್ಯಾಪ್ತಿಯ ಕರಿ ನಾಯಕನಹಳ್ಳಿ ಮಿಂಡಹಳ್ಳಿ ಗ್ರಾಮದಲ್ಲಿ ಎರಡು ಕೋಟಿ ರೂಗಳ ವೆಚ್ಚದಲ್ಲಿ ಹೋಂಡಾ ಸೈಕಲ್ ಮತ್ತು ಸ್ಕೂಟರ್ ಕಂಪನಿಯ ಸಿಎಂಆರ್ ಅನುದಾನದಡಿ ನಿರ್ಮಿಸಿರುವ ಒಳಚರಂಡಿ ಕಾಮಗಾರಿ ಯ ಪ್ರಾಕೃತಿಕ ಆಧಾರಿತ ಒಳಚರಂಡಿ ಸಂಸ್ಕರಣ ಘಟಕ ಉದ್ಘಾಟಿಸಿ ಮಾತನಾಡಿದರು. ಜಿಲ್ಲೆ ಹಾಗೂ ತಾಲೂಕಿನ ಕೈಗಾರಿಕಾ ಪ್ರಾಂಗಣಗಳಿಗೆ ದೊಡ್ಡ ದೊಡ್ಡ ಕಂಪನಿಗಳು ಆಗಮಿಸಿದ್ದರಿಂದ ಜಿಲ್ಲೆಯು ಮೊದಲ ಸ್ಥಾನದಲ್ಲಿದೆ ವಿಶ್ವದಲ್ಲಿಯೇ ಮೊದಲ ಸ್ಥಾನ ಪಡೆದಿರುವ ಹೋಂಡಾ ಕಂಪನಿಯು ತಾಲೂಕಿನಲ್ಲಿ ಕಳೆದ 25 ವರ್ಷಗಳಿಂದ ಸಿಎಂಆರ್ ಅನುದಾನವನ್ನು ಬಳಸಿಕೊಂಡು ವಿಶೇಷ ಕಾರ್ಯಕ್ರಮಗಳನ್ನು ರೂಪಿಸಿದೆ ಪಟ್ಟಣದಲ್ಲಿ ಹೋಂಡಾ ಕ್ರೀಡಾಂಗಣ ಶಿವಾರ ಪಟ್ಟಣ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಸರ್ಕಾರಿ ಶಾಲೆಗಳ ಕಟ್ಟಡ ನಿರ್ಮಾಣ ಮೂಲಭೂತ ಸೌಲತ್ತುಗಳು ಒದಗಿಸುವುದು ಶುದ್ಧ ಕುಡಿಯುವ ನೀರಿನ ಘಟಕ ಹೈ ಮಾಸ್ ಲೈಟ್ ಗಳನ್ನು ಅಳವಡಿಸಿದೆ ಜನಪ್ರತಿನಿಧಿಗಳು ಸರ್ಕಾರ ಮಾಡದ ಕೆಲಸಗಳನ್ನು ಮಾಡುತ್ತಿದೆ ಹೋಂಡಾ ಕಂಪನಿಯು ಸುಮಾರು ಎರಡು ಕೋಟಿ ರೂಗಳ ವೆಚ್ಚದಲ್ಲಿ ಸಿಎಂಆರ್ ಅನುದಾನದಡಿ ಮಿಂಡ ಹಳ್ಳಿ ಹಾಗೂ ಕರಿನಾಯಕನಹಳ್ಳಿ ಗ್ರಾಮಗಳಲ್ಲಿ ಒಳಚರಂಡಿ ಪೈಪ್ ಲೈನ್ ಕಾಮಗಾರಿ ಪೂರ್ಣಗೊಳಿಸಿದ್ದು ಒಳಚರಂಡಿ ಪ್ರಾಕೃತಿಕವಾಗಿ ಸಂಸ್ಕರಣ ಘಟಕವನ್ನು ಸಹ ನಿರ್ಮಿಸಿದ್ದು ಈ ಭಾಗದ ಜನತೆಗೆ ಅನುಕೂಲ ಕಲ್ಪಿಸಿದೆ. ಸಿಎಂಆರ್‌ಅನುದಾನ ಹೆಚ್ಚಾಗಿ ಈ ಹಿಂದೆ ತಾಲೂಕಿಗೆ ಅವಕಾಶ ಸಿಕ್ಕಿದೆ ಆದರೆ ಪ್ರಸ್ತುತ ಕಡಿಮೆಯಾಗಿದ್ದು ತಾಲೂಕಿನ ಹಿಂದುಳಿದ ಪ್ರದೇಶಗಳಾದ ದಿನ ಹಳ್ಳಿ ಹಾಗೂ ದೊಡ್ಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ




ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಹಾಗೂ ಶಾಲಾ ಕಟ್ಟಡ ಮೂಲಭೂತ ಸೌಲತ್ತುಗಳನ್ನು ಒದಗಿಸುವ ಕೆಲಸ ಹೋಂಡಾ ಕಂಪನಿ ಜೊತೆಗೆ ಇತರೆ ಕಂಪನಿಗಳು ಮಾಡಿ ಈ ಭಾಗದ ಜನಗತ್ತೆಗೆ ಅನುಕೂಲ ಕಲ್ಪಿಸಬೇಕು ಇಲ್ಲಿನ ಕರಿನಾಯಕನಹಳ್ಳಿ ಹಾಗೂ ಮಿಂಡಹಳ್ಳಿ ಗ್ರಾಮಗಳಲ್ಲಿ ಇಲ್ಲಿನ ಕೈಗಾರಿಕೆ ಗಳ ಕಾರ್ಮಿಕರೇ ಹೆಚ್ಚಾಗಿ ವಾಸವಾಗಿದ್ದು ಹೋಂಡಾ ಕಂಪನಿ ಮೂಲಭೂತ ಸೌಲತ್ತುಗಳನ್ನು ಒದಗಿಸುವ ಕೆಲಸ ಮತ್ತಷ್ಟು ಮಾಡಬೇಕಾಗಿದೆ. ಕೆ ಐ ಎಡಿಬಿ 1600 ಎಕರೆ ಜಮೀನು ಶಿವಾರ ಪಟ್ಟಣದ ಬಳಿ ಗುರುತಿಸಿ ವಶಪಡಿಸಿಕೊಳ್ಳುತ್ತಿದ್ದು ತಾಲೂಕಿಗೆ ಮತ್ತಷ್ಟು ಕೈಗಾರಿಕೆಗಳು ಬರಲಿವೆ ಇದಕ್ಕೆ ಪೂರಕವಾಗಿ ಸರ್ಕಾರ ಹಾರುಪತದ ಕೈಗಾರಿಕಾ ಕಾರಿಡಾರ್ ರಸ್ತೆ ನಿರ್ಮಿಸುತ್ತಿದೆ ಕಂಪನಿಗಳ ಸಹಕಾರದಿಂದ ಸರ್ಕಾರದ ಮಾಡದ ಅಭಿವೃದ್ಧಿ ಕೆಲಸಗಳು ಸಿಎಂಆರ್‌ಅನುದಾನದಲ್ಲಿ ಮಾಡಲಾಗುತ್ತಿದೆ ಈ ಕಂಪನಿಗಳಿಗೆ ರಕ್ಷಣೆ ಕೊಡುವುದು ನಮ್ಮ ಜವಾಬ್ದಾರಿ ಆಗಿದ್ದು ಯಾವ ಕಂಪನಿಗಳಲ್ಲಿಯೂ ಗಲಾಟೆಗೆ ಅವಕಾಶ ಕಲ್ಪಿಸದೆ ಕಂಪನಿಗಳಿಗೆ ತೊಂದರೆಯಾಗದಂತೆ ತಾಲೂಕು ಆಡಳಿತ ಸಹಕಾರ ನೀಡುತ್ತಿದ್ದು ಇದಕ್ಕೆ ಸ್ಥಳೀಯರು ಸಹಕಾರ ನೀಡುತ್ತಿದ್ದಾರೆ ಎಂದರು.

ಹೋಂಡಾ ಮೋಟಾರ್ ಸೈಕಲ್ ಕಂಪನಿಯ ಉಪಾಧ್ಯಕ್ಷ ಟೋಕಿಯೋ ಸುಜುಕಿ ಮಾತನಾಡಿ, ಸಮಾಜದ ಒಳಿತಿಗಾಗಿ ಪರಿಸರ ಹಿತದೃಷ್ಟಿಯಿಂದ ಸಿ ಎಸ್ ಆರ್ ಅನುದಾನದಡಿ ಇಲ್ಲಿನ ಕಂಪನಿಯ ಪಕ್ಕದಲ್ಲಿರುವ ಗ್ರಾಮಗಳಿಗೆ ಒಳಚರಂಡಿ ವ್ಯವಸ್ಥೆ ಮಾಡಿ ಪ್ರಾಕೃತಿಕವಾಗಿ ಸಂಸ್ಕರಣ ಘಟಕ ಮಾಡಲಾಗಿದೆ ಕಂಪನಿಯು ಮಳೆ ನೀರು ಸಂಗ್ರಹಿಸಿ ಬಳಕೆ ಮಾಡಿಕೊಳ್ಳುತ್ತಿದೆ ಅಲ್ಲದೆ ಪರಿಸರದ ಹಿತದೃಷ್ಟಿಯಿಂದ ಇತ್ತೀಚಿಗೆ ಎಲೆಕ್ಟ್ರಿಕಲ್ ದ್ವಿಚಕ್ರ ವಾಹನವನ್ನು ಬಿಡುಗಡೆಗೊಳಿಸಲಾಗಿದೆ ಕಂಪನಿಯು ಪರಿಸರಕ್ಕೆ ಅನುಗುಣವಾದ ಕೆಲಸ ಮಾಡಲು ಇಲ್ಲಿನ ಸ್ಥಳೀಯರು ಕೈಜೋಡಿಸಿ ಸಹಕಾರ ನೀಡುವಂತೆ ಹೇಳಿದರು. ಕಂಪನಿಯ ಡಿವಿಜನ್ ಆಪರೇಟರ್ ಸುನಿಲ್ ಕುಮಾರ್ ಮಿತ್ತಲ್, ಡಿವಿಜನ್ ಹೆಡ್ ಜಯಂತ್, ಬ್ಲೂ ಡ್ರಾಪ್ ಕಂಪನಿಯ ಗಂಗ್ರೇಶ್ ರೆಡ್ಡಿ, ಗ್ರಾಮ ಪಂಚಾಯಿತಿ ಅಧ್ಯಕ್ಷ ಮಿಂಡಹಳ್ಳಿ ಮುನೇಗೌಡ, ತಾ ಪಂ.ಇಒ ವಿ ಕೃಷ್ಣಪ್ಪ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ವಿ ಮುನೇಗೌಡ, ಎಪಿಎಂಸಿ ಮಾಜಿ ಉಪಾಧ್ಯಕ್ಷ ಮುನಿಯಪ್ಪ , ತಿಮ್ಮಪ್ಪ ನಾಯಕ್ ಸದಸ್ಯರಾದ ಆಶಾ ನಾರಾಯಣಸ್ವಾಮಿ , ಮಾಜಿ ಸದಸ್ಯ ಆನಂದ ರೆಡ್ಡಿ ಮುಖಂಡರಾದ ಮುನಿರಾಜು , ನಾರಾಯಣರೆಡ್ಡಿ, ನಾರಾಯಣಸ್ವಾಮಿ, ಪಿಡಿಒ ರಮೇಶ್ ನಾಯಕ್ ಇನ್ನಿತರರು ಹಾಜರಿದ್ದರು.

# ಮಾಜಿ ಸಿಎಂ ಎಸ್.ಎಂ. ಕೃಷ್ಣ ಅವರ ನಿಧನಕ್ಕೆ ಕಕಜ ವೇದಿಕೆಯಿಂದ ಶ್ರದ್ಧಾಂಜಲಿ

ಚನ್ನಪಟ್ಟಣ,: ವಿದ್ಯಾವಂತ ನಿರುದ್ಯೋಗಿಗಳಿಗೆ ಐಟಿಬಿಟಿ ಮೂಲಕ ಉದ್ಯೋಗ ಕೊಡಿಸುವಲ್ಲಿ ಎಸ್.ಎಂ. ಕೃಷ್ಣ ಅವರ ಕೊಡುಗೆ ಅಪಾರವಾಗಿದೆ ಎಂದು ಕಕಜವೇದಿಕೆ ಜಿಲ್ಲಾಧ್ಯಕ್ಷ ಬೇವೂರು ಯೋಗೇಶ್ ಗೌಡ ಅಭಿಪ್ರಾಯಿಸಿದರು.

ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಹಾಗೂ ಸತ್ತೇಗಾಲ ಯೋಜನೆಯನ್ನು ಶೀಘ್ರವಾಗಿ ಮುಕ್ತಾಯ ಮಾಡುವಂತೆ ಆಗ್ರಹಿಸಿ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಮಂಗಳವಾರ ನಡೆದ 429 ನೇ ದಿನದ ಹೋರಾಟದಲ್ಲಿ ಮಾಜಿ ಮುಖ್ಯಮಂತ್ರಿಗಳು, ವಿದೇಶಾಂಗ ಸಚಿವರು, ರಾಜ್ಯಪಾಲರು ಆಗಿ ರಾಜಕೀಯಕ್ಕೆ ತನ್ನದೇ ಕೊಡುಗೆ ನೀಡಿರುವ ಎಸ್‌ಎಂ ಕಷ್ಣ ಅವರ ನಿಧನಕ್ಕೆ ಕಕಜ ವೇದಿಕೆಯಿಂದ ಆಯೋಜಿಸಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಅವರು ಮಾತನಾಡಿದರು. ಇಂದು ಬೆಂಗಳೂರು ನಗರಕ್ಕೆ ವಿದೇಶದ ಐಟಿಬಿಟಿ ಸಂಸ್ಥೆಗಳು ಕಾಲಿಡುತ್ತಿವೆ ಎಂದರೆ ಅದಕ್ಕೆ ಎಸ್‌ಎಂ. ಕೃಷ್ಣ ಅವರ ಕೊಡುಗೆಯಾಗಿದೆ. ಎಸ್.ಎಂ. ಕೃಷ್ಣ ಅವರು ಮುಖ್ಯಮಂತ್ರಿಗಳಾಗಿದ್ದ ವೇಳೆ ಸರ್ಕಾರಿ ಕೆಲಸಗಳನ್ನೇ ನಂಬಿ ಕೂರುತ್ತಿದ್ದ ವಿದ್ಯಾವಂತ ನಿರುದ್ಯೋಗಿಗಳಿಗೆ ಐಟಿಬಿಟಿ ಸಂಸ್ಥೆಗಳ ಮೂಲಕ ಉದ್ಯೋಗ ಸೃಷ್ಠಿಸುವ ನಿಟ್ಟಿನಲ್ಲಿ ವಿದೇಶದ ಸಂಸ್ಥೆಗಳನ್ನು ರಾಜ್ಯಕ್ಕೆ ಕರೆತಂದಿದ್ದು ಎಸ್.ಎಂ. ಕೃಷ್ಣ ಅವರು. ಅವರ ಆದರ್ಶಗಳು ಅಭಿವೃದ್ಧಿಯ ಚಿಂತನೆಗಳು ಇಂದಿನ ರಾಜಕಾರಣಿಗೆ ಮಾರ್ಗದರ್ಶನವಾಗಲಿ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸಿದರು.

ಸಂದರ್ಭದಲ್ಲಿ ಎಸ್‌ಎಂ.ಕೃಷ್ಣ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಕೆಲ ಸಮಯ ಮೌನಾಚರಣೆ ಮಾಡುವ ಮೂಲಕ ಎಸ್.ಎಂ. ಕೃಷ್ಣ ಅವರ ನಿಧನಕ್ಕೆ ಶ್ರದ್ಧಾಂಜಲಿ ಅರ್ಪಿಸಲಾಯಿತು. ಸಂದರ್ಭದಲ್ಲಿ ನಿವೃತ್ತ ಪ್ರಾಂಶುಪಾಲರು ಹಾಗೂ ಚನ್ನಪಟ್ಟಣ ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷರಾದ ನಿಂಗೇಗೌಡರು(ಎನ್‌ಜಿ), ಕೃಷ್ಣಪ್ರಸಾದ್, ಕಾಂಗ್ರೆಸ್ ಮುಖಂಡ ಸೋಗಾಲಪಾಳ್ಯ ಮಹದೇವು, ಕಕಜವೇ ವೇದಿಕೆ ತಾಲೂಕು ಅಧ್ಯಕ್ಷ ಬೈರಾಪಟ್ಟಣದ ಡಾ. ಸತೀಶ್, ಸಮಾಜ ಸೇವಕ ಸಿ.ಪಿ.ರಾಮು, ರಾಜು, ಜಯರಾಮು, ನಿವೃತ್ತ ಶಿಕ್ಷಕ ಪುಟ್ಟಪ್ಪಾಜಿ, ಮೆಣಸಿಗನಹಳ್ಳಿ ರಾಮಕೃಷ್ಣಪ್ಪ, ಮರಿಅಂಕೇಗೌಡ, ಬೀರೇಶ್ ಇತರರು ಇದ್ದರು.



## ಮೊದಲ ಪುಟದಿಂದ

### ಪ್ರಧಾನಿ ಮೋದಿ ಶೋಕ

ಕೇಂದ್ರ ಸರ್ಕಾರದ ಪ್ರತಿನಿಧಿಯಾಗಿ ಆಗಮಿಸಿ ಎಸ್.ಎಂ.ಕೃಷ್ಣ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು, ಪುಷ್ಪ ಹಾರ ಅರ್ಪಿಸಿ ನಮನ ಸಲ್ಲಿಸಿದರು.

### ಕೋರ್ಟ್ ತಾಕೀತು

ನಡೆಯುತ್ತಿರುವ ಹಂತದಲ್ಲಿ ಹೀಗೆ ಮಾಡುವುದು ಎಷ್ಟು ಸರಿ? ಅರ್ಜಿದಾರರು ಸ್ವಯಂ ನಿಯಂತ್ರಣ ವಿಧಿಸಿಕೊಳ್ಳಬೇಕು' ಎಂದು ತಾಕೀತು ಮಾಡಿದರು. ಇದಕ್ಕೆ ರಾಘವನ್, 'ಅರ್ಜಿದಾರರ ನಡೆಗೆ ನಾನು ಕ್ಷಮೆ ಕೋರುತ್ತೇನೆ' ಎಂದು ತಿಳಿಸಿದರು.

ಇದೇ ವೇಳೆ ಡಿ. 9ರವರೆಗೆ ನಡೆಸಿರುವ ತನಿಖೆಯ ವಸ್ತುಸ್ಥಿತಿ ವರದಿಯನ್ನು ಲೋಕಾಯುಕ್ತ ಪೊಲೀಸರು ನ್ಯಾಯಪೀಠಕ್ಕೆ ಸಲ್ಲಿಸಿದರು. ಅಂತೆಯೇ, ಪ್ರಕರಣದ ಕೇಸ್ ಡೈರಿ ಮತ್ತು ಸಾಕ್ಷಿಗಳ ಹೇಳಿಕೆ ಒಳಗೊಂಡ ಮತ್ತೊಂದು ವರದಿಯನ್ನೂ ಮುಚ್ಚಿದ ಲಕೋಟೆಯಲ್ಲಿ ಸಲ್ಲಿಸಿದರು.

"ಅರ್ಜಿಯಲ್ಲಿ ಜಾರಿ ನಿರ್ದೇಶನಾಲಯವನ್ನೂ (ಇ.ಡಿ) ಪ್ರತಿವಾದಿ–ಯಾಗಿಸಬೇಕು' ಎಂಬ ಸ್ನೇಹಮಯಿ ಕೃಷ್ಣ ಸಲ್ಲಿಸಿರುವ ಮಧ್ಯಂತರ ಅರ್ಜಿಗೆ ಆಕ್ಷೇಪಣೆ ಸಲ್ಲಿಸುವಂತೆ ರಾಜ್ಯ ಸರ್ಕಾರಕ್ಕೆ ಒಂದು ವಾರ ಕಾಲಾವಕಾಶ ನೀಡಿದ ನ್ಯಾಯಪೀಠ ವಿಚಾರಣೆಯನ್ನು ಇದೇ 19ಕ್ಕೆ ಮುಂದೂಡಿತು.

ಇಜಥಿ ತಿಠಡಿಫ: ಖಟಿಜುಚಿಟಟಚಿಥಿ ಏಡ್ಝುಟಚಿ, ಜಥಜಡಿಥಿಜ, ಜಟಜಿ–ಥಿಠಟಣಡಿಠಟ, ಅಠಣಡಿಣ

### ವೈಕಂ ಪ್ರಶಸ್ತಿ: ಪ್ರದಾನ

ಹೋರಾಟದಲ್ಲಿ ತಂದೆ ಪೆರಿಯಾರ್ ಭಾಗವಹಿಸಿದ್ದ ಹಿನ್ನೆಲೆಯಲ್ಲಿ ಇದರ ಶತಮಾನೋತ್ಸವ ಸಮಾರೋಪದಲ್ಲಿ ಈ ಪ್ರಶಸ್ತಿ ಪ್ರದಾನ. ತಮಿಳುನಾಡಿನ ಸಿಎಂ ಸ್ಟಾಲಿನ್ ಹಾಗೂ ಕೇರಳ ಸಿಎಂ ಪಿಣರಾಯಿ ವಿಜಯನ್ ನಾಳಿನ ಈ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

### ವಯನಾಡು ಕಳಕಳಿ ಗುಲಾಮಗಿರಿಯ ಸಂಕೇತ

'ಮಸ್ಯೆಗಳ ಬಗ್ಗೆ ನಿಮಗೆ ಕಾಳಜಿ ಇಲ್ಲ. ನಮ್ಮ ರಾಜ್ಯದಲ್ಲಿ ಇಲ್ಲಿ ಬಾಣಂತಿಯರ ಸಾವು, ಎತ್ತಿನಹೊಳೆ ಯೋಜನೆ ಸಂಬಂಧ ಅಧಿಕಾರಿ ಜೊತೆ ಜಗಳ ಮಾಡಿ ರೈತರೊಬ್ಬರು ಹೊಳೆಗೆ ಹಾರಿ ಸಾವನ್ನಪ್ಪಿದ್ದಾರೆ. ಆದರೆ ನಿಮ್ಮ ವಯನಾಡು ಕಳಕಳಿ ಗುಲಾಮಗಿರಿಯ ಸಂಕೇತ. ಈ ಪ್ರಶ್ನೆಯನ್ನು ವಿಧಾನಸಭೆಯಲ್ಲೂ ಮಾಡುತ್ತೇವೆ. ಬಾಣಂತಿಯರ ಸಾವು, ಹಸುಗೂಸುಗಳ ಸಾವು ಪ್ರಕರಣ ಸಂಬಂಧ ಎಸ್‌ಐಟಿ ತನಿಖೆಯಾಗಬೇಕು ಎಂದು ಆಗ್ರಹಿಸಿದ್ದಾರೆ ಸಿದ್ದರಾಮಯ್ಯ ಮೇಲೆ ಕೇಳಿಬರುತ್ತಿರುವ ಭ್ರಷ್ಟಾಚಾರದ ಆರೋಪಗಳಿಗೆ ಉತ್ತರ ನೀಡುವಲ್ಲೇ ಸರ್ಕಾರ ಹಾಗೂ ಕಾಂಗ್ರೆಸ್ ನಾಯಕರು ವ್ಯಸ್ತರಾಗಿದ್ದಾರೆ. ನಿಮ್ಮ ರಕ್ಷಣೆ ಮಾಡಿಕೊಳ್ಳಲು ನೀವು ಮಾಡುವ ಕೆಲಸವನ್ನು ರಾಜ್ಯದ ವಿಷಯಗಳಿಗೆ ಮಾಡುತ್ತಾ ಇಲ್ಲ ಎಂದು ಸಿಟಿ ರವಿ ಹರಿಹಾಯ್ದಿದ್ದಾರೆ.

### ಮೂವರು ನೀರುಪಾಲು

ಒಟ್ಟು 57 ಜನರು ಬಸ್‌ನಲ್ಲಿ ಪ್ರವಾಸಕ್ಕೆ ಬಂದಿದ್ರು. ಸಂಜೆ ವೇಳೆ ಸಮುದ್ರ ನೀರಿನಲ್ಲಿ ಈಜುವಾಗ ವಿದ್ಯಾರ್ಥಿಗಳು ನೀರಿನಲ್ಲಿ ಕೊಚ್ಚಿ ಹೋಗಿದ್ದರು. ಕಾಣೆಯಾಗಿರುವ ಇನ್ನೂ ಮೂವರು ವಿದ್ಯಾರ್ಥಿನಿಯರಿಗಾಗಿ ಶೋಧಕಾರ್ಯ ಮುಂದುವರಿದಿದೆ.

# ಬಡ ಕುಟುಂಬಗಳಿಗೆ ನಿವೇಶನ ಮತ್ತು ಹಕ್ಕುಪತ್ರಗಳನ್ನು ನೀಡುವಂತೆ ಮನವಿ

ಮಹದೇವಪುರ: ಬೆಂಗಳೂರು ಪೂರ್ವ ತಾಲ್ಲೂಕಿನ ಮಹದೇವಪುರ ಕ್ಷೇತ್ರದ ಬೈಯಪ್ಪನಹಳ್ಳಿ ಮತ್ತು ಚಿಕ್ಕಬನಹಳ್ಳಿಯಲ್ಲಿ ವಾಸಿಸುವ ಬಡ ಕುಟುಂಬಗಳಿಗೆ ನಿವೇಶನ ಮತ್ತು ಹಕ್ಕುಪತ್ರಗಳನ್ನು ನೀಡುವಂತೆ ಒತ್ತಾಯಿಸಿ ಪ್ರಜಾ ವಿಮೋಚನಾ ಚಳವಳಿಯ ಪದಾಧಿಕಾರಿಗಳು ಜಿಲ್ಲಾಧಿಕಾರಿ ಜಗದೀಶ್ ಅವರಿಗೆ ಮನವಿ ಸಲ್ಲಿಸಿದರು.

ರಾಜ್ಯ ಘಟಕದ ಅಧ್ಯಕ್ಷ ಆನೇಕಲ್ ಕೃಷ್ಣಪ್ಪ ಮಾತನಾಡಿ, ಬೆಂಗಳೂರು ಪೂರ್ವ ತಾಲ್ಲೂಕಿನ ಬೀದರಹಳ್ಳಿ ಹೋಬಳಿಯ ಬೈಯಪ್ಪನಹಳ್ಳಿ ಗ್ರಾಮದ ಸರ್ವೆ ನಂಬರ್ 27 ಮತ್ತು ಚಿಕ್ಕಬನಹಳ್ಳಿ ಗ್ರಾಮದ 11 ರಲ್ಲಿ ನೂರಾರು ಬಡ ಕುಟುಂಬಗಳು ವಾಸಿಸುತ್ತಿವೆ. ಇಲ್ಲಿನ ಬಡ ಜನರಿಗೆ ನಿವೇಶನ ಮತ್ತು ಹಕ್ಕುಪತ್ರಗಳನ್ನು ನೀಡಬೇಕು. ರಸ್ತೆ, ಕುಡಿಯುವ ನೀರು, ವಿದ್ಯುತ್ ಸಂಪರ್ಕ ಕಲ್ಪಿಸಬೇಕು. ಸರ್ಕಾರಿ ಜಾಗವನ್ನು ಒತ್ತುವರಿ ಮಾಡಿರುವ ಒತ್ತುವರಿದಾರರ ವಿರುದ್ಧ ಕ್ರಮ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಚಿಕ್ಕಬನಹಳ್ಳಿಯ ಜೈ ಭೀಮ್ ನಗರದಲ್ಲಿ ಸರ್ಕಾರಿ ಕೆರೆಯ ಕೋಡಿ ಜಾಗವನ್ನು ಒತ್ತುವರಿ ಮಾಡಿಕೊಂಡು ಕೋಡಿ ಹರಿಯುವ ಜಾಗದಲ್ಲಿ ಕೊಳವೆಬಾವಿ ಕೊರೆಯಿಸಲಾಗಿದೆ. ಇದರಿಂದಾಗಿ ಮಳೆ ಬಂದಾಗ ಮಳೆ ನೀರು ಮನೆಗಳಿಗೆ ನುಗ್ಗಿ ಪ್ರಾಣ ಹಾನಿ ಹಾಗೂ ಆರ್ಥಿಕ ತೊಂದರೆ ಉಂಟಾಗುತ್ತದೆ. ಒತ್ತುವರಿ ತೆರವುಗೊಳಿಸಲು ಕ್ರಮ ಕೈಗೊಳ್ಳಬೇಕು. ಗುಂಜೂರಿನಲ್ಲಿ ಅಂಬೇಡ್ಕರ್ ಭವನ ನಿರ್ಮಿಸಬೇಕು ಎಂದು ಮನವಿ ಮಾಡಿದರು.

ಸಂಘಟನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಆದೂರು ಕೆ.ದೇವರಾಜು, ಬೆಂಗಳೂರು ವಿಭಾಗೀಯ ಅಧ್ಯಕ್ಷ ಎಸ್.ಕೆ.ಮಾದೇಶ್, ರವಿ, ರವಿಕುಮಾರ್, ಗಣೇಶ್, ಮುನಿರಾಜು, ಅಪ್ಸರ್ ಅಲಿ, ಪರಶುರಾಮ್, ಕೊಪ್ಪ ಮುನಿಯಪ್ಪ, ರಾಮಾಂಜಿ, ಮಂಜುನಾಥ್, ವಿಜಯ್ ಕುಮಾರ್ ಈ ಸಂದರ್ಭದಲ್ಲಿ ಇದ್ದರು.



# ಸಮಾಜದಲ್ಲಿ ತಾರತಮ್ಯ ಇಲ್ಲದೆ ಸುರಕ್ಷಿತ ಜೀವನ ನಡೆಸಲು ರೋಗದ ಬಗ್ಗೆ ಜನರಲ್ಲಿ ಜಾಗೃತಿ ಅಗತ್ಯ



**ನಾಗಮಂಗಲ:** ಸಾಂಕ್ರಾಮಿಕ ರೋಗಗಳ ಬಗ್ಗೆ ಅರಿವು ಮೂಡಿಸಲು ಮತ್ತು ಸಮಾಜದಲ್ಲಿ ತಾರತಮ್ಯವಿಲ್ಲದೆ ಸುರಕ್ಷಿತ ಜೀವನ ನಡೆಸುವಂತೆ ಆಗಬೇಕು ಮತ್ತು ಈ ರೋಗದ ಬಗ್ಗೆ ಜನರಲ್ಲಿ ತಪ್ಪು ಕಲ್ಪನೆ ಹೋಗಲಾಡಿಸಿ ಜಾಗೃತಿ ಮೂಡಿಸುವ ಅಗತ್ಯವೆಂದು ನ್ಯಾಯಾಧೀಶರಾದ ಯೋಗೇಶ್ ರವರು ತಿಳಿಸಿದರು.

ಪ್ರತಿವರ್ಷ ಡಿಸೆಂಬರ್ 1 ರಂದು ವಿಶ್ವದಾದ್ಯಂತ ಏಡ್ಸ್ ದಿನವನ್ನು ಆಚರಿಸಲಾಗುತ್ತದೆ. ಈ ದಿನವನ್ನು ಆಚರಿಸುವ ಮುಖ್ಯ ಉದ್ದೇಶವೆಂದರೆ ಈ ರೋಗದ ಹರಡುವಿಕೆ ಮತ್ತು ಅದರ ತಡೆಗಟ್ಟುವಿಕೆಯ ಬಗ್ಗೆ ಜನರಿಗೆ ಅರಿವು ಮೂಡಿಸುವುದಾಗಿದೆ. ಹಿರಿಯ ಸಿವಿಲ್ ನ್ಯಾಯಾಧೀಶರಾದ ಯೋಗೇಶ್ ರವರು ತಿಳಿಸಿದರು

ಅವರು ಇಂದುತಾಲೂಕು ಕಾನೂನು ಸೇವಾ ಸಮಿತಿ. ನಾಗಮಂಗಲವಕೀಲರ ಸಂಘ(ರಿ), ಅಭಿಯೋಜನಾ ಇಲಾಖೆ ಹಾಗೂ ತಾಲೂಕು ಆರೋಗ್ಯ ಅಧಿಕಾರಿಗಳ ಕಚೇರಿ ಮತ್ತು ಸಾರ್ವಜನಿಕ ಸರ್ಕಾರಿ ಆಸ್ಪತ್ರೆ ನಾಗಮಂಗಲ ಇವರುಗಳ ಸಂಯುಕ್ತ ಆಶ್ರಯದಲ್ಲಿ" ವಿಶ್ವ ಏಡ್ಸ್ ದಿನಾಚರಣೆಯ ಜಾಥಾ ಮತ್ತು ಕಾನೂನು ಅರಿವು- ನೆರವು ಕಾರ್ಯಕ್ರಮ ಉದ್ಘಾಟನೆ ಮಾಡುತ್ತಾ ಮಾತನಾಡಿದರು. ಈ ರೋಗದ ಬಗ್ಗೆ ಜನರಲ್ಲಿ ತಪ್ಪುಕಲ್ಪನೆಗಳನ್ನುಹೋಗಲಾಡಿಸಿ ಹೋಗಲಾಡಿಸಬೇಕೆಂಬ ಈ ದಿನದ ಆಚರಣೆಯ ಮುಖ್ಯ ಉದ್ದೇಶವಾಗಿದ್ದು ಸರ್ಕಾರಿ ಮತ್ತು ಅನೇಕ ಸಂಘ ಸಂಸ್ಥೆಗಳು ಹಲವಾರು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುತ್ತ ಈ ಮೂಲಕ ಜನರಲ್ಲಿ ಆರೋಗ್ಯ ಜಾಗೃತಿಯನ್ನು ಮೂಡಿಸುವ ಕಾರ್ಯವನ್ನು ಮಾಡಲಾಗುತ್ತಿದೆ ಇದರ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಏಡ್ಸ್ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಆಚರಿಸುತ್ತಿರುವ ಈ ದಿನ ಎಚ್ಐವಿ ಪಿಡಿತ ಜನರ ಬಗ್ಗೆ ಅಸಮಾನತೆ ತೊಲಗಿಸಿ ಅವರುಗಳನ್ನು ಸಮ ಸಮಾಜದ ದತ್ತ ಆರೋಗ್ಯವಂತ ಪ್ರಜೆಗಳಾಗಿ ಬರಲು ಈ ದಿನದ ಮುಖ್ಯ ಉದ್ದೇಶವಾಗಿದೆ .

ಎಚ್ಐವಿ ಏಡ್ಸ್ ಸುತ್ತಲಿನ ಕಳಂಕವನ್ನು ದೂರ ಮಾಡಲು ನಡೆಸುತ್ತಿರುವ ಪ್ರಯತ್ನಗಳನ್ನು ಹಾಗೂ ವಿಶ್ವಾದ್ಯಂತ ಏಡ್ಸ್ ತಡೆಗಟ್ಟುವ ಕ್ರಮಗಳ ಚಿಕಿತ್ಸೆ ನೀಡುವುದು ಹಾರ್ಯೆಕೆ ಮಹತ್ವದ ಬಗ್ಗೆ ಪ್ರತಿಪಾದಿಸುವ ದಿನ ಇದಾಗಿದೆ ಎಂದು ಡಾಕ್ಟರ್ ವಿನೋದ್ ತಿಳಿಸಿದರು

ಸಮಾರಂಭದ ಅಧ್ಯಕ್ಷತೆ ಅಧ್ಯಕ್ಷತೆಯನ್ನು ಡಾ, ರಮೇಶ್ ಬಿ ಎಚ್ ತಾಲೂಕು ಆರೋಗ್ಯ ಅಧಿಕಾರಿಗಳು ಉಪನ್ಯಾಸಕರು ಡಾ, ವಿನೋದ್ ಚರ್ಮರೋಗ ತಜ್ಞರು ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ನಾಗಮಂಗಲಮುಖ್ಯ ಅತಿಥಿಗಳು, ಶ್ರೀ ಮಹದೇವ್ ಅಧ್ಯಕ್ಷರು ವಕೀಲರ ಸಂಘ (ರಿ) ನಾಗಮಂಗಲ.ಕು, ಅರುಣ ಬಾಯಿ ಸಹಾಯಕ ಸರ್ಕಾರಿ ಅಭಿಯೋಜಕರುನಾಗಮಂಗಲ, ಪಿ,ಸಿ, ಮಂಜುನಾತಪಾರ ಸರ್ಕಾರಿ ವಕೀಲರು ನಾಗಮಂಲ, ನಿರೂಪಣೆ ಶ್ರೀ ಸಿದ್ದಲಿಂಗಯ್ಯ ಎಸ್ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳು ನಾಗಮಂಗಲ, ಆಶಾ ಕಾರ್ಯಕರ್ತರು ಈ ಸಂದರ್ಭದಲ್ಲಿ ಹಾಜರಿದ್ದರು

## ಸುದ್ದಿ ಸಂಜೆ

# ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ



**ಮಾಲೂರು :** ಅಂಬೇಡ್ಕರ್ ಪರಿ ನಿರ್ವಹಣಾ ದಿನದ ಅಂಗವಾಗಿ ಮಾಲೂರು ಬಸ್ ನಿಲ್ದಾಣದ ಬಳಿ ಇರುವ ಅಂಬೇಡ್ಕರ್ ಉದ್ಯಾನದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಶಿವಕುಮಾರ್, ಕರ್ನಾಟಕರ್ನಾಟಕ ಅಂಬೇಡ್ಕರ್ ಸೇವಾ ಸಂಘದ ರಾಜ್ಯಾಧ್ಯಕ್ಷ ಹಾಗೂ ಏನು ಸಮಾಚಾರ ಪತ್ರಿಕೆಯ ಸಂಪಾದಕ ಪಿ ಎನ್ ದಾಸ್ ಮತ್ತು ಕರ್ನಾಟಕ ದಲಿತ ಸಿಂಹ ಸೇನೆ ರಾಜ್ಯ ಅಧ್ಯಕ್ಷ ತಿಪ್ಪಸಂದ್ರ ಶ್ರೀನಿವಾಸ್, ಕರ್ನಾಟಕ ಅಂಬೇಡ್ಕರ್ ಸೇವಾ ಸಂಘದ ಪೋಷಕರಾದ ಸಿ.ಎಸ್.ಕೃಷ್ಣಪ್ಪ, ರಾಜ್ಯ ಪ್ರಧಾನ ಕಾರ್ಯದರ್ಶಿ ಸೋಮಶೇಖರ್, ರಾಜ್ಯ ಉಪಾಧ್ಯಕ್ಷ ಎನ್. ನಾಗರಾಜ್, ವಿದ್ಯಾರ್ಥಿ ನಿಲಯ ಮೇಲ್ವಿಚಾರಕ ಕೆ. ಅಶ್ವಥಪ್ಪ, ಚನ್ನಕಲ್ ಸಂತೋಷ್ ಈ ಸಂದರ್ಭದಲ್ಲಿ ಇದ್ದರು.

# 16ನೇ ಬುಡಕಟ್ಟು ವಿನಿಮಯ ಕಾರ್ಯಕ್ರಮ




ಶಿಡ್ಲಘಟ್ಟ : ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐದು ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಬೆಂಗಳೂರಿನಲ್ಲಿ ನಡೆದ 16ನೇ ಬುಡಕಟ್ಟು ವಿನಿಮಯ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ.

ಟಿ.ಎಮ್.ತರುಣ್, ಡಿ.ಪವನ್, ಎಸ್. ಮಧು,ಎ. ಅಭಿಷೇಕ್ ಮತ್ತು ವೈ. ಎಮ್. ತೇಜಸ್ ಗೌಡ ಅವರು ವಿವಿಧ ರಾಜ್ಯಗಳ ವಿದ್ಯಾರ್ಥಿಗಳೊಂದಿಗೆ ಒಗ್ಗಟ್ಟಾಗಿ ಭಾಗವಹಿಸಿ, ಕರ್ನಾಟಕದ ಕಲೆ, ಸಾಹಿತ್ಯ, ಸಂಸ್ಕೃತಿ, ಆಹಾರ ಮತ್ತು ಭಾಷೆಗಳನ್ನು ಪರಿಚಯಿಸಿದರು ಇತರ ರಾಜ್ಯಗಳ ಸಂಸ್ಕೃತಿಗಳನ್ನು ತಿಳಿದುಕೊಂಡರು.

ಈ ಶಿಬಿರವು ಡಿಸೆಂಬರ್ 2 ರಿಂದ 7 ರವರೆಗೆ ಜ್ಞಾನಭಾರತಿ ಆವರಣದ ಎನ್‌ಎಸ್‌ಎಸ್ ಭವನದಲ್ಲಿ ಆಯೋಜಿಸಲಾಗಿದೆ,

ಈ ಕಾರ್ಯಕ್ರಮವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು, ಸೆಂಟ್ರಲ್ ಫೋರ್ಸ್‌ಗಳು ಹಾಗೂ ಬೆಂಗಳೂರು ವಿಶ್ವವಿದ್ಯಾನಿಲಯದ ಸಹಯೋಗದಲ್ಲಿ ನಡೆಸಲಾಗುತ್ತಿದೆ.

ಬುಡಕಟ್ಟು ಜನಾಂಗದ ಸಮಸ್ಯೆಗಳನ್ನು ತಿಳಿಯಲು ಮತ್ತು ಅವರಿಗೆ ಸಹಾಯ ಮಾಡಲು ಶಿಬಿರವು ಮುಖ್ಯವಾಗಿದೆ, ಭಾರತದ ವಿವಿಧ ರಾಜ್ಯಗಳಿಂದ 220 ಬುಡಕಟ್ಟು ಯುವಕರು ಭಾಗವಹಿಸಿದ್ದಾರೆ,ಶಿಬಿರದಲ್ಲಿ ಯೋಗ, ಕ್ರೀಡೆ, ಉಪನ್ಯಾಸ, ಸಾಂಸ್ಕೃತಿಕ ಚಟುವಟಿಕೆಗಳು ಹಾಗೂ ವಿಶೇಷ ತರಬೇತಿಗಳನ್ನು ಏರ್ಪಡಿಸಲಾಗಿದೆ.

ಈ ವೇಳೆ ಬೆಂಗಳೂರಿನ ಜಿಲ್ಲಾ ಯುವಾಧಿಕಾರಿ ಎ. ನಾಗಲಕ್ಷ್ಮಿ ಹಾಗು ಅಧಿಕಾರಿಗಳು ಹಾಜರಿದ್ದು ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಿದರು.

# ಆಡಳಿತ ವ್ಯವಸ್ಥೆಗೆ ಹೊಸ ಆಯಾಮ ತಂದುಕೊಟ್ಟವರು 'ಅಂಬೇಡ್ಕರ್'



**ಚಾಮರಾಜನಗರ:** ನಗರದ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಸಂವಿಧಾನ ಶಿಲ್ಪಿ ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 68ನೇ ಪರಿನಿರ್ವಾಣ ದಿನವನ್ನು ಆಚರಿಸಲಾಯಿತು.

ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿದ ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಅಂಬೇಡ್ಕರ್ ಅವರು ಇಡೀ ಜಗತ್ತು ಮೆಚ್ಚುವ ಸಂವಿಧಾನವನ್ನು ರಚಿಸಿದ್ದಾರೆ. ಈ ಮೂಲಕ ಭಾರತ ದೇಶದ ಆಡಳಿತ ವ್ಯವಸ್ಥೆಗೆ ಹೊಸ ಆಯಾಮ ತಂದುಕೊಟ್ಟಿದ್ದಾರೆ. ಹೀಗಾಗಿ ನಾವೆಲ್ಲರೂ ಅಂಬೇಡ್ಕರ್ ಅವರನ್ನು ಸದಾ ಸ್ಮರಿಸುವ ಅಗತ್ಯವಿದೆ ಎಂದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ. ಮರಿಸ್ವಾಮಿ ಮಾತನಾಡಿ,ಅಂಬೇಡ್ಕರ್ ವ್ಯಕ್ತಿ ಅಲ್ಲ ಅವರೊಬ್ಬ ಮಹಾನ್ ಶಕ್ತಿಯಾಗಿದ್ದಾರೆ. ದಲಿತರು, ಮಹಿಳೆಯರು ಹಾಗೂ ಕಾರ್ಮಿಕರ ಪರ ಹೋರಾಟ ನಡೆಸಿದ್ದಾರೆ. ಅಂಬೇಡ್ಕರ್ ಅವರ ವಿಚಾರಧಾರೆ, ಆದರ್ಶಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು ಎಂದರು.

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆರ್.ಮಹದೇವ, ಚುಡಾ ಅಧ್ಯಕ್ಷ ಮಹಮದ್ ಅಸ್ಗರ್ ಮುನ್ನಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎ.ಎಸ್. ಗುರುಸ್ವಾಮಿ, ಕೆಪಿಸಿಸಿ ಸದಸ್ಯ ಸೈಯದ್ ರಫೀ, ನಸ್ರುಲ್‌ಖಾನ್, ಆಯೂಬ್ ಖಾನ್, ಎಪಿಎಂಸಿ ಅಧ್ಯಕ್ಷ ಸೋಮೇಶ್, ಸದಸ್ಯ ಆಲೂರು ಪ್ರದೀಪ್ ಕರಿನಂಜನಪುರ ಸ್ವಾಮಿ, ಬಸವಣ್ಣ, ಜಿ,ಪಂ ಮಾಜಿ ಸದಸ್ಯ ಸದಾಶಿವಮೂರ್ತಿ, ಕೆರಹಳ್ಳಿ ನವೀನ್, ಕಾವೇರಿಶಿವಕುಮಾರ, ರಮೇಶ್, ರವಿಗೌಡ, ಪ್ರಕಾಶ್, ಕಾಗಲವಾಡಿ ಚಂದ್ರು, ಮರಿಯಾಲದಹುಂಡಿ ಕುಮಾರ್, ಅಪ್ಸರ್‌ಅಹಮದ್, ಉಡಿಗಾಲ ಮಹದೇವ್ ಎಂ.ಸಿ. ನಾಗರಾಜು, ಕುಮಾರ್, ರಾಜು,ರವೀಂದ್ರ, ಹಾಜರಿದ್ದರು.

# ಜನನ ಪತ್ರ: ಲಂಚ ಪಡೆಯುತ್ತಿರುವ ಫೋಟೋ ವೈರಲ್



ಚಾಮರಾಜನಗರ : ನಗರಸಭೆಯಲ್ಲಿ ಜನನ ಪ್ರಮಾಣ ಪತ್ರ ನೀಡಲು 200 ರೂ.ವೀಡಿಯೊ

ಚಾಮರಾಜನಗರ : ಜಿಲ್ಲಾ ಕೇಂದ್ರದಲ್ಲಿರುವ ನಗರಸಭೆಯಲ್ಲಿ ಜನನ ಪ್ರಮಾಣ ಪತ್ರ ನೀಡಲು ಅರ್ಜಿದಾರರಿಂದ ರೂ 200ಗಳನ್ನು ಬಹಿರಂಗವಾಗಿ ಲಂಚ ಪಡೆದಿರುವ ವಿಡಿಯೋ ಇದೀಗ ವೈರಲ್ ಆಗಿದೆ. ಚಾಮರಾಜನಗರ ತಾಲ್ಲೂಕಿನ ಅಮಚವಾಡಿ ಗ್ರಾಮದ ಮಹದೇವರ ಪತ್ನಿಗೆ ಸ್ಥಳೀಯ ಆಸ್ಪತ್ರೆಯಲ್ಲಿ ಹೆರಿಗೆಯಾಗಿತ್ತು. ಆಸ್ಪತ್ರೆಯಿಂದ ಮಗು ಜನನದ ಬಗ್ಗೆ ಮಾಹಿತಿ ನಗರಸಭೆಗೆ ರವಾನೆಯಾಗಿ ದಾಖಲೆಗೊಂಡಿತ್ತು. ಮಹದೇವ ಶೆಟ್ಟಿ ಮಗುವಿನ ಜನನ ಪ್ರಮಾಣ ಪತ್ರಕ್ಕೆ ಅರ್ಜಿ ಕಳೆದ ತಿಂಗಳು 22ರಂದು ಸಲ್ಲಿಸಿದ್ದರು. ಪ್ರಮಾಣ ಪತ್ರ ಕೊಡಲು ಈಗ ಬಾ ಆಗ ಬಾ ಹೋಗಿ ಬಾ 15 ದಿನಗಳಿಂದಲೂ ಸತಾಯಿಸುತ್ತಿದ್ದರು.ಈತ 15 ದಿನಗಳಿಂದಲೂ ತಿರುಗುತ್ತಿದ್ದೇನೆ ಶೀಘ್ರ ಕೊಡುವಂತೆ ಒತ್ತಡ ಹೇರಿದಾಗ ಅದಕ್ಕೆಲ್ಲ ಹಣ ಕೊಡ ಬೇಕಾಗುತ್ತದೆ ಎಂಬ ಮಾಹಿತಿ ಅರಿತ ಅರ್ಜಿದಾರರು ಎಷ್ಟು ಎಂದು ಕೇಳಿದಾಗ 200 ರೂಪಾಯಿ ಕೊಡಬೇಕಾಗುತ್ತದೆ ಎಂದು ಜನನ ಪ್ರಮಾಣ ಪತ್ರ ನೀಡುವ ಹೊರಗುತ್ತಿಗೆ ಸಿಬ್ಬಂದಿ ಕನ್ಯಾ ತಿಳಿಸಿದ್ದಾರೆ. 200ರೂ ಲಂಚ ಕೊಡುತ್ತಿದ್ದಂತೆ ಯಾವುದೇ ತಕರಾರಿಲ್ಲದೆ ಜನನ ಪ್ರಮಾಣಪತ್ರ ಕೈಗೆ ಕೊಟ್ಟು ಕಳುಹಿಸಿದ್ದಾರೆ.

ನಗರಸಭೆಯಲ್ಲಿ ಸಿಸಿ ಕ್ಯಾಮೆರಾ ಇದ್ದರೂ ಕೂಡ ಇಲ್ಲದಂತಿದೆ. ನಗರಸಭೆ ಸಾರ್ವಜನಿಕರಿಗೆ ನರಕಸಭೆಯಾಗಿದೆ ಕಾಂಚಾಣ ಸದ್ದು ಮಾಡಿದರೆ ಮಾತ್ರ ಕೆಲಸವಾಗುತ್ತದೆ ಇಲ್ಲದಿದ್ದರೆ ಆ ವ್ಯಕ್ತಿಯ ಪಾಡು ನಾಯಿಪಾಡಾಗುತ್ತದೆ. ನಗರಸಭೆಯ ಸಿಬ್ಬಂದಿಗಳನ್ನು ಯಾರಾದರೂ ಪ್ರಶ್ನೆ ಮಾಡಿದರೆ ಸಂಬಂಧಪಟ್ಟ ಕಡತಗಳು ಇಲ್ಲ ಹೊರಗೆ ಹೋಗಿ ಎಂದು ಗತ್ತಿನಿಂದ ಹೇಳುವರು. ಲಂಚದ ರೂಪದಲ್ಲಿ ಹಣವನ್ನು ನೀಡಿದರೆ ಎರಡು ಮೂರು ದಿನಗಳಲ್ಲೇ ಕಡತಗಳು ಪ್ರತ್ಯಕ್ಷವಾಗಿ ಕೆಲಸಗಳು ಬೇಗ ಆಗುತ್ತದೆ ಇಂತಹ ಭ್ರಷ್ಟ ಅಧಿಕಾರಿ ಸಿಬ್ಬಂದಿಗಳು ನಗರಸಭೆಯಲ್ಲಿ ಇರುವ ತನಕ ಚಾಮರಾಜನಗರ ಜಿಲ್ಲಾ ಕೇಂದ್ರ ಹೇಗೆ ಉದ್ದಾರವಾದೀತು. ಭ್ರಷ್ಟ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ರಾಜಕಾರಣಿಗಳು ಪರೋಕ್ಷವಾಗಿ ಪ್ರೋತ್ಸಾಹಿಸುತ್ತಿದ್ದಾರೆ ಇವರುಗಳ ವಿರುದ್ಧ ಸರ್ಕಾರ ಕಾನೂನು ಕ್ರಮ ಕೈಗೊಳ್ಳಬೇಕೆಂದು ಮಹದೇವ ಶೆಟ್ಟಿ ಆಗ್ರಹಿಸಿದ್ದಾರೆ.

# ಅಂಬೇಡ್ಕರ್ ಅವರು ಮಹಾ ಪರಿನಿರ್ವಾಣ ದಿನಾಚರಣೆ



ಮುಳಬಾಗಿಲು. : ನಗರದ ಅಂಬೇಡ್ಕರ್ ಸರ್ಕಲ್ ನಲ್ಲಿ ದಲಿತ ಸಂಘರ್ಷ ಸಮಿತಿ ಸಂಯೋಜಕ ವತಿಯಿಂದ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಒಂದೊಂದು ಗುಲಾಬಿ ಹೂವನ್ನು ಅರ್ಪಿಸಿದೆವು.

ಈ ಕಾರ್ಯಕ್ರಮದಲ್ಲಿ

ಮಾನ್ಯ ಶಾಸಕರು ಸಮೃದ್ಧಿ ಮಂಜುನಾಥ್, ಶ್ರೀನಿವಾಸಪುರ ಶಾಸಕ ವೆಂಕಟಶಿವರೆಡ್ಡಿ , ತಾಲ್ಲೂಕು ದಂಡಾಧಿಕಾರಿಗಳು ವಿ.ಗೀತಾ ಮೇಡಂ, ಕಾರ್ಯನಿರ್ವಹಣಾಧಿಕಾರಿಗಳು ಡಾ.. ಕೆ.ಸರ್ವೇಶ್, ನಗರಸಭೆ ಆಯುಕ್ತರು ವಿ.ಶ್ರೀಧರ್, ದಸಂಸ ಸಂಯೋಜಕ ಜಿಲ್ಲಾ ಸಂಘಟನಾ ಸಂಯೋಜಕರಾದ ಮೆಕಾನಿಕ್ ಶ್ರೀನಿವಾಸ್, ಕೀಲುಹೋಳಲಿ ಸತೀಶ್, ತಾತಿಕಲ್ ರಾಮಚಂದ್ರ, ಗಣೇಶ್ ಪಾಳ್ಯ ಕಿಟ್ಟಿ, ಗುಜ್ಜಮಾರಂಡಹಳ್ಳಿ ಜಗದೀಶ್, ರೈತಮಿತ್ರ ಅಧ್ಯಕ್ಷ ಎಂ. ವಿ. ಬಾಲಕೃಷ್ಣ, ಕಪ್ಪಲಮಡುಗು ಅಶೋಕ್, ಬಂಡಹಳ್ಳಿ ಶ್ರೀರಾಮ್, ರೆಡ್ಡಿ ಹಳ್ಳಿ ಅಭಿ,ಎಂ.ಪಿ.ವಾಜೀದ್, ಜೈ ಭೀಮ್ ನಗರ ನಾರಾಯಣಮ್ಮ, ಕನ್ನಸಂದ್ರ ಪದ್ಮಮ್ಮ, ದುಲಪಲ್ಲಿ ಶಿಲ್ಪ, ಇನ್ನೂ ಅನೇಕ ದಸಂಸ ಸಂಯೋಜಕ ಸಮಿತಿಯ ಪದಾಧಿಕಾರಿಗಳ ಭಾಗವಹಿಸಿದ್ದರು

# ವಿರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಶುದ್ಧ ಕುಡಿಯುವ ನೀರು ಪೂರೈಕೆ

**530ನೇ ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟನೆ .**




**ಶಿರಾ:** ತಾಲೂಕಿನಲ್ಲಿ ಫ್ಲೋರೈಡ್‌ಯುಕ್ತ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರವಾಗಿ ಧರ್ಮಸ್ಥಳ ಕ್ಷೇತ್ರದ ಧರ್ಮಾಧಿಕಾರಿ ವಿರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಶುದ್ಧಗಂಗಾ ನೀರಿನ ಘಟಕಗಳನ್ನು ಸ್ಥಾಪಿಸಿ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ ಎಂದು ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸಮುದಾಯ ಅಭಿವೃದ್ಧಿ ವಿಭಾಗದ ಪ್ರಾದೇಶಿಕ ನಿರ್ದೇಶಕರಾದ ಆನಂದ್ ಸುವರ್ಣ ತಿಳಿಸಿದರುಶಿರಾ ತಾಲ್ಲೂಕು ರಾಮಲಿಂಗಪುರ ಗ್ರಾಮ ಪಂಚಾಯತಿ ಬರುವ ಮಾದೇನಹಳ್ಳಿ ಗ್ರಾಮದಲ್ಲಿ ನೂತನ ಕಟ್ಟಡದ 530 ಶುದ್ಧಗಂಗಾ ಘಟಕದ ಉದ್ಘಾಟನಾ . ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಕಾಲಕ್ಕೆ ಮಳೆಯಾಗದೇ ಅಂತರ್ಜಲ ಕುಸಿತ: ಪ್ರಕೃತಿ ವೈಪರೀತ್ಯದ ಪರಿಣಾಮ ಕಾಲ ಕಾಲಕ್ಕೆ ಉತ್ತಮ ಮಳೆಯಾಗದೇ ಅಂತರ್ಜಲ ಬತ್ತಿರುವ ಕಾರಣ ರಾಜ್ಯದ ಅನೇಕ ಭಾಗಗಳ ಕೊಳವೆ ಬಾವಿಗಳಲ್ಲಿ ಜನ, ಜಾನುವಾರುಗಳು ಕುಡಿಯಲು ಯೋಗ್ಯವಲ್ಲದ ಫ್ಲೋರೈಡ್ ಯುಕ್ತ ನೀರು ಬರುತ್ತಿದೆ ಎಂದರು.

ಫ್ಲೋರೈಡ್ ಯುಕ್ತ ನೀರನ್ನು ಕುಡಿದ ಅನೇಕ ಜನರು ಹಲವಾರು ಕಾಯಿಲೆಗಳಿಗೆ ತುತ್ತಾಗುತ್ತಿರುವ ಕಾರಣ ಧರ್ಮಸ್ಥಳ ಕ್ಷೇತ್ರದ ಧರ್ಮಾಧಿಕಾರಿಗಳಾದ ವಿರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಗ್ರಾಮೀಣಾಭಿವೃದ್ಧಿ ಯೋಜನೆ ಸಂಸ್ಥೆಯ ಶುದ್ಧಗಂಗಾ ಘಟಕಗಳನ್ನು ನಗರ ಸೇರಿದಂತೆ ತಾಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಸ್ಥಾಪನೆ ಮಾಡುವ ಮೂಲಕ ಅತ್ಯಂತ ಕಡಿಮೆ ದರದಲ್ಲಿ ಕುಡಿಯುವ ನೀರನ್ನು ಪೂರೈಕೆ ಮಾಡಲಾಗುತ್ತಿದೆ. ಇಂತಹ ಶುದ್ಧಗಂಗಾ ನೀರಿನ ಘಟಕಗಳು ಸ್ಥಾಪನೆ ಮಾಡಲಾಗಿದೆ ಎಂದು ಹೇಳಿದರು.

ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಜಿಲ್ಲಾ ನಿರ್ದೇಶಕರದ ದಿನೇಶ ಡಿ ಮಾತನಾಡಿ, ನಮ್ಮ ಸೇವಾ ಸಂಸ್ಥೆಯ ಸ್ಥಾಪನೆಯನ್ನು ಮಾಡಿರುವ ಶುದ್ಧಗಂಗಾ ನೀರಿನ ಘಟಕ ಅತ್ಯಂತ ಫಲಪ್ರದವಾಗಿ ಕಾರ್ಯನಿರ್ವಹಿಸುತ್ತಿದ್ದು, ಸಾಮಾನ್ಯ ಜನರ ಹಿತಾಸಕ್ತಿಯನ್ನು ಕಾಪಾಡುವಲ್ಲಿ ಯಶಸ್ವಿಯಾಗಿದೆ ಎಂದರು. ಕಾರ್ಯಕ್ರಮದಲ್ಲಿ ರಾಮಲಿಂಗಪುರ ಗ್ರಾಮ ಪಂಚಾಯತಿ PDO ಮಾರಣ್ಣ ಹಾಗೂ ಗ್ರಾಮ ಪಂಚಾಯತಿ ಅಧ್ಯಕ್ಷರು ಭುವನೇಶ್ವರಿ ರೇವಣ್ಣ ನವರು ಮಾದೇನಹಳ್ಳಿ ಗ್ರಾಮದ ಸದ್ಯಸರ ರತ್ನಮ್ಮ ಲೋಕೇಶ. ರಂಗದಾಮಯ್ಯ ಹಾಗೂ ಗಿರೀಶ್ ಜೆ ರವರು ಮತ್ತು ತಾಲೂಕು ಯೋಜನಾಧಿಕಾರಿಗಳ ರಮೇಶ್ ಎನ್ ಶುದ್ಧ ಗಂಗಾ ಮೇಲ್ವಿಚಾರಕರು ವಿರೂಪಾಕ್ಷ ವಲಯದ ಮೇಲ್ವಿಚಾರಕರು ಪ್ರಮೀಳಾ ಹಾಗೂ ವಲಯದ ಎಲ್ಲ ಸೇವಾ ಪ್ರತಿನಿಧಿಗಳು ಮತ್ತು ಸಂಘದ ಸದಸ್ಯರು ಹಾಗೂ ಗ್ರಾಮದ ಸದಸ್ಯರ ಸೇರಿದಂತೆ ಶುದ್ಧಗಂಗಾ ಘಟಕದ ಪ್ರೇರಕರು ಮತ್ತು ಸಿಬ್ಬಂದಿ ಹಾಗೂ ಸೇವಾ ಪ್ರತಿನಿಧಿಗಳು ಭಾಗವಹಿಸಿದ್ದರು.

# ಕಾಡಂಚಿನ ಸೋಲಿಗರಿಗೆ ಸಿಗುತ್ತ ವಸತಿ ಭಾಗ್ಯ!?

**ವರದಿ: ರಾಮಸಮುದ್ರ ಎಸ್.ವೀರಭದ್ರಸ್ವಾಮಿ**

**ಚಾಮರಾಜನಗರ:** ಅದು ದೇವರ ಮಕ್ಕಳ ನಾಡು..ಅಲ್ಲಿ ಸೋಲಿಗರ ಮಕ್ಕಳು. ಸ್ವಾತಂತ್ರ್ಯಪೂರ್ವದಿಂದಲೂ ಕಾಡಿನಲ್ಲಿ ವಾಸಿಸುತ್ತಿದ್ದಾರೆ. ಸೋಲಿಗರು ಸೋರುವ ಹಳೆಯ ಮನೆ (ಗುಡಿಸಲು)ಜೋಪುಡಿಗಳಲ್ಲಿ ಇಂದಿಗೂ ವಾಸಿಸುತ್ತಿದ್ದಾರೆ. ಇಂತಹ ಸೋಲಿಗರಿಗೆ ವಸತಿ ವ್ಯವಸ್ಥೆ ಕಲ್ಪಿಸಲು ವಿಶೇಷ ಯೋಜನೆಯಡಿ ಮನೆಗಳನ್ನು ಮಂಜೂರು ಮಾಡುವಂತೆ ಸರ್ಕಾರಕ್ಕೆ ಜಿಲ್ಲಾಡಳಿತ ಪ್ರಸ್ತಾವನೆ ಸಲ್ಲಿಸಿದೆ.

ಗಡಿ ಜಿಲ್ಲೆ ಚಾಮರಾಜನಗರದ ಅರಣ್ಯ ಹಾಗೂ ಅರಣ್ಯದಂಚಿನಲ್ಲಿ ಸುಮಾರು 32 ಸಾವಿರಕ್ಕೂ ಹೆಚ್ಚು ಬುಡಕಟ್ಟು ಸೋಲಿಗ ಕುಟುಂಬಗಳು ವಾಸ ಮಾಡುತ್ತಿವೆ. ಬಹುತೇಕ ಸೋಲಿಗರು ವಾಸ ಮಾಡ್ತಿರುವ ಮನೆಗಳು ಸುಸ್ಥಿತಿಯಲ್ಲಿಲ್ಲ. ಚಿಕ್ಕ ಮಣ್ಣಿನ ಗೋಡೆಯ ಮನೆಗಳು ಹಾಗೂ ಜೋಪುಡಿಗಳಲ್ಲಿ ಇಂದಿಗೂ ಕೂಡ ಸೋಲಿಗರು ವಾಸ ಮಾಡ್ತಿದ್ದಾರೆ. ಅರಣ್ಯದಂಚಿನಲ್ಲಿರುವ ಜೇನು ಕುರುಬರಿಗೆ ಮಾತ್ರ ಹಿಂದಿನಿಂದಲೂ ಸರ್ಕಾರದ ವತಿಯಿಂದ ಪಾರಂಪರಿಕವಾಗಿ ಅವರಿಗೆ 4.50 ಲಕ್ಷ ರೂಪಾಯಿ ವೆಚ್ಚದಲ್ಲಿ ಮನೆ ನಿರ್ಮಿಸಿಕೊಡಲಾಗುತ್ತಿದೆ.

ಆದರೆ ಗಡಿ ಜಿಲ್ಲೆ ಚಾಮರಾಜನಗರದಲ್ಲಿ ಜೇನು ಕುರುಬ ಸಮುದಾಯಕ್ಕಿಂತ ಹೆಚ್ಚಾಗಿ ಬೇರೆ ಸಮುದಾಯದ ಸೋಲಿಗರು ವಾಸ ಮಾಡಿಕೊಂಡು ಬರುತ್ತಿದ್ದಾರೆ. ಇತರ ಸಮುದಾಯದ ಸೋಲಿಗರಿಗೂ ಕೂಡ ಮನೆ ಕಟ್ಟಿಕೊಡಲೂ ಜಿಲ್ಲಾಡಳಿತ ಪ್ಲಾನ್ ಮಾಡಿದ್ದು, ಸರ್ಕಾರಕ್ಕೆ 2995 ಮನೆ ನಿರ್ಮಿಸುವ ಯೋಜನೆಗೆ ಪ್ರಸ್ತಾವನೆ ಸಲ್ಲಿಸಿದೆ.

ಇನ್ನೂ ಸೋಲಿಗರಿಗೆ ಮನೆ ನಿರ್ಮಿಸಿಕೊಡುವ ಬಗ್ಗೆ ಚಿಂತನೆ ನಡೆಸಿದ್ದ ಜಿಲ್ಲಾಡಳಿತ ಮೊದಲಿಗೆ ಸರ್ವೇ ಕಾರ್ಯ ನಡೆಸಿತ್ತು. ಈ ವೇಳೆ 243 ಕುಟುಂಬಗಳಿಗೆ ಮನೆಯಷ್ಟೇ ಅಲ್ಲ ನಿವೇಶನ ಕೂಡ ಇಲ್ಲದಿರುವುದು ಕಂಡು ಬಂದಿದೆ. ಅಂತಹ ಕುಟುಂಬಗಳಿಗೂ ಕೂಡ ನಿವೇಶನದ ಜೊತೆಗೆ ಮನೆ ನಿರ್ಮಿಸಿ ಕೊಡಲು ತೀರ್ಮಾನಿಸಲಾಗಿದೆ. ಒಟ್ಟಾರೆ ಈ ಯೋಜನೆಗೆ ಒಂದು ಮನೆಗೆ 5 ಲಕ್ಷದಂತೆ 3 ಸಾವಿರ ಮನೆಗಳಿಗೆ 150 ಕೋಟಿ ರೂ. ಅಂದಾಜು ವೆಚ್ಚ ತಯಾರಿಸಿ ಸರ್ಕಾರಕ್ಕೆ ಪ್ರಸ್ತಾವನೆ ಕೊಟ್ಟಿದ್ದಾರೆ. ಇದಕ್ಕೆ ಜಿಲ್ಲಾಡಳಿತ ಹಾಗೂ ಜನಪ್ರತಿನಿಧಿಗಳು ಕೂಡ ಕೈ ಜೋಡಿಸಿದ್ದಾರೆ. ಅಲ್ಲದೇ ಸರ್ಕಾರ ಅನುಮೋದನೆ ಕೊಟ್ಟರೆ ಈ ಯೋಜನೆಗೆ ಸಿದ್ದು ನಿವಾಸ ಯೋಜನೆ ಎಂದು ಹೆಸರಿಡಲೂ ಕೂಡ ಚಿಂತಿಸಿದ್ದಾರೆ.

ಒಟ್ಟಾರೆಯಾಗಿ, ಅರಣ್ಯ ಹಾಗೂ ಅರಣ್ಯದಂಚಿನಲ್ಲಿ ವಾಸಿಸುವ ಸೋಲಿಗರಿಗೆ ಸೂರನ್ನು ಒದಗಿಸಿ ಕೊಡಲು ಜಿಲ್ಲಾಡಳಿತ ಸರ್ಕಾರಕ್ಕೆ ವಿಶೇಷ ಪ್ರಸ್ತಾವನೆ ಕೊಟ್ಟಿದ್ದಾರೆ. ಸಿಎಂ ಸಿದ್ದರಾಮಯ್ಯ ಹಾಡಿ ಜನರ ಕಷ್ಟಗಳನ್ನು ಅರಿತಿದ್ದಾರೆ.



ಆದ್ರಿಂದ ಸಿಎಂ ಸಿದ್ದರಾಮಯ್ಯ ಹಾಗೂ ಸಂಪುಟ ಈ ವಿಶೇಷ ಯೋಜನೆಗೆ ಅಸ್ತು ಅಂತಾರಾ ಅಥವಾ ಇಲ್ವಾ ಅನ್ನೋದ್ನ ಕಾದುನೋಡಬೇಕಾಗಿದೆ.

# ಕಟ್ಟಡ, ಇತರೆ ಕಾಮಗಾರಿ ನಿರ್ಮಾಣದ ಸುಂಕ ಸಕಾಲದಲ್ಲಿ ಪಾವತಿಗೆ ಜಿಲ್ಲಾಧಿಕಾರಿ ಶಿಲ್ಪಾನಾಗ್ ಸೂಚನೆ

ಚಾಮರಾಜನಗರ: ಕಟ್ಟಡ ಹಾಗೂ ಇತರೆ ಕಾಮಗಾರಿಗಳ ನಿರ್ಮಾಣ ವೆಚ್ಚದ ಮೇಲೆ ಶೇ. 1ರಷ್ಟು ಸುಂಕವನ್ನು ಸಂಬಂಧಪಟ್ಟ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ಸಕಾಲದಲ್ಲಿ ಪಾವತಿಸಲು ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಕಟ್ಟಡ ಕಾಮಗಾರಿಗಳ ಸುಂಕ ಪಾವತಿ ಕುರಿತು ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಸುಂಕ ಕಾಯ್ದೆ 1996 ಮತ್ತು 1998ರ ನಿಯಮಗಳಡಿಯಲ್ಲಿ ಸರ್ಕಾರಿ ಹಾಗೂ ಖಾಸಗಿಯಾಗಿ ಕೈಗೊಳ್ಳುವ ಯಾವುದೇ ಕಾಮಗಾರಿಗಳ ವೆಚ್ಚದ ಮೇಲೆ ಸಂಬಂಧಪಟ್ಟ ಗುತ್ತಿಗೆದಾರರು ಹಾಗೂ ಏಜೆನ್ಸಿಗಳಿಂದ ಶೇ. 1ರಷ್ಟು ಸುಂಕ ಸಂಗ್ರಹಿಸಿ ಕಾರ್ಮಿಕರ ಕಲ್ಯಾಣ ಮಂಡಳಿಗೆ ನಿಗದಿತ ಕಾಲಮಿತಿಯಲ್ಲಿ ಪಾವತಿಸುವುದು ಕಡ್ಡಾಯವಾಗಿದೆ. ಜಿಲ್ಲೆಯ ನಗರ, ಸ್ಥಳೀಯ ಸಂಸ್ಥೆ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಮಂಜೂರಾಗುವ ಕಾಮಗಾರಿಗಳ ಸುಂಕ ಸಂಗ್ರಹಿಸಿ ಪಾವತಿಸುವಲ್ಲಿ ಯಾವುದೇ ವಿಳಂಬಕ್ಕೆ ಅವಕಾಶವಾಗದಂತೆ ಸಂಬಂಧಪಟ್ಟ



ಅಧಿಕಾರಿಗಳು ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.


ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ಮಾಡುವ ಕಾರ್ಮಿಕರನ್ನು ಫಲಾನುಭವಿಗಳಾಗಿ ಗುರುತಿಸಲಾಗಿದೆ. ಕಾರ್ಮಿಕರ ಕಲ್ಯಾಣ ಮಂಡಳಿಗೆ ಗುತ್ತಿಗೆದಾರರು, ಏಜೆನ್ಸಿಗಳಿಂದ ಸಂಗ್ರಹಿಸಿದ ಸುಂಕದ ಮೊತ್ತದಲ್ಲಿ ನೊಂದಾಯಿತ ಕಟ್ಟಡ ಕಾಮಗಾರಿಗಳ ಕಾರ್ಮಿಕರು ಮತ್ತು ಅವರ ಅವಲಂಬಿತರ ಶ್ರೇಯೋಭಿವೃದ್ಧಿ ಹಾಗೂ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಕಲ್ಪಿಸಲು ಬಳಸಲಾಗುತ್ತದೆ. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಹೆಚ್ಚು ಹೆಚ್ಚು ಕಾರ್ಮಿಕರನ್ನು ನೊಂದಾಯಿಸಲು ಅಧಿಕಾರಿಗಳು ಕಾರ್ಯಪ್ರವೃತ್ತರಾಗುವಂತೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಸೇರಿದಂತೆ ಈವರೆಗೆ ಒಟ್ಟು 64,500 ಕಟ್ಟಡ ಕಾರ್ಮಿಕರು ನೊಂದಾಯಿಸಿಕೊಂಡಿದ್ದು, ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಫಲಾನುಭವಿ ಕಾರ್ಮಿಕರಿಗೆ ವಿವಿಧ ಸೌಲಭ್ಯಗಳನ್ನು ಒದಗಿಸಲಾಗುತ್ತದೆ. ಪಿಂಚಣಿ, ಕುಟುಂಬ ಹಾಗೂ ದುರ್ಬಲತೆ ಪಿಂಚಣಿ, ಟೂ□□□ಕಿಟ್ ಸೌಲಭ್ಯ, ಮಕ್ಕಳ ಅಪೌಷ್ಠಿಕತೆ ವೆಚ್ಚ, ವಿವಾಹ ಸಹಾಯಧನ, ವೈದ್ಯಕೀಯ ವೆಚ್ಚ, ಹೆರಿಗೆ ಸೌಲಭ್ಯ, ಅಂತ್ಯಕ್ರಿಯೆ ವೆಚ್ಚ, ಮಕ್ಕಳ ಶೈಕ್ಷಣಿಕ ಸಹಾಯಧನ, ಅಪಘಾತ ಪರಿಹಾರ ಸೌಲಭ್ಯಗಳಿಂದ ಯಾವುದೇ ಕಾರ್ಮಿಕರು ವಂಚಿತರಾಗದಂತೆ ಎಚ್ಚರ ವಹಿಸವಂತೆ ಜಿಲ್ಲಾಧಿಕಾರಿಯವರು ತಿಳಿಸಿದರು.

ಕಟ್ಟಡ ಮತ್ತು ಇತರೆ ಕಾಮಗಾರಿ ನಿರ್ವಹಿಸುವ ಎಲ್ಲಾ ಟೆಂಡರುದಾರರು, ಏಜೆನ್ಸಿಗಳು ಕಾರ್ಮಿಕ ಇಲಾಖೆಯಿಂದ ಕಡ್ಡಾಯವಾಗಿ ಬಿ.ಒ.ಸಿ.ಡಬ್ಲೂ ಪರವಾನಗಿ ಪಡೆಯಬೇಕು. ಪರವಾನಗಿ ಪಡೆಯಲು ಆಧಾರ್ ಕಾರ್ಡ್, ಕಟ್ಟಡ ನಿರ್ಮಾಣದ ಸುಂಕ ಕಟ್ಟಿರುವ ವಿವರ ಹಾಗೂ ಕಟ್ಟಡ ಕೆಲಸಕ್ಕೆ ಮಕ್ಕಳನ್ನು ಬಳಸಿಕೊಂಡಿಲ್ಲದಿರುವ ಬಗ್ಗೆ ಪತ್ರ ನೀಡಬೇಕು. ಪರವಾನಗಿಯನ್ನು ಜಿಲ್ಲಾಮಟ್ಟದಲ್ಲಿ ನೀಡಲಾಗುತ್ತಿದ್ದು, ತಾಲೂಕುಮಟ್ಟದ ಹೆ□□□□□ಡೆಸ್ಕ್ ಸ್ಥಾಪಿಸಬೇಕು. ಈ ಸಂಬಂಧ ಉಸ್ತುವಾರಿಗಾಗಿ ನೋಡೆಲ್ ಅಧಿಕಾರಿಯನ್ನು ನೇಮಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ಎಂ. ಸವಿತ, ನಗರಸಭೆ ಪೌರಾಯುಕ್ತರಾದ ಎಸ್.ವಿ. ರಾಮದಾಸ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಸುಧಾ, ಜಂಟಿ ಕೃಷಿ ನಿರ್ದೇಶಕರಾದ ಅಬೀದ್, ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಪ್ರವಾಸಕ್ಕೆ ಹೋಗಿದ್ದ ವಿದ್ಯಾರ್ಥಿಗಳು ನೀರುಪಾಲು : ಶೋಧ



**ಮುಳಬಾಗಿಲು** : ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ತಾಲೂಕಿನ ಮುರಡೇಶ್ವರ ಕಡಲ ತೀರ ಅರಬ್ಬಿ ಸಮುದ್ರದಲ್ಲಿ ಈಜಲು ತೆರಳಿದ್ದ 7 ಜನ ಮುಳಬಾಗಿಲು ವಿದ್ಯಾರ್ಥಿನಿಯರು ನೀರು ಪಾಲಾಗಿದ್ದಾರೆ. ಕೋಲಾರ ಜಿಲ್ಲೆಯ ಮುಳಬಾಗಲು ತಾಲ್ಲೂಕಿನ ಗ್ರಾಮೀಣ ಭಾಗದ ವಿದ್ಯಾರ್ಥಿನಿಯರು ಭಾನುವಾರ ಸಂಜೆ ಉತ್ತರ ಕನ್ನಡ ಹಾಗು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮೂರು ದಿನಗಳ ಕಾಲ ಪ್ರವಾಸ ಕೈಗೊಂಡಿದ್ರು. ಸಮುದ್ರದಲ್ಲಿ ಈಜಲು ಹೋಗಿದ್ದ ಏಳು ಜನ ವಿದ್ಯಾರ್ಥಿನಿಯರ ಪೈಕಿ ಮೂರು ಜನ ವಿದ್ಯಾರ್ಥಿನಿಯರಾದ ಯಶೋಧ, ವೀಕ್ಷಣಾ, ಲಿಪಿಕಾ ರಕ್ಷಣೆಯಾಗಿದ್ದು, ಈ ಪೈಕಿ ಮುಳಬಾಗಲು ತಾಲ್ಲೂಕಿನ ಪೂಜಾರಹಳ್ಳಿ ಗೋಪಾಲಪ್ಪ ಎಂಬುವವರ ಪುತ್ರಿ ಶ್ರಾವಂತಿ ಸಾವನ್ನಪ್ಪಿದ್ದಾಳೆ. ಕಾಣೆಯಾಗಿರುವ 9 ನೇ ತರಗತಿಯ ಮೂವರು ವಿದ್ಯಾರ್ಥಿನಿಯರಿಗಾಗಿ ಹುಡುಕಾಟ ನಡೆಯುತ್ತಿದ್ದು, ಮುಳಬಾಗಲು ತಾಲ್ಲೂಕಿನ ಎನ್.ಗಡ್ಡೂರು ನಿವಾಸಿ ಜೈರಾಮಪ್ಪ ಪುತ್ರಿ ದೀಕ್ಷ, ಮುಳಬಾಗಲು ತಾಲ್ಲೂಕಿನ ಹಬ್ಬಣಿ ಗ್ರಾಮದ ಚನ್ನರೆಡ್ಡಪ್ಪ ಪುತ್ರಿ ಲಾವಣ್ಯ, ಮುಳಬಾಗಲು ತಾಲ್ಲೂಕಿನ ದೊಡ್ಡಗುಟ್ಟಹಳ್ಳಿಯ ಮುನಿರಾಜು ಪುತ್ರಿ ವಂದನ ಕಾಣೆಯಾದ ವಿದ್ಯಾರ್ಥಿನಿಯರು. ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ತಾಲೂಕಿನ ಮುರುಡೇಶ್ವರ ಕಡಲ ತೀರದಲ್ಲಿ ಇಂದು ಸಂಜೆ ಈಜುವ ವೇಳೆ ಈ ಘಟನೆ ನಡೆದಿದೆ. ಕೋಲಾರದ ಮುಳಬಾಗಿಲು ತಾಲ್ಲೂಕಿನ ಕೊತ್ತೂರು ಮೊರಾರ್ಜಿ ದೇಸಾಯಿ ವಸತಿ ಶಾಲೆಯಿಂದ ಪ್ರವಾಸಕ್ಕೆ ತೆರಳಿದ್ದ 6 ಜನ ಶಿಕ್ಷಕರು ಸೇರಿದಂತೆ 54 ವಿದ್ಯಾರ್ಥಿನಿಯರಾಗಿದ್ದು, ಅರಬ್ಬಿ ಸಮುದ್ರದಲ್ಲಿ ಈಜುವಾಗ ಅಲೆಗೆ ಸಿಲುಕಿ ಘಟನೆ 7 ಜನ ನಾಪತ್ತೆಯಾಗಿದ್ರು, ಇದರಲ್ಲಿ ಮೂವರ ರಕ್ಷಣೆಯಾಗಿದ್ದು, ಮೂವರಿಗಾಗಿ ಶೋಧ ಕಾರ್ಯ ನಡೆಯುತ್ತಿದೆ, ಸದ್ಯ ಓರ್ವ ವಿದ್ಯಾರ್ಥಿನಿ ಶ್ರಾವಂತಿ ವಿದ್ಯಾರ್ಥಿನಿ ಶವ ಪತ್ತೆಯಾಗಿದೆ. ಇನ್ನೂ ಸ್ಥಳದಲ್ಲೆ ಇರುವ ಎಸ್ಪಿ ನಾರಾಯಣ ಅವರು ಕಾರ್ಯಾಚರಣೆ ಉಸ್ತುವಾರಿ ವಹಿಸಿಕೊಂಡಿದ್ದಾರೆ.

## ಜನಮಂಗಲ ಕಾರ್ಯಕ್ರಮದಡಿ ವೀಲ್ ಚೇರ್ ವಿತರಣೆ

**ಮಾಲೂರು:** ತಾಲ್ಲೂಕಿನ ಎಟ್ಟಕೋಡಿ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ ಸಿ ಟ್ರಸ್ಟ್ ವತಿಯಿಂದ ಪುನೀತ್ ಎಂಬುವರು ಕಳೆದ ಎಂಟು ವರ್ಷದಿಂದ ಕೈ ಕಾಲು ಸ್ವಾಧೀನದಿಂದ ಬಳಲುತ್ತಿದ್ದು ಆದಕಾರಣ ಅವರಿಗೆ ಧರ್ಮಸ್ಥಳ ಸಂಸ್ಥೆಯ ಧರ್ಮಾಧಿಕಾರಿಗಳಾದ ಡಾ. ಡಿ. ವೀರೇಂದ್ರ ಹೆಗ್ಗಡೆ ರವರ ಮಾರ್ಗದರ್ಶನದಲ್ಲಿ ಜನಮಂಗಲ ಕಾರ್ಯಕ್ರಮದಡಿಯಲ್ಲಿ ವೀಲ್ ಚೇರ್ ಯೋಜನಾಧಿಕಾರಿ ಎಚ್. ಸತೀಶ್ ವಿತರಣೆ ಮಾಡಿದರು.

ನಂತರ ಯೋಜನಾಧಿಕಾರಿ ಎಚ್. ಸತೀಶ್



ಮಾತನಾಡಿದ ತಾಲ್ಲೂಕಿನಲ್ಲಿ ಕೈ ಕಾಲು ಸ್ವಾಧೀನ ಇಲ್ಲದಿರುವವರಿಗೆ ವೀಲ್ ಚೇರ್ ಹಾಗೂ ವಾಟರ್ ಬೆಡ್, ಸ್ಟಿಕ್ ಇವುಗಳನ್ನು ಉಚಿತವಾಗಿ ವಿತರಣೆ ಮಾಡುತ್ತೀವೆ ಇಂತಹ ವ್ಯಕ್ತಿಗಳಾಗಲಿ, ಕುಟುಂಬಗಳು ಇದ್ದಲ್ಲಿ ನಮ್ಮ ಕಚೇರಿಗೆ ಮಾಹಿತಿ ನೀಡಿದರೇ ಸಹಾಯಕ ಮುಂದಾಗುವುದಾಗಿ ಹೇಳಿದರು..


ಈ ಸಂದರ್ಭದಲ್ಲಿ ಒಕ್ಕೂಟದ ಅಧ್ಯಕ್ಷ ಮಂಜುನಾಥ್ ಗ್ರಾಮಸ್ಥರಾದ ಅರುಣ್ ಕುಮಾರ್, ನಾಗರಾಜ್, ಹರೀಶ್, ಸೇವಾ ಪ್ರತಿನಿಧಿಯಾದ ಗಾಯತ್ರಿ ಹಾಗೂ ಸದಸ್ಯರು ಭಾಗವಹಿಸಿದ್ದರು.

## ಸರ್ಕಾರಿ ಜಮೀನಿನಲ್ಲಿ ಅಕ್ರಮ ಮನೆ ನಿರ್ಮಾಣ

ಚೇಳೂರು: ಸರ್ಕಾರಿ ಜಮೀನಿನಲ್ಲಿ ಅಕ್ರಮವಾಗಿ ಮನೆಗಳನ್ನು ನಿರ್ಮಾಣಮಾಡುತ್ತಿರುವ ಬಗ್ಗೆ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಲು ವಿಫಲರಾಗಿದ್ದಾರೆ ಎಂದು ಗ್ರಾಮಸ್ಥರು ದೂರಿದ್ದಾರೆ.

ಚೇಳೂರು ತಾಲೂಕಿನ ಎಂ.ನಲ್ಲಗುಟ್ಲಪಲ್ಲಿ ಗ್ರಾಮದ ಸರ್ವೆ ನಂ.8ರಲ್ಲಿ 4 ಎಕರೆ 32 ಗುಂಟೆ ಸರ್ಕಾರಿ ಜಮೀನುಆಗಿದ್ದು ಸಾರ್ವಜನಿಕರು ಪಂಚಾಯಿತಿಯಲ್ಲಿ ಅನುಮತಿ ಪಡೆಯದೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಅಕ್ರಮವಾಗಿ ಮನೆಗಳನ್ನು ನಿರ್ಮಾಣಮಾಡುತ್ತಿರುವುದು ಕಾನೂನು ಬಾಹಿರವಾಗಿದೆ.ಇದರ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ನೀಡಿದರೂ ಸಹ ಯಾವುದೇ ರೀತಿಯಾದ ಕ್ರಮ ಕೈಗೊಳ್ಳುವುದು ವಿಪರ್ಯಾಸವಾಗಿದೆ.ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಆಗಮಿಸಿ ಪರಿಶೀಲಿಸಿ ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರ ಮನವಿಯಾಗಿದೆ. ಗಿ ಮನೆಗಳನ್ನು ನಿರ್ಮಾಣಮಾಡುತ್ತಿರುವ ಸ್ಥಳಕ್ಕೆ





ಮನೆ ಕಟ್ಟಡದ ಅನುಮತಿ ಪತ್ರ

ನಂ. 31

ಮನೆ ಕಟ್ಟುವ ಜಾಗಕ್ಕೆ ಚಕ್ಕುಬಂದಿ

ಕಾರ್ಯದರ್ಶಿ

ಷರತ್ತುಗಳು :

ಅಧಿಕಾರಿಗಳು ಆಗಮಿಸಿ ಪರಿಶೀಲಿಸಿ ಕೂಡಲೇ ಕ್ರಮ ಕೈಗೊಳ್ಳದೆ ಇದ್ದರೆ ಕಾನೂನು ರೀತಿ ಹೋರಾಟ ಮಾಡಬೇಕಾಗುತ್ತದೆ ಎಂದು ಎನ್.ವಿ.ಪ್ರಸಾದ್‌ರೆಡ್ಡಿ, ಹೇಳಿದ್ದಾರೆ.ಎಂ.ನಲ್ಲಗುಟ್ಲಪಲ್ಲಿ ಗ್ರಾಮದಲ್ಲಿ ಸುಮಾರು ಬೆಲೆ ಬಾಳುವ ಸರ್ಕಾರಿ ಜಾಗವನ್ನು ಸಾರ್ವಜನಿಕರು ನಕಲಿ ದಾಖಲೆಗಳನ್ನು ಸೃಷ್ಟಿಸಿ ತಮ್ಮ ವಶಕ್ಕೆ ಸ್ವಾದೀನಪಡಿಸಿಕೊಂಡು ಕಟ್ಟಡ ನಿರ್ಮಾಣ ಮಾಡಿಕೊಂಡು ಕಾನೂನಿಗೆ ಮೋಸಮಾಡುತ್ತಿರುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕಾಗಿದೆ ಬೈಯಾರೆಡ್ಡಿ ತಿಳಿಸಿದ್ದಾರೆ.

# ಪ್ಲಾಸ್ಟಿಕ್ ಮುಕ್ತ ಚಿಕ್ಕಬಳ್ಳಾಪುರ ಜಿಲ್ಲೆಯಾಗಬೇಕು



ಚಿಕ್ಕಬಳ್ಳಾಪುರ : ವಾಯು ಮಾಲಿನ್ಯ ನಿಯಂತ್ರಣಕ್ಕಾಗಿ ಹಾಗೂ ನಿಷೇದಿತ ಪ್ಲಾಸ್ಟಿಕ್ ಬಳಸದೆ ಪರಿಸರ ಸ್ನೇಹಿ ಮಾರ್ಗೋಪಾಯಗಳ ಬಗ್ಗೆ ತಿಳಿದುಕೊಂಡು ಮತ್ತಿತರರಿಗೂ ಅರಿವು ಮೂಡಿಸಲು ಜಿಲ್ಲೆಯ ಸಮಸ್ತ ನಾಗರೀಕರು ಜಿಲ್ಲಾಡಳಿತದೊಂದಿಗೆ ಕೈ ಜೋಡಿಸಿ ಎಂದು ಅಪರ ಜಿಲ್ಲಾಧಿಕಾರಿ ಡಾ.ಎನ್ ಭಾಸ್ಕರ್ ಅವರು ಮನವಿ ಮಾಡಿದರು.

ಜಿಲ್ಲಾಡಳಿತ,ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಚಿಕ್ಕಬಳ್ಳಾಪುರ ವತಿಯಿಂದ ವಾಯು ಮಾಲಿನ್ಯ ನಿಯಂತ್ರಣ ಮಾಸಾಚರಣೆ ನವೆಂಬರ್ – 2024 ರ ಅಂಗವಾಗಿ ಗುರುವಾರ ನಗರದ ಸೆಂಟ್ ಜೋಸೆಫ್ ಕಾನ್ವೆಂಟ್ ಶಾಲೆಯಲ್ಲಿ ಹಮ್ಮಿಕೊಂಡಿದ್ದ "ವಾಹನಗಳಿಂದಾಗುವ ವಾಯುಮಾಲಿನ್ಯದ ವಿರುದ್ಧ ಸಮರ ಕಾರ್ಯಕ್ರಮ"ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತ ಮಾಡಲು ಅಂಗಡಿ, ಮುಂಗಟ್ಟುಗಳಿಗೆ,ಪ್ಲಾಸ್ಟಿಕ್ ಮಾರಾಟಗಾರರ ಮಳಿಗೆಗಳ ಮೇಲೆ ದಾಳಿ ನಡೆಸಿ ದಂಡ ವಿಧಿಸಲಾಗುತ್ತಿದೆ. ಸಾರ್ವಜನಿಕರು ಪ್ಲಾಸ್ಟಿಕ್ ವಸ್ತುಗಳನ್ನು ಬಳಸುವುದು ಕಡಿಮೆ ಮಾಡಬೇಕು, ನಿಷೇದಿತ ಪ್ಲಾಸ್ಟಿಕ್ ನ್ನು ಬಳಸಲೇ ಬಾರದು ಹಾಗೂ ನಿಮ್ಮ ನೆರೆ ಹೊರೆಯವರಿಗೂ ಪ್ಲಾಸ್ಟಿಕ್ ಬಳಕೆಯ ದುಷ್ಪರಿಣಾಮದ ಕುರಿತು ಜಾಗೃತಿ ಮೂಡಿಸಬೇಕು ಎಂದರು.

ಪಠ್ಯ ಪುಸ್ತಕಗಳಲ್ಲಿ ವಾಯು ಮಾಲಿನ್ಯ, ಜಲ ಮಾಲಿನ್ಯ, ಮಣ್ಣಿನ ಮಾಲಿನ್ಯ, ಹಾಗೂ ಇತರೆ ಮಾಲಿನ್ಯಗಳ ಕುರಿತು ಹೆಚ್ಚಿನ ಪ್ರಮಾಣದಲ್ಲಿ ಮಾಹಿತಿ ಇದೆ ಅದನ್ನು ಅರ್ಥೈಸಿಕೊಂಡು ಇತರರಿಗೂ ಅರಿವು ಮೂಡಿಸಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಪ್ರಾದೇಶಿಕ ಸಾರಿಗೆ ಅಧಿಕಾರಿ ಎ. ವಿವೇಕಾನಂದ ಅವರು ಮಾತನಾಡಿ 18 ವರ್ಷದೊಳಗಿನ ಮಕ್ಕಳು ವಾಹನ ಚಲಾಯಿಸುವಂತಿಲ್ಲ, ಅಂತಹ ಮಕ್ಕಳಿಗೆ ಪೋಷಕರು ವಾಹನ ಚಾಲನೆ ಮಾಡಲು ವಾಹನಗಳನ್ನು ನೀಡಬಾರದು.

ಜಿಲ್ಲೆಯಲ್ಲಿ ವಾಯು ಮಾಲಿನ್ಯದ ದುಷ್ಪರಿಣಾಮಗಳ ಕುರಿತು ತಿಳಸಲು ವಿವಿಧ ಶಾಲಾ ಕಾಲೇಜುಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.ಪರಿಸರ ಸ್ನೇಹಿ ಸಾರಿಗೆ, ಶಕ್ತಿ–ಸಮರ್ಥ ಮನೆಗಳು, ವಿದ್ಯುತ್ ಉತ್ಪಾದನೆ, ಉದ್ಯಮ ನಿಯಂತ್ರಣ, ಶುದ್ಧ ಇಂಧನ ಮತ್ತು ತಂತ್ರಜ್ಞಾನಗಳ ಬಳಕೆ ಮತ್ತು ಉತ್ತಮ ತ್ಯಾಜ್ಯ ನಿರ್ವಹಣೆಯನ್ನು ಬೆಂಬಲಿಸುವ ನೀತಿಗಳು ಮತ್ತು ಹೂಡಿಕೆಗಳು ವಾಯು ಮಾಲಿನ್ಯದ ಪ್ರಮುಖ ಮೂಲಗಳನ್ನು ಪರಿಣಾಮಕಾರಿಯಾಗಿ ಕಡಿಮೆ ಮಾಡಲಿವೆ. ಯುವ ಸಮುದಾಯ ಮಾಲಿನ್ಯಗಳ ಬಗ್ಗೆ ಹೆಚ್ಚು ಅರಿವು ಹೊಂದಿರಬೇಕು. ಇಂದಿನ ಜನಾಂಗದಿಂದ ಮುಂದಿನ ಪೀಳಿಗೆಗೆ ಉತ್ತಮ ವಾತವರಣ ನೀಡುವ ಕಾರ್ಯವಾಗಬೇಕು ಜಿಲ್ಲೆಯಲ್ಲಿ ವಾಹನಗಳಿಂದ 24% ರಷ್ಟು ವಾಯು ಮಾಲಿನ್ಯ ಉಂಟಾಗಿದೆ ಇದು ಮುಂದಿನ ದಿನಗಳಲ್ಲಿ ತಗ್ಗಬೇಕು ಎಂದು ತಿಳಿಸಿದರು.

ಹಿರಿಯ ಮೋಟಾರ್ ವಾಹನ ನೀರಿಕ್ಷರಾದ ನಾಗರಾಜ್ ನಾಯಕ್ ಅವರು ಮಾತನಾಡಿ ವಾಯುಮಾಲಿನ್ಯವು ಹೃದಯರಕ್ತನಾಳದ ಕಾಯಿಲೆಗೆ ಮುಖ್ಯ ಕಾರಣವಾದ ಅಂಶವಾಗಿದೆ, ಹೃದ್ರೋಗ, ಮತ್ತು ಪಾರ್ಶ್ವವಾಯು, ಶ್ವಾಸಕೋಶದ ಕ್ಯಾನ್ಸರ್, ಕಡಿಮೆ ಉಸಿರಾಟದ ಸೋಂಕುಗಳು, ಟೈಪ್ 2 ಡಯಾಬಿಟಿಸ್ ಗೆ ಪೂರಕವಾಗಲಿದೆ ಎಂದರು.

ವಾಹನಗಳಿಗೆ ಪೆಟ್ರೋಲ್, ಡೀಸೆಲ್ ಬಳಸುವದರಿಂದ ಕಾರ್ಬನ್ ಡೈ ಆಕ್ಸೈಡ್ ಹೊಗೆಯಿಂದಾಗಿ ಪರಿಸರದ ಮೇಲೆ ಹೆಚ್ಚು ಕೆಟ್ಟ ಪರಿಣಾಮ ಉಂಟಾಗುತ್ತದೆ. ಆದ್ದರಿಂದ ಸಮೂಹ ಸಾರಿಗೆಯನ್ನು ಹೆಚ್ಚು ಬಳಸಬೇಕು. ಈ ಮಾಹೆಯಲ್ಲಿ ಮಂಜಿನ ವಾತವರಣ ಹೆಚ್ಚಾಗಿದ್ದು ವಾಹನಗಳನ್ನು ನಿಧಾನವಾಗಿ ಚಲಾಯಿಸಬೇಕು. ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡುವ ಮೂಲಕ ಪರಿಸರ ಮಾಲಿನ್ಯವನ್ನು ತಪ್ಪಿಸಬೇಕು ಎಂದು ತಿಳಿಸಿದರು. ಈ ವೇಳೆ ವಾಯುಮಾಲಿನ್ಯ ನಿಯಂತ್ರಣ ಜಾಗೃತಿ ಮೂಡಿಸುವ ಕರಪತ್ರ ಹಾಗೂ ಭಿತ್ತಿ ಪತ್ರಗಳನ್ನು ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಮೋಟಾರ್ ವಾಹನ ನಿರೀಕ್ಷಕರಾದ ಅರುಣಾ, ಸೆಂಟ್ ಜೋಸೆಫ್ ಕಾನ್ವೆಂಟ್ ಶಾಲೆಯ ಪ್ರಾಂಶುಪಾಲರು,ಹಾಗೂ ಬೋಧಕ, ಬೋಧಕೇತರ ವರ್ಗದವರು, ಪ್ರಾದೇಶಿಕ ಸಾರಿಗೆ ಇಲಾಖೆಯ ಆಡಳಿತ ಸಿಬ್ಬಂದಿಯವರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸುದ್ದಿ ಸಂಜೆ

### ಕೊಳ್ಳೇಗಾಲದ ಮಾಜಿ ಶಾಸಕ ಜಯಣ್ಣ ನಿಧನ

**ಚಾಮರಾಜನಗರ :** ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಮೀಸಲು ವಿಧಾನ ಸಭಾ ಕ್ಷೇತ್ರ ಮಾಜಿ ಶಾಸಕ ಹಾಗೂ ರಾಜ್ಯ ಉಗ್ರಾಣ ಅಧ್ಯಕ್ಷ ಎಸ್ ಜಯಣ್ಣರವರು ಹೃದಯಘಾತದಿಂದ ನಿಧನರಾದರು. ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲದಲ್ಲಿ ನೆಲೆಸಿದ್ದ ಮಾಜಿ ಶಾಸಕ ಎಸ್ ಜಯಣ್ಣರವರು ಮಂಗಳವಾರ ಬೆಳಗ್ಗೆ ಮೈಸೂರಿಗೆ ತೆರಳುವಾಗ ಉತ್ತಂಬಳ್ಳಿ ಸಮೀಪ ಹೃದಯಘಾತಕ್ಕೆ ಒಳಗಾಗಿ ಅವರನ್ನು ಚಿಕಿತ್ಸೆಗೆ ದಾಖಲು ಮಾಡಲಾಗಿತ್ತು.ಎಸ್ ಜಯಣ್ಣರವರು ಕೊಳ್ಳೇಗಾಲದಲ್ಲಿ ನೂತನವಾಗಿ ನಿರ್ಮಾಣ ಮಾಡಿರುವ ಮನೆಯ ಗೃಹ ಪ್ರವೇಶಕ್ಕೆ ಸಂಬಂಧಿಸಿದಂತೆ ಗಣ್ಯರಿಗೆ ಆಹ್ವಾನ ಪತ್ರಿಕೆ ನೀಡಲು ಮೈಸೂರಿಗೆ ತೆರಳುವಾಗ ಹೃದಯಾತಕ್ಕೆ ಒಳಗಾಗಿ ಮೃತಪಟ್ಟರು.72 ವರ್ಷ ವಯಸ್ಸಿನ ಎಸ್ ಜಯಣ್ಣರವರು ಜನತಾದಳದಿಂದ ರಾಜಕಾರಣಕ್ಕೆ ಬಂದವರು. 1994 ರಲ್ಲಿ ಜೆಡಿಎಸ್ ನಿಂದ ಶಾಸಕರಾಗಿದ್ದರು, ಬಳಿಕ 2013 ರಲ್ಲಿ ಕಾಂಗ್ರೆಸ್ ನಿಂದ ಶಾಸಕರಾಗಿದ್ದರು. ಬಳಿಕ 2018 ರಲ್ಲಿ ಕಾಂಗ್ರೆಸ್ ನಿಂದ ಟಿಕೇಟ್ ಸಿಕ್ಕಿರಲಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯರವರ ಆಪ್ತರಾಗಿದ್ದ ಎಸ್ ಜಯಣ್ಣರವರು ಸಿದ್ದರಾಮಯ್ಯರವರ ಅನುಯಾಯಿಯಾಗಿದ್ದರು.ಮೃತ ಮಾಜಿ ಶಾಸಕ ಎಸ್ ಜಯಣ್ಣರವರ ಅಂತ್ಯಕ್ರಿಯೆ ಬುಧವಾರ ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ತಾಲ್ಲೂಕಿನ ಮಾಂಬಳ್ಳಿ ಗ್ರಾಮದಲ್ಲಿ ನಡೆಯಲಿದೆ.



**ಮುಖ್ಯಮಂತ್ರಿ ಸಂತಾಪ:** ಚಾಮಾಜನಗರ ಜಿಲ್ಲೆಯ ಕೊಳ್ಳೇಗಾಲ ಮಾಜಿ ಶಾಸಕ, ಉಗ್ರಾಣ ನಿಗಮದ ಅಧ್ಯಕ್ಷ ಜಯಣ್ಣ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಎಸ್.ಎಂ.ಕೃಷ್ಣ ಅವರ ಸಾವಿನ ಆಘಾತದಿಂದ ಚೇತರಿಸಿಕೊಳ್ಳುವ ಮುನ್ನವೇ ಜಯಣ್ಣ ಅವರ ಸಾವಿನ ಸುದ್ದಿ ಆಘಾತ ತಂದಿದೆ. ಜಯಣ್ಣ ನನ್ನ ಆತ್ಮೀಯರು. ನಮ್ಮ ನಡುವೆ ದೀರ್ಘಕಾಲದ ಒಡನಾಟವಿತ್ತು. ಇವರು 1994 ರಲ್ಲಿ ಜೆಡಿಎಸ್ ನಿಂದ ಹಾಗೂ 2013ರಲ್ಲಿ ಕಾಂಗ್ರೆಸ್ ಪಕ್ಷದಿಂದ ವಿಧಾನಸಭಾ ಚುನಾವಣೆಯಲ್ಲಿ ಗೆದ್ದಿದ್ದರು. ಪಕ್ಷ ಹಾಗೂ ಕ್ಷೇತ್ರದ ಅಭಿವೃದ್ಧಿಗೆ ಶ್ರಮವಹಿಸಿ ಕೆಲಸ ಮಾಡಿದ ಜಯಣ್ಣ ಜನಾನುರಾಗಿ ಶಾಸಕರಾಗಿದ್ದರು. ಜನರ ಕಷ್ಟಗಳಿಗೆ ಸದಾ ಮಿಡಿಯುತ್ತಿದ್ದರು. ಡಿಸೆಂಬರ್ ಏಳರಂದು ಚಾಮರಾಜನಗರ ಜಿಲ್ಲೆಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಜೊತೆಗಿದ್ದರು. ಅವರ ಮನೆಯಲ್ಲಿಯೇ ಊಟ ಮಾಡಿ ಬಂದಿದ್ದನ್ನು ಸ್ಮರಿಸಿದರು ಮುಖ್ಯಮಂತ್ರಿಗಳು, ಜಯಣ್ಣ ಅವರ ಸಾವು ವೈಯಕ್ತಿಕವಾಗಿ ಆಘಾತ ತಂದಿದೆ. ಅವರ ನಿಧನದಿಂದ ಜನಪ್ರಿಯ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ. ಭಗವಂತ ಮೃತರ ಆತ್ಮಕ್ಕೆ ಚಿರಶಾಂತಿ ನೀಡಲಿ. ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬದವರಿಗೆ ಹಾಗೂ ಅಭಿಮಾನಿಗಳಿಗೆ ನೀಡಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಮುಖ್ಯಮಂತ್ರಿಗಳು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

### ಬಾಪೂಜಿ ಬಿ.ಇಡಿ ಕಾಲೇಜಿಗೆ ಶೇ.100 ರಷ್ಟು ಫಲಿತಾಂಶ

ಮಾಲೂರು : ಪಟ್ಟಣದ ಶ್ರೀ ಬಾಪೂಜಿ ಬಿ.ಇಡಿ ಕಾಲೇಜು 2023–24 ನೇ ಶೈಕ್ಷಣಿಕ ಸಾಲಿನ 4ನೇ ಸೆಮಿಸ್ಟರ್ ನಲ್ಲಿ ಶೇ.100 ರಷ್ಟು ಫಲಿತಾಂಶ ಪಡಿದುಕೊಂಡಿರುವುದು ಶ್ಲಾಘನೀಯ ಎಂದು ಕಾಲೇಜಿನ ಪ್ರಾಂಶುಪಾಲ ಆರ್.ಮುನಿನಾರಾಯಣಪ್ಪ ಹೇಳಿದರು. ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಬಿ.ಇಡಿ. ಪರೀಕ್ಷೆಯ 2023–24 ನೇ ಶೈಕ್ಷಣಿಕ ಸಾಲಿನ 4 ನೇ ಸೆಮಿಸ್ಟರ್ ಪರೀಕ್ಷೆಯ ಫಲಿತಾಂಶ ಪ್ರಕಟಗೊಂಡಿದ್ದು, ಪರೀಕ್ಷೆಗೆ 48 ವಿದ್ಯಾರ್ಥಿಗಳು ಹಾಜರಿದ್ದು, 48 ವಿಧ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಎ.ವೈ.ಭವ್ಯ 600 ಕ್ಕೆ 568 ಅಂಕಗಳಿಸಿ 94.6 % ಪ್ರಥಮ ಸ್ಥಾನ, ಆರ್.ಮೋನಿಕ 600 ಕ್ಕೆ 561 ಅಂಕಗಳಿಸಿ 93.5% ದ್ವಿತೀಯ ಸ್ಥಾನ, ಕೆ.ಬಿ.ಜೀವನ್ 600 ಕ್ಕೆ 561ಅಂಕಗಳಿಸಿ 92.66% , ಕೆ.ಶೋಭ 600ಕ್ಕೆ 556 ಅಂಕಗಳಿಸಿ 92.66% ತೃತೀಯ ಸ್ಥಾನ ಗಳಿಸಿ ಕಾಲೇಜಿಗೆ, ಸಂಸ್ಥೆಯ ಅಧ್ಯಕ್ಷರಿಗೆ ಆಡಳಿತ ಮಂಡಳಿಗೆ , ಉಪಾನ್ಯಾಸಕರಿಗೆ ಕೀರ್ತಿ ತಂದಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಅಭಿನಂಧನೆಗಳು ಸಲ್ಲಿಸುವುದಾಗಿ ಹೇಳಿದರು.

### ಭತ್ತ, ರಾಗಿ ಕಟಾವು ಯಂತ್ರಕ್ಕೆ ಬಾಡಿಗೆ ದರ ನಿಗದಿ

ಚಾಮರಾಜನಗರ: ಭತ್ತ ಮತ್ತು ರಾಗಿ ಬೆಳೆ ಕಟಾವು ಯಂತ್ರಕ್ಕೆ ಬಾಡಿಗೆ ದರವನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನಿಗದಿಪಡಿಸಲಾಗಿದೆ. ಚೈನ್ ಮಾದರಿ ಭತ್ತದ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ 2400 ರೂ. ಟೈರ್ (ಗ್ರೀಪ್) ಮಾದರಿ ಭತ್ತದ ಕಟಾವು ಯಂತ್ರಕ್ಕೆ 1900 ರೂ., ಟೈರ್ (ಸಾಮಾನ್ಯ) ಮಾದರಿ ಭತ್ತದ ಕಟಾವು ಯಂತ್ರಕ್ಕೆ 1500 ರೂ. ರಾಗಿ ಕಟಾವು ಯಂತ್ರಕ್ಕೆ 2,800 ರೂ. ನಿಗದಿಪಡಿಸಲಾಗಿದೆ.


ಜಿಲ್ಲೆಯಲ್ಲಿ ಭತ್ತ ಹಾಗೂ ರಾಗಿ ಕಟಾವಿಗೆ ರೈತರು ಕಂಬೈನ್ಸ್ ಹಾರ್ವೆಸ್ಟರ್ ಯಂತ್ರಗಳನ್ನು ಬಾಡಿಗೆಗೆ ಪಡೆದು ಒಕ್ಕಣೆ ಮಾಡುವುದು ವಾಡಿಕೆಯಾಗಿರುತ್ತದೆ. ಕಂಬೈನ್ಸ್ ಹಾರ್ವೆಸ್ಟರ್ ಯಂತ್ರಗಳ ಬಾಡಿಗೆ ದರವನ್ನು ನಿಗದಿಪಡಿಸುವ ಸಲುವಾಗಿ ರೈತರು, ರೈತ ಮುಖಂಡರು, ಆರ್.ಟಿ.ಒ. ಅಧಿಕಾರಿಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳ ಸಭೆಯನ್ನು ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ನವೆಂಬರ್ 25ರಂದು ನಡೆಸಿ ಕಟಾವು ಯಂತ್ರ ದರ ನಿಗದಿ ಮಾಡಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಸಿನಿಮಾ ಮುಸ್ಸಂಜೆ

# ಮಿಡ್‌ನೈಟ್ ರಹಸ್ಯ ಬಿಚ್ಚಿಟ್ಟ ಅರ್ಜುನ್ ಕಪೂರ್!

ಸದ್ಯ ಬಾಲಿವುಡ್‌ನಲ್ಲಿ ಹಾಟ್ ಟಾಪಿಕ್‌ಗಳಲ್ಲಿ ಒಂದಾಗಿರುವುದು ನಟರಾದ ಮಲೈಕಾ ಅರೋರಾ ಮತ್ತು ಅರ್ಜುನ್ ಕಪೂರ್ ಬ್ರೇಕಪ್ ಕುರಿತು. ದಶಕದಿಂದ ರಿಲೇಷನ್‌ನಲ್ಲಿದ್ದ ಈ ನಟರು ಈಗ ಬ್ರೇಕಪ್ ಆಗಿರುವುದು ಕನ್‌ಫರ್ಮ್ ಆಗಿದೆ. ಇದಾಗಲೇ ಅರ್ಜುನ್ ಕಪೂರ್ ತಾವು ಸಿಂಗಲ್ ಎಂದು ಹೇಳಿದ್ದಾರೆ. ಹತ್ತು ವರ್ಷ ದೊಡ್ಡವಳಾಗಿರುವ ಮಲೈಕಾ ಜೊತೆ ದಶಕದವರೆಗೆ ಲಿವ್ ಇನ್ ರಿಲೇಷನ್‌ನಲ್ಲಿದ್ದ ಅರ್ಜುನ್ ಕೂಡ ಬ್ರೇಕಪ್ ಬಗ್ಗೆ ಮಾತನಾಡಿದ್ದಾರೆ. ಇದಾಗಲೇ ಮಲೈಕಾ ಕೂಡ ಹಲವಾರು ರೀತಿಯಲ್ಲಿ ತಾವು ಒಂಟಿಯಾಗಿರುವುದಾಗಿ ಹೇಳಿಕೊಂಡಿದ್ದಾರೆ. ಇವತ್ತು ಕೂಡ ಇನ್ನೊಂದು ಪೋಸ್ಟ್ ಹಾಕಿ, ಯಾರು ನನ್ನನ್ನು ಇಷ್ಟಪಡುವುದಿಲ್ಲ ಎಂದು ಚಿಂತಿಸಲು ನನಗೆ ಸಮಯವಿಲ್ಲ. ನನ್ನನ್ನು ಪ್ರೀತಿಸುವ ಜನರನ್ನು ಪ್ರೀತಿಸುವುದರಲ್ಲಿ ನಾನು ತುಂಬಾ ನಿರತನಾಗಿದ್ದೇನೆ ಎಂದು ಬರೆದುಕೊಂಡಿದ್ದಾರೆ. ವಯಸ್ಸು 50 ಆದ್ರೂ ಇನ್ನೂ ಮಾದಕ ನೋಟ, ಬಟ್ಟೆಗಳಿಂದ ಅಭಿಮಾನಿಗಳ ಹೃದಯ ಕದಿಯುತ್ತಿದ್ದಾರೆ ಈ ಬಾಲಿವುಡ್




ನಟಿ. ಈ ಮೂಲಕ ಹಸಿಬಿಸಿ ಲೇಡಿ ಎಂದೇ ಫೇಮಸ್ ಆಗಿದ್ದಾರೆ. ಅರ್ಜುನ್ ಕಪೂರ್ ಡೇಟಿಂಗ್, ಬ್ರೇಕಪ್ ವಿಷಯ ಸದಾ ಹಾಟ್ ಟಾಪಿಕ್ ಆಗಿಯೇ ಇರುತ್ತದೆ.

ಇದಾದ ಬಳಿಕ ಇದೀಗ ಅರ್ಜುನ್ ಕಪೂರ್ ಬೇರೆಯವರ ಜೊತೆ, ಮಲೈಕಾ ಇನ್ನೊಬ್ಬರ ಜೊತೆ ಡೇಟಿಂಗ್‌ನಲ್ಲಿ ಇದ್ದಾರೆ ಎನ್ನುವ ಗಾಳಿಸುದ್ದಿ ಹರಿದಾಡುತ್ತಲೇ ಇದೆ. ಇದರ ನಡುವೆಯೇ, ಮಾಷಾಬ್ಲೆ ಇಂಡಿಯಾ ಜೊತೆಗಿನ ಸಂದರ್ಶನದಲ್ಲಿ ಅರ್ಜುನ್ ಕಪೂರ್ ಅವರಿಗೆ, ತಡರಾತ್ರಿಯ ಸ್ನೇಹಿತರಿಗೆ ನೀವು ಯಾವುದಾದರೂ ಮಧ್ಯರಾತ್ರಿ ಮೂರು ಗಂಟೆಗೆ ಮೆಸೇಜ್ ಮಾಡಿದ್ರಾ ಎಂದು ನಿರೂಪಕಿ ಕೇಳಿದ್ದಾರೆ. ಆ ಬಳಿಕ, ಅವರು ಪ್ರಶ್ನೆಯನ್ನು ಸ್ವಲ್ಪ ಬದಲಿಸಿ, ನೀವು ಎಂದಾದರೂ ತಡರಾತ್ರಿ ನಿಮ್ಮ ಎಕ್ಸ್‌ಗೆ ಮೆಸೇಜ್ ಮಾಡುತ್ತಿರುವಿರಾ ಎಂದು ಪ್ರಶ್ನಿಸಿದಾಗ, ಅರ್ಜುನ್ ಕಪೂರ್ ಜೋರಾಗಿ ನಗುತ್ತಾ, ಈ ಗುಂಪಿನಲ್ಲಿ ಇರುವ ಯಾರೇ ಆಗ್ಲಿ ಎಕ್ಸ್‌ಗಳಿಗೆ ಮಧ್ಯರಾತ್ರಿ ಮೆಸೇಜ್ ಮಾಡಿಲ್ಲ ಎಂದು ಸುಳ್ಳು ಹೇಳುವ ಧೈರ್ಯ ತೋರುವಿರಾ ಎನ್ನುವ ಮೂಲಕ ಇಂದಿಗೂ ಮಧ್ಯರಾತ್ರಿ ಮೂರು ಗಂಟೆಗೆ ಮಲೈಕಾ ಅರೋರಾ ಅವರಿಗೆ ಮೆಸೇಜ್ ಮಾಡುತ್ತಿರುವುದಾಗಿ ಪರೋಕ್ಷವಾಗಿ ಹೇಳಿದ್ದಾರೆ.

ಮೊನ್ನೆಯಷ್ಟೇ ಮಲೈಕಾ ಕೂಡ ಕುತೂಹಲದ ಪೋಸ್ಟ್ ಶೇರ್ ಮಾಡಿದ್ದರು. ಅದರಲ್ಲಿ ಸಿಂಗಲ್, ಇನ್ ರಿಲೇಷನ್ ಎನ್ನುವ ಆಯ್ಕೆ ಇದೆ. ಎರಡನ್ನೂ ಖಾಲಿ ಬಿಟ್ಟಿರುವ ನಟಿ ಮೂರನೆಯದ್ದಕ್ಕೆ ಕ್ಲಿಕ್ ಮಾಡಿದ್ದರು. ಅದರಲ್ಲಿ ಹ್ಹೆಹ್ಹೆಹ್ಹೆ ಎಂದು ಬರೆಯಲಾಗಿತ್ತು. ಹಾಗಿದ್ರೆ ನಟಿ ಏನು ಹೇಳಲು ಹೊರಟಿದ್ದಾರೆ ಎಂದು ಅಭಿಮಾನಿಗಳು ತಲೆ ಕೆಡಿಸಿಕೊಳ್ಳುತ್ತಿದ್ದಾರೆ. ಅರ್ಜುನ್ ಕಪೂ ರ್ ತಾವು ಇನ್ನು ಸಿಂಗಲ್ ಎಂದು ಹೇಳಿಕೊಂಡ ಬಳಿಕ ನಟಿ ವ್ಯಂಗ್ಯವಾಡುವ ರೀತಿಯಲ್ಲಿ ಇದನ್ನು ಬರೆದುಕೊಂಡಿರುವುದು ಅಭಿಮಾನಿಗಳ ತಲೆಯನ್ನು ಮತ್ತಷ್ಟು ಬಿಸಿ ಮಾಡಿದೆ. ಅಂದರೆ ಇಬ್ಬರೂ ಇನ್ನೂ ಟಚ್‌ನಲ್ಲಿ ಇದ್ದಾರಾ, ಈಗ ನೋಡಿದ್ರೆ ಅರ್ಜುನ್ ಕಪೂರ್ ಹೀಗೆ ಹೇಳ್ತಾ ಇದ್ದಾರೆ ಎಂದೆಲ್ಲಾ ಅಭಿಮಾನಿಗಳು ತಲೆ ಕೆಡಿಸಿಕೊಳ್ಳುತ್ತಿದ್ದಾರೆ.

ಅಷ್ಟಕ್ಕೂ, ಇವರ ಬ್ರೇಕಪ್ ವಿಷಯ ಹಿಂದೆಯೂ ಈ ವಿಷಯ ಸಾಕಷ್ಟು ಸದ್ದು ಮಾಡಿತ್ತು. ನಂತರ ಇಬ್ಬರೂ ಒಟ್ಟಾಗಿ ಓಡಾಡಿದ್ದರು. ಬಳಿಕ ಒಂದಾದ ಮೇಲೊಂದು ಇನ್‌ಸ್ಟಾ ಪೋಸ್ಟ್ ಹಾಕುವ ನಟಿ, ತಾವು ಒಂಟಿ ಒಂಟಿ ಎಂದು ಒತ್ತಿ ಒತ್ತಿ ಹೇಳುತ್ತಿದ್ದಾರೆ. ಸಾಲದು ಎನ್ನುವುದಕ್ಕೆ ಕೆಲವು ದಿನಗಳ ಹಿಂದೆ ಟಿ–ಷರ್ಟ್ ಮೇಲೆಯೂ ಅದೇ ಅರ್ಥ ಕೊಡುವ ಬರಹ ಬರೆದುಕೊಂಡಿದ್ದರು. ನಾನೀಗ ಬೋರಿಂಗ್ ಬೇಬಿ. ದುಡ್ಡು ಮಾಡುವುದು, ಮನೆಗೆ ಬರುವುದು ಅಷ್ಟೇ ಕೆಲಸ ಎಂದಿದ್ದರು. ಇದಾಗಲೇ ಡ್ರಿಂಕ್ಸ್ ಕೂಡ ಮಾಡುವುದಿಲ್ಲ ಎಂದು ನಟಿ ಶಪಥ ಮಾಡಿದ್ದರು. ಆದರೆ ಈ ಟಿ–ಷರ್ಟ್ ಮೇಲೆ ಬರೆದುಕೊಂಡಿರುವುದು ಸಕತ್ ವೈರಲ್ ಜೊತೆ ಟ್ರೋಲ್ ಕೂಡ ಆಗುತ್ತಿದೆ. ಹತ್ತು ವರ್ಷ ಚಿಕ್ಕವನಾದ ಮೇಲೆ ಈಗ ಇನ್ನೆಷ್ಟು ವರ್ಷ ಚಿಕ್ಕವನನ್ನು ಹುಡುಕುತ್ತಿರುವೆ ಎಂದು ಪ್ರಶ್ನಿಸುತ್ತಿದ್ದಾರೆ. ಬೋರ್ ಆದರೆ, ಅದನ್ನು ಹೀಗೆಲ್ಲಾ ತೋರಿಸಿಕೊಳ್ಳಬೇಕಾ? ಇದೇನು ಮೂರನೆಯದ್ದಕ್ಕೆ ಆಫರ್ ಕೊಡ್ತಿದ್ಯಾ ಎಂದೆಲ್ಲಾ ಪ್ರಶ್ನಿಸುತ್ತಿದ್ದಾರೆ.



# ನನ್ನ ಮ್ಯಾನೇಜರ್ ಆಗಿ ಇಟ್ಕೋ





ಕನ್ನಡದ ಹಿರಿಯ ನಟ ಅಶೋಕ್ ಅವರು ಸಂದರ್ಶನದಲ್ಲಿ ಮಾತನಾಡಿದ್ದು ಬಹಳಷ್ಟು ವೈರಲ್ ಆಗುತ್ತಿದೆ. ರಂಗನಾಯಕಿ, ತಾಯಿಯ ಮಡಿಲಲ್ಲಿ, ಭಾಗ್ಯವಂತರು, ಧರ್ಮಸೆರೆ ಸೇರಿದಂತೆ ಹಲವು ಕನ್ನಡ ಚಿತ್ರಗಳಲ್ಲಿ ನಟಿಸಿರುವ ನಟ ಅಶೋಕ್ ಅವರು ಅಪರೂಪಕ್ಕೆ ಎಂಬಂತೆ ಮಾತನಾಡಿದ್ದಾರೆ. ಅಶೋಕ್ ಹಾಗೂ ಏಷ್ಯಾದ ಸೂಪರ್ ಸ್ಟಾರ್ ನಟ ರಜನಿಕಾಂತ್ ಅವರಿಬ್ಬರೂ ಒಂದು ಕಾಲದಲ್ಲಿ ಸಹಪಾಠಿಗಳು, ಆತ್ಮೀಯ ಸ್ನೇಹಿತರು ಎಂಬ ಸಂಗತಿ ಅಚ್ಚರಿ ಎನಿಸಿದರೂ ಸತ್ಯ!

ಈ ಬಗ್ಗೆ ಮಾತನಾಡುತ್ತ ಅಶೋಕ್ ಅವರು 'ರಜನಿಕಾಂತ್ ಹಾಗು ನಾನು ಚೆನ್ನೈನಲ್ಲಿ ನಟನಾ ತರಬೇತಿ ಸ್ಕೂಲಿಗೆ ಒಟ್ಟಿಗೇ ಸೇರಿಕೊಂಡಿದ್ದೆವು. ಅಲ್ಲಿ ಒಟ್ಟಿಗೇ ಇರುತ್ತಿದ್ದ ನಾವು ಆತ್ಮೀಯ ಸ್ನೇಹಿತರು. ಈಗಲೂ ಕೂಡ ಸಿಕ್ಕಾಗ ಅದೇ ಸ್ನೇಹ–ಸಂಬಂಧ ಉಳಿದುಕೊಂಡಿದೆ. ಆದರೆ, ಇಂದು ಆತ ಸೂಪರ್ ಸ್ಟಾರ್. ಅಂದು ಆತ ನಾನು ವಜ್ರಮುನಿ ತರಾನೇ ಪ್ರಭಾಕರ್ ತರಾನೋ ಇಲ್ಲ ಶಕ್ತಿ ಪ್ರಸಾದ್ ತರಾನೋ ವಿಲನ್ ಆಗ್ತೀನಿ, ನೀನು ಹೀರೋ ಆಗ್ತೀಯ.. ನೀನು ನನ್ನ ಮ್ಯಾನೇಜರ್ ಆಗಿ ಇಟ್ಕೋಬೇಕು ಅಂದಿದ್ದ..' ಎಂದಿದ್ದಾರೆ.

ಪ್ರಶ್ನೆಯೊಂದಕ್ಕೆ ಉತ್ತರಿಸುತ್ತ ನಟ ಅಶೋಕ್ 'ಅವ್ನು ಇಷ್ಟು ದೊಡ್ಡ ಸ್ಟಾರ್ ಆಗ್ತಾನೆ ಅಂತ ನಾನು ಹಾಗಿರಲಿ, ಸ್ವತಃ ಆತನೇ ಅಂದುಕೊಂಡಿರಲಿಲ್ಲ. ಚೆನ್ನೈ ಆಕ್ಟಿಂಗ್ ಸ್ಕೂಲ್ ಮುಗಿದ ಮೇಲೆ ಜೀವನ ನಮ್ಮಿಬ್ಬರನ್ನೂ ಬೇರೆಬೇರೆ ಕಡೆ ಕರೆದುಕೊಂಡು ಹೋಯ್ತು. ಆದರೆ, ಅಂದು ನೋಡಿದಾಗ ಅವನು ಈ ಮಟ್ಟಕ್ಕೆ ಬೆಳೆಇದ್ದು ಆಶ್ಚರ್ಯ ಹುಟ್ಟಿಸುತ್ತದೆ. ಆತನಲ್ಲಿ ಈ ಮಟ್ಟಿಗೆ ಬೆಳೆಯುವ ವಿಶೇಷ ಗುಣ ಅಂದು ಕಾಣಿಸುತ್ತಿರಲಿಲ್ಲ. ಆದರೆ, ಎಲ್ಲ ತರಹದ ಪಾತ್ರ ಮಾಡುವಂತಹ ಸಾಮರ್ಥ್ಯ, ಸ್ಪಾರ್ಕ್ ಇತ್ತು..' ಎಂದಿದ್ದಾರೆ ಅಶೋಕ್.

ನನಗೆ ರಜನಿಕಾಂತ್ ಬೆಳವಣಿಗೆ ಒಂದು ಪವಾಡ ಅಂತಲೇ ಅನ್ನಿಸುತ್ತದೆ. ಆ ಬಗ್ಗೆ ನಾವಿಬ್ಬರೂ ಈಗ ಸಿಕ್ಕಾಗಲೂ ಕೂಡ ಮಾತನಾಡಿಕೊಳ್ಳುತ್ತೇವೆ. ಆತ 'ನನಗೆ ಅವರು ಅವಕಾಶ ಕೊಟ್ಟರು, ಸಿನಿಮಾ ಸಕ್ಸಸ್ ಆಯ್ತು. ನಾನು ಇಷ್ಟು ಅವಕಾಶ, ಪ್ರೀತಿ ಸಿಉತ್ತೆ ಅಂತ ಅಂದುಕೊಂಡಿರಲಿಲ್ಲ. ದೇವರು ಕೊಟ್ಟಿದ್ದು ಎಲ್ಲವೂ, ಅವನೇ ನನ್ನನ್ನು ಎಲ್ಲೆಲ್ಲಿಗೋ ಕರೆದುಕೊಂಡು ಹೋಗುತ್ತಿದ್ದಾನೆ ಅಂತಾನೆ' ಎಂದಿದ್ದಾರೆ ನಟ ಅಶೋಕ್.

ಆದರೆ ನಟ ಅಶೋಕ್ ಅದೊಂದು ವಿಷಯ ಹೇಳಲು ಮರೆಯಲಿಲ್ಲ. ರಜನಿಕಾಂತ್ ತರ ಬೇರೆ ಯಾರೇ ಬೆಳೆದಿದ್ದರೂ ಈಗಲೂ ಅಷ್ಟು ಸಿಂಪಲ್ ಇರೋದು ಕಷ್ಟವೇ ಅನ್ನಿಸುತ್ತದೆ. ಅಷ್ಟು ಹಣ, ಕೀರ್ತಿ ಎಲ್ಲವೂ ಇದ್ದಾಗ ಬೇರೆ ಯಾರೇ ಆದರೂ ಇನ್ನೂ ಹೆಚ್ಚಿನ ಅದೂ ಇದೂ ಸುಖವನ್ನು ಅರಿಸಿಕೊಂಡು ಹೋಗುತ್ತಿದ್ದರು. ಎಲ್ಲೋ ಏನೋ ಇದೆ ಅಂತ ಸುಖ ಅರಸಿಕೊಂಡು ಹೋಗಿ ಅದೆಷ್ಟೂ ಸ್ಟಾರ್‌ಗಳು ಅವನತಿ ಹೊಂದಿದ್ದಾರೆ. ಆದರೆ ನಟ ರಜನಿ ಹಾಗಲ್ಲ..' ಎಂದಿದ್ದಾರೆ ಅಶೋಕ್.

# ಪುನೀತ್‌ನಂತೆ ನನಗೂ ಹಾರ್ಟ್ ಅಟ್ಯಾಕ್ ಆಗಿತ್ತು, ಅದು ನಮ್ಮ ಹೆರಿಡಿಟರಿ ಸಮಸ್ಯೆ: ವಿನೋದ್ ರಾಜ್!

ಕನ್ನಡದ ನಟ ಹಾಗೂ ನಟಿ ಲೀಲಾವತಿ ಮಗ ವಿನೋದ್ ರಾಜ್ ಅವರು ಕಲಾಮಾಧ್ಯಮ ಸಂದರ್ಶನದಲ್ಲಿ ತಮ್ಮ ವೈಯಕ್ತಿಕ ಜೀವನದ ಹತ್ತು ಹಲವು ಸೀಕ್ರೆಟ್‌ಗಳನ್ನು ಬಹಿರಂಗ ಮಾಡಿರುವದು ಗೊತ್ತೇ ಇದೆ. ಅವರು ಕಲಾಮಾಧ್ಯಮದ ನಿರೂಪಕ ಪರಮ್ ಜೊತೆ ಮಾತನಾಡುತ್ತ ತಮಗೂ ಕೂಡ ಹಾರ್ಟ್ ಅಟ್ಯಾಕ್ ಆಗಿತ್ತು ಎಂಬ ಸಂಗತಿ ಬಹಿರಂಗ ಪಡಿಸಿದ್ದಾರೆ. ಅಮ್ಮ ಲೀಲಾವತಿಯವರನ್ನು ಮಾತುಮಾತಿಗೂ ನೆನಪಿಸಿಕೊಳ್ಳುವ ವಿನೋದ್ ರಾಜ್ ಅವರು, ಅಮ್ಮ ಮಾಡಿಟ್ಟು ಹೋಗಿದ್ದನ್ನು ನಾನು ಮ್ಯಾನೇಜ್ ಮಾಡುತ್ತಿದ್ದೇನೆ ಅಷ್ಟೇ ಅಂದಿದ್ದಾರೆ.

ಹಾಗಿದ್ದರೆ ನಟ ವಿನೋದ್ ರಾಜ್ ಅವರು ಕಲಾಮಾಧ್ಯಮ ಸಂದರ್ಶನದಲ್ಲಿ ಅದೇನು ಹೇಳಿದ್ದಾರೆ ಎಂಬ ಕುತೂಹಲಕ್ಕೆ ಇಲ್ಲಿದೆ ನೋಡಿ ಉತ್ತರ.. ವಿನೋದ್ ರಾಜ್ ಅವರು 'ಪುನೀತ್ ರಾಜ್‌ಕುಮಾರ್ (ಕಣಟಿಜಜಣ ಖಚಿರಿಇಣಟಚಿಡಿ) ಅವರಿಗೆ ಆದಂತೆ ನನಗೂ ಕೂಡ 47ನೇ ವಯಸ್ಸಿನಲ್ಲೇ ಹಾರ್ಟ್ ಅಟ್ಯಾಕ್ ಆಗಿತ್ತು. ಅದು ಹೆರಿಡಿಟರಿ ಸಮಸ್ಯೆ, ಹೊಡಿತದೆ ಅದು. ಮೂಲನೇ ಸರಿಯಿಲ್ಲ. ಅದು ಮ್ಯಾನ್ಯುಫ್ಯಾಕ್ಚರ್ ಡಿಫೆಕ್ಟಾ? ಏನಪ್ಪಾ ಭಗವಂತ.. ' ಎಂದಿದ್ದಾರೆ. ಜೊತೆಗೆ, ಈಗಲೂ ನಾನು ಹಾರ್ಟ್‌ಗೆ ಸಂಬಂಧಿಸಿದ ಮಾತ್ರೆ ತೆಗೆದುಕೊಳ್ಳುತ್ತಲೇ ಇದ್ದೇನೆ.



ದಿನಕ್ಕೆ 11–12 ಮಾತ್ರೆ ತಗೋತಾ ಇದೀನಿ. ನಾವೆಲ್ಲ ಒಂಥರಾ ಆಲ್ ಇಂಡಿಯಾ ಹಾರ್ಟ್ ಅಟ್ಯಾಕ್ ಕಂಪನಿ ಅಧ್ಯಕ್ಷರಾಗ್ಬಿಟ್ಟಿದೀವಿ ನಾವೆಲ್ಲಾ..' ಎಂದಿದ್ದಾರೆ. ಜೊತೆಗೆ, ಹೈ ಪ್ರೊಟೀನ್ ಜೀನ್ಸ್ ಇರುತ್ತೆ, ಅದೇನೂ ವಾಡಕೋಗಾಲ್ಲ. ಊಟ ಮಾಡ್ಲೇಬೇಕು ಅನ್ನೋ ಎಂಜೈಮ್ಸ್ ಕ್ರಿಯೇಟ್ ಮಾಡುತ್ತೆ ಅದು, ಅವ್ರ ತಪ್ಪಲ್ಲ ಅದು.

ನಮಗೆ ಅರಿವಿಲ್ಲದೇ ನಾವು ಅದನ್ನು ತಿನ್ಬೇಕು ಅನ್ನೋ ತರ ಆಗಿದೆ. ಆವಾಗ ನಾವು ಸೆನ್ಸ್ ಇಟ್ಕೊಂಡು ಫುಡ್ ಬ್ಯಾಲೆನ್ಸ್ ಮಾಡ್ಬೇಕು, ಇಲ್ಲಾ ಅಂದ್ರೆ ಕಷ್ಟ ಆಗುತ್ತೆ ಅಷ್ಟೇ..' ಎಂದಿದ್ದಾರೆ ವಿನೋದ್ ರಾಜ್. ಅಂದಹಾಗೆ, ಬಹುತೇಕರಿಗೆ ಗೊತ್ತಿರುವಂತೆ ವಿನೋದ್ ರಾಜ್ ಹಾಗೂ ಲೀಲಾವತಿ ಮನೆ ಬೆಂಗಳೂರಿನ ನೆಲಮಂಗಲದ ಸಮೀಪ ಸೋಲದೇವನಹಳ್ಳಿಯಲ್ಲಿದೆ.

ಅಲ್ಲಿ ನಟ ಲೀಲಾವತಿಯವರ ತೋಟ ಹಾಗೂ ಮನೆ ಇದೆ. ಲೀಲಾವತಿ ಅಗಲಿದ ಮೇಲೆ ಅವರ ಮಗ ವಿನೋದ್ ರಾಜ್ ಅವರು 'ತಾಯಿಗೆ ತಕ್ಕ ಮಗ'ನಾಗಿ ಅಮ್ಮ ಮಾಡಿಟ್ಟ ಆಸ್ತಿಯನ್ನು ಜೋಪಾನವಾಗಿ ನೋಡಿಕೊಳ್ಳುತ್ತಿದ್ದಾರೆ. ಜೊತೆಗೆ, ಅಮ್ಮನ ಮಾತಿನಂತೆ ಸುತ್ತಮುತ್ತಲಿನ ಜನರಿಗೆ ಸಹಾಯ ಹಸ್ತ ಚಾಚುತ್ತಿದ್ದಾರೆ. ಅಷ್ಟೇ ಅಲ್ಲ, ಸ್ವಂತ ಹಣದಲ್ಲಿ ಸರ್ಕಾರಿ ರಸ್ತೆಯನ್ನು ರಿಪೇರಿ ಮಾಡಿಸಿ ಮಾದರಿ ಎನಿಸಿದ್ದಾರೆ.



# ಚೆಲ್ವಿ ನಿಜಕ್ಕೂ ಚೆಲುವೆ... ಏನಂತೀರಾ?

ಲಕ್ಷ್ಮೀ ನಿವಾಸ ಧಾರಾವಾಹಿಯ ಪ್ರಮುಖ ಪಾತ್ರಗಳಲ್ಲಿ ಒಂದು ವೆಂಕಿ ಮತ್ತು ಚೆಲುವಿಯ ಪಾತ್ರ. ಮಾತು ಬಾರದ ವೆಂಕಿಯನ್ನು ತುಂಬಾನೆ ಪ್ರೀತಿ ಮಾಡುವ ಚೆಲುವಿಯ ಮುಗ್ಧ ಪಾತ್ರ ವೀಕ್ಷಕರಿಗೆ ತುಂಬಾನೆ ಇಷ್ಟ. ಸದ್ಯಕ್ಕಂತೂ ಧಾರಾವಾಹಿಯಲ್ಲಿ ಇಮೋಶನಲ್ ಎಪಿಸೋಡ್ ನಡೆಯುತ್ತಿದ್ದು, ಜನ ಇವರ ನಟನೆಯನ್ನ ಮೆಚ್ಚಿಕೊಂಡಿದ್ದಾರೆ.

ಲಕ್ಷ್ಮೀ ನಿವಾಸ ಧಾರಾವಾಹಿಯಲ್ಲಿ ಚೆಲ್ವಿ ಪಾತ್ರ ಮಾಡುವ ಅಶ್ವಿನಿ ಮೂರ್ತಿ, ಸೀರಿಯಲ್ ನಲ್ಲಿ ಎಷ್ಟು ಮುಗ್ಧ ಸಿಂಪಲ್ ಅನ್ನೋದು ಗೊತ್ತೇ ಇದೆ. ಆದರೆ ರಿಯಲ್ ಲೈಫಲ್ಲಿ ಇವರು ಸಿಂಪಲ್ ಅಲ್ವೇ ಅಲ್ಲ. ಯಾಕಂದ್ರೆ ಇವರು ಮೇಕಪ್ ಆರ್ಟಿಸ್ಟ್ ಆಗಿದ್ದು, ತುಂಬಾನೆ ಸ್ಟೈಲಿಶ್ ಆಗಿದ್ದಾರೆ.

ಸೋಶಿಯಲ್ ಮೀಡೀಯಾದಲ್ಲಿ ಆಕ್ಟೀವ್ ಆಗಿರುವ ಅಶ್ವಿನಿ, ಹೆಚ್ಚಾಗಿ ತಮ್ಮ ಫೋಟೊಗಳನ್ನು ಶೇರ್ ಮಾಡುತ್ತಲೇ ಇರುತ್ತಾರೆ. ಇದಿಗ ಹೊಸದಾಗಿ ಗೋಲ್ಡನ್ ಬಣ್ಣದ ಗೌನ್ ನಲ್ಲಿ ನಟಿ ಕಾಣಿಸಿಕೊಂಡಿದ್ದು, ಅಪ್ಸರೆಯಂತೆ ಕಾಣಿಸ್ತಿದ್ದಾರೆ. ಲೋಕದ ಚೆಲುವೆಲ್ಲಾ ಇವರ ಮುಖದಲ್ಲೇ ಬಂದು ಕೂತಂತೆ ಕಾಣಿಸ್ತಿದೆ.

ಸೋಶಿಯಲ್ ಮೀಡೀಯಾದಲ್ಲಿ ಬರೋಬ್ಬರಿ 91.2 ಸಾವಿರ ಫಾಲೋವರ್ಸ್ ಗಳನ್ನು ಹೊಂದಿರುವ ಅಶ್ವಿನಿಯವರ ಫೋಟೊಗಳನ್ನು ಅಭಿಮಾನಿಗಳು ಸಿಕ್ಕಾಪಟ್ಟೆ ಇಷ್ಟಪಟ್ಟಿದ್ದು , ಬ್ಯೂಟಿಫುಲ್ ಮುದ್ದು ಮುಖದ ದೇವತೆ, ಚಿನ್ನದ ಗೊಂಬೆ ನೋಡತಾ ಇದಿನಲ್ಲ, ಆ ಸೌಂದರ್ಯ ಲೋಕದಿಂದ ಜಾರಿದೆ ನಿನ್ನ ನೋಡ್ಲೋಕೆ ನೂರು ಕಣ್ಣು ಸಾಲದೇ, ಸೊ ಬ್ಯೂಟಿಫುಲ್ ಸುಂದರಿ ಎಂದೆಲ್ಲಾ ಯುವಕರು ಕಾಮೆಂಟ್ ಮಾಡಿದ್ದಾರೆ.

ಇನ್ನು ಕರಿಯರ್ ವಿಷ್ಯಕ್ಕೆ ಬಂದ್ರೆ ಇವರು ಲಕ್ಷ್ಮಿ ನಿವಾಸಕ್ಕೂ ಈ ಹಿಂದೆ ಹಲವು ಸೀರಿಯಲ್ ಗಳಲ್ಲಿ ನಟಿಸಿದ್ದಾರೆ. ಲಕ್ಷಣ ಸೀರಿಯಲ್ ನಲ್ಲಿ ನಕ್ಷತ್ರಾ ಅಕ್ಕ ಆಗಿ ಇವರು ನಟಿಸಿದ್ದರು, ಅಷ್ಟೇ ಅಲ್ಲ ಮರಳಿ ಮನಸಾಗಿದೆ, ಬಯಸದೆ ಬಳಿ ಬಂದೆ ಧಾರಾವಾಹಿಯಲ್ಲೂ ಅಶ್ವಿನಿ ನಟಿಸಿದ್ದರು. ಸದ್ಯ ಲಕ್ಷೀ ನಿವಾಸದಲ್ಲಿ ಚೆಲ್ವಿ ಪಾತ್ರಕ್ಕೆ ಜೀವ ತುಂಬುತ್ತಿದ್ದಾರೆ.

ಇನ್ನು ನಟಿಯಾಗೋಕೂ ಮುನ್ನವೇ ಅಶ್ವಿನಿಯವರು ಬ್ಯುಸಿನೆಸ್ ವುಮೆನ್. ಇವರೊಬ್ಬ ಕಾಸ್ಮಟಾಲಜಿಸ್ಟ್, ಇವರು ತಮ್ಮದೇ ಆದ ಬ್ಯೂಟಿ ಸಲೂನ್ ಕೂಡ ಹೊಂದಿದ್ದಾರೆ. ರಾಜಾಜಿನಗರದಲ್ಲಿ ಗ್ಲಾಮ್ ಹೌಸ್ ಯುನಿಸೆಕ್ಸ್ ಬ್ಯೂಟಿ ಸಲೂನ್ ಮಾಲೀಕರು ಇವರು. ಹೇರ್, ಸ್ಕಿನ್, ನೈಲ್ ಆರ್ಟ್, ಮೇಕಪ್ ಎಲ್ಲವನ್ನೂ ಇಲ್ಲಿ ಮಾಡಿ ಕೊಡ್ತಾರೆ.

ಇನ್ನು ಇವರ ಬ್ಯೂಟಿ ಸಲೂನ್ ಭಾರಿ ಜನಪ್ರಿಯತೆ ಗಳಿಸಿದ್ದು, ನಟಿಯರಾದ ವಿಜಯಲಕ್ಷ್ಮೀ, ಸ್ವಾತಿ, ಅಭಿಜ್ಞಾ ಭಟ್, ರುಹಾನಿ ಶೆಟ್ಟಿ, ಪೂಜಾ ದುಗ್ಗಣ್ಣ, ಬಿಗ್ ಬಾಸ್ ಖ್ಯಾತಿಯ ತನಿಷಾ ಕುಪ್ಪಂಡ ಕೂಡ ಭೇಟಿ ನೀಡಿ, ಸೇವೆ ಪಡೆದು ಕೊಂಡಿದ್ದಾರೆ.

# ಐಸಿಸಿ ಚಾಂಪಿಯನ್ಸ್ ಟ್ರೋಫಿಗೆ ಭಾರತ ತಂಡ ಪಾಕಿಸ್ತಾನಕ್ಕೆ ಭೇಟಿ ನೀಡುವುದಿಲ್ಲ: ಸ್ಪಷ್ಟನೆ

**ನವದೆಹಲಿ:** ಇಂದು ನಡೆಯಲಿರುವ ಪ್ರಮುಖ ಐಸಿಸಿ ಸಭೆಗೆ ಮುಂಚಿತವಾಗಿ ಭಾರತವು ಪಾಕಿಸ್ತಾನಕ್ಕೆ ಭೇಟಿ ನೀಡುವ ಸಾಧ್ಯತೆಯಿಲ್ಲ ಎಂದು ವಿದೇಶಾಂಗ ಸಚಿವಾಲಯ (ಎಂಇಎ) ಶುಕ್ರವಾರ ದೃಢಪಡಿಸಿದೆ.

ಮುಂದಿನ ವರ್ಷ ನಡೆಯಲಿರುವ ಚಾಂಪಿಯನ್ಸ್ ಟ್ರೋಫಿಯಲ್ಲಿ ಭಾಗವಹಿಸಲು ಭಾರತೀಯ ಕ್ರಿಕೆಟ್ ತಂಡ ಪಾಕಿಸ್ತಾನಕ್ಕೆ ಪ್ರಯಾಣಿಸುವುದಿಲ್ಲ ಎಂದು ಬಿಸಿಸಿಐ ಈ ಹಿಂದೆ ತನ್ನ ನಿಲುವನ್ನು ಸ್ಪಷ್ಟಪಡಿಸಿದ ನಂತರ ಈ ಬೆಳವಣಿಗೆ ನಡೆದಿದೆ.

ಪಾಕಿಸ್ತಾನಕ್ಕೆ ಭೇಟಿ ನೀಡದ ಭಾರತ ತಂಡವು ಭಯೋತ್ಪಾದನೆ ಮತ್ತು ಕ್ರೀಡೆ ಒಟ್ಟಿಗೆ ಹೋಗಲು ಸಾಧ್ಯವಿಲ್ಲ ಎಂಬ ಇಸ್ಲಾಮಾಬಾದ್ ಬಗ್ಗೆ ನವದೆಹಲಿಯ ವಿದೇಶಾಂಗ ನೀತಿಗೆ ಅನುಗುಣವಾಗಿದೆ.

ತೇಜಸ್ವಿ ಯಾದವ್ ಅವರು ಪಾಕಿಸ್ತಾನದ ಬಗ್ಗೆ ವಿದೇಶಾಂಗ ನೀತಿಗೆ ಸಂಬಂಧಿಸಿದಂತೆ ದೇಶದ ನಿಲುವಿಗೆ ವಿರುದ್ಧವಾಗಿ ಹೋದರು ಮತ್ತು ಭಾರತೀಯ ಕ್ರಿಕೆಟ್ ತಂಡವು ಪಾಕಿಸ್ತಾನಕ್ಕೆ ಏಕೆ ಭೇಟಿ ನೀಡಬಾರದು ಎಂದು ಪ್ರಶ್ನಿಸಿದರು.

"ಭಾರತ ಏಕೆ ಅಲ್ಲಿಗೆ (ಪಾಕಿಸ್ತಾನ) ಹೋಗಬಾರದು? ಆಕ್ಷೇಪಣೆ ಏನು? ಪ್ರಧಾನಿ ಬಿರಿಯಾನಿ ತಿನ್ನಲು ಅಲ್ಲಿಗೆ ಹೋಗಬಹುದಾದರೆ, ಭಾರತ ತಂಡ ಪ್ರಯಾಣಿಸಿದರೆ ಒಳ್ಳೆಯದು, ಇದು ಏಕೆ ಒಳ್ಳೆಯದಲ್ಲ" ಎಂದು ಬಿಹಾರದ ಮಾಜಿ ಉಪಮುಖ್ಯಮಂತ್ರಿ ತೇಜಸ್ವಿ ಯಾದವ್ ಪ್ರಶ್ನಿಸಿದ್ದಾರೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-21ww Email-mussanje2010@gmail.com, Phone: **9448074878**